ಸಂಪುಟ: 21, ಸಂಚಿಕೆ: 223, ಪುಟಗಳು: 8, ಬುಧವಾರ, 22 ಮೇ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

### ಸುಭಾಷಿತ

ಒಂದು ಲಿಲ್ಲಿಯಾಗಲಿ ಅಥವಾ ಗುಲಾಬಿಯಾಗಲಿ ಎಂದಿಗೂ ನಟಿಸುವುದಿಲ್ಲ. ತನ್ನ ಮೂಲಗುಣಕ್ಕೆ ತಕ್ಕಂತೆ ಇರುವುದೇ ಅದರ ಸೌಂದರ್ಯದ ಗುಟ್ಟು.

। ಜಿಡ್ಡು ಕೃಷ್ಣಮೂರ್ತಿ

### ಪಂಚಾಂಗ

(ಬುಧವಾರ 22, ಮೇ-2024)

- ರಾಹುಕಾಲ : 12.20 ರಿಂದ 1.55
- ಗುಳಿಕಕಾಲ : 10.44 ರಿಂದ 12.20
- ಯಮಗಂಡಕಾಲ : 7.32 ರಿಂದ 9.08
- ಬುಧವಾರ, ಚತುರ್ದಶಿ, ಸ್ವಾತಿ ನಕ್ಷತ್ರ
- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ವೈಶಾಖ ಮಾಸ, ಶುಕ್ಲ ಪಕ್ಷ,

# DYSP ಬ್ಯಾಂಕ್ ಖಾತೆಗೆ ಕನ್ನ

## 15 ಲಕ್ಷಕ್ಕೂ ಅಧಿಕ ಹಣ ಎಗರಿಸಿದ ಸೈಬರ್ ಕಳ್ಳರು!





**ಹಾಸನ:** ಸಿನಿಮೀಯ ರೀತಿಯಲ್ಲಿ ಡಿವೈಎಸ್‌ಪಿ ಒಬ್ಬರ ಬ್ಯಾಂಕ್ ಖಾತೆಗೆ ಕನ್ನ ಹಾಕಿ ಸೈಬರ್ ಕಳ್ಳರು 15 ಲಕ್ಷಕ್ಕೂ ಅಧಿಕ ಹಣ ಎಗರಿಸಿರುವ ಘಟನೆ ಹಾಸನದಲ್ಲಿ ನಡೆದಿದೆ. ಹಾಸನ ಉಪವಿಭಾಗದ ಪೊಲೀಸ್ ಉಪಾಧೀಕ್ಷಕ ಪಿ.ಕೆ.ಮುರಳೀಧರ್ ಅವರ ಖಾತೆಯಿಂದಲೇ 15,98,761 ಲಕ್ಷ ರೂ. ಹಣ ವರ್ಗಾವಣೆ ಮಾಡಿಕೊಂಡು ಸೈಬರ್ ಖದೀಮರು ವಂಚನೆ ಮಾಡಿದ್ದಾರೆ. ಪುಟ 2

# ರೇವ್ ಪಾರ್ಟಿ ಸಿಸಿಬಿಗೆ

## ಇಲ್ಲಿ ಡ್ರಗ್ಸ್ ಒಂದೇ ಅಲ್ಲ ಬೇರೆ ದಂಧೆಯೂ ನಡೀತಿತ್ತು






**ಬೆಂಗಳೂರು:** ಎಲೆಕ್ಟ್ರಾನಿಕ್ ಸಿಟಿ ಹೊರವಲಯದಲ್ಲಿ ಮೇ.19 ರಂದು ನಡೆದಿದ್ದ ರೇವ್ ಪಾರ್ಟಿ ಪ್ರಕರಣವನ್ನು ಅಧಿಕೃತವಾಗಿ ಸಿಸಿಬಿಗೆ ವರ್ಗಾವಣೆ ಮಾಡಲಾಗಿದೆ. ಈ ಬಗ್ಗೆ ಡಿಜಿ ಅಂಡ್ ಐಜಿಪಿ ಅಲೋಕ್ ಮೋಹನ್ ಅಧಿಕೃತ ಆದೇಶ ಹೊರಡಿಸಿದ್ದಾರೆ. ಸದ್ಯ ಸಿಸಿಬಿ ಆಂಟಿ ನಾರ್ಕೊಟಿಕ್ಸ್ ವಿಭಾಗದ ಅಧಿಕಾರಿಗಳಿಂದ ತನಿಖೆ ನಡೆಯುತ್ತಿದೆ. ಇನ್ಸ್‌ಪೆಕ್ಟರ್ ಲಕ್ಷ್ಮೀ ಪ್ರಸಾದ್ ಅವರನ್ನು ತನಿಖಾ ಅಧಿಕಾರಿಯಾಗಿ ನೇಮಕ ಮಾಡಲಾಗಿದೆ. ಪೊಲೀಸ್ ಇಲಾಖೆ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದೆ.

ಮೇ.19ರ ಭಾನುವಾರ ಮಾತ್ರ ರೇವ್ ಪಾರ್ಟಿ ನಡೆದಿದೆ ಎನ್ನಲಾಗುತ್ತಿತ್ತು. ಆದರೆ ತನಿಖೆ ವೇಳೆ ಈ ಪಾರ್ಟಿ ಶನಿವಾರ ಸಂಜೆ ಐದು ಘಂಟೆಯಿಂದ ಶುರುವಾಗಿದ್ದು ಎಂದು ತಿಳಿದುಬಂದಿದೆ. ಪಾರ್ಟಿಯಲ್ಲಿ ಒಟ್ಟು 250ಕ್ಕೂ ಹೆಚ್ಚು ಜನರು ಭಾಗಿಯಾಗಿದ್ದರು ಎಂಬ ಶಂಕೆ ವ್ಯಕ್ತವಾಗಿದ್ದು ಹಲವಾರು ಜನರು ಶನಿವಾರ ಪಾರ್ಟಿಗೆ ಬಂದು ವಾಪಸ್ಸು ಹೋಗಿದ್ದಾರೆ. ಇನ್ನೂ ಕೆಲವರು ಭಾನುವಾರ ಪಾರ್ಟಿಗೆ ಜಾಯಿನ್ ಆಗಿದ್ದಾರೆ. ಪೊಲೀಸ್ ದಾಳಿ ವೇಳೆ ಸಹ ಕೆಲವರು ಎಸ್ಕೇಪ್ ಆಗಿದ್ದಾರೆ. ಸದ್ಯ ಎಸ್ಕೇಪ್ ಆಗಿದ್ದವರನ್ನು ವಿಚಾರಣೆಗೆ ಒಳಪಡಿಸಲು ತೀರ್ಮಾನಿಸಲಾಗಿದೆ.

ಇನ್ನು ಮತ್ತೊಂದು ಅಚ್ಚರಿಯ ಮಾಹಿತಿ ಎಂದರೆ ಈ ರೇವ್ ಪಾರ್ಟಿಯನ್ನು ಬರ್ತಡೆ ಸೆಲೆಬ್ರೇಷನ್ ಹೆಸರಲ್ಲಿ ನಡೆಸಲಾಗುತ್ತಿತ್ತು. ಇಲ್ಲಿ ಡ್ರಗ್ಸ್ ಮಾತ್ರ ಅಲ್ಲ ಸೆಕ್ಸ್ ಸಹ ಇತ್ತು ಎಂಬ ಶಾಕಿಂಗ್ ಮಾಹಿತಿ ತಿಳಿದುಬಂದಿದೆ. ಡ್ರಗ್ಸ್ ಜಾಲದ ಜೊತೆಗೆ ಸೆಕ್ಸ್ ಜಾಲದ ಬಗ್ಗೆ ಸಿಸಿಬಿಗೆ ಕೆಲ ಮಾಹಿತಿಗಳು ಲಭ್ಯವಾಗಿವೆ. ಈ ಹಿನ್ನಲೆ ಪ್ರಕರಣದ ತೀವ್ರತೆ ಹೆಚ್ಚಿದೆ. ವಾಸು ಬರ್ತಡೆ ಪಾರ್ಟಿ ಎಂದು ನೆಪಕ್ಕೆ ಆಯೋಜನೆ ಮಾಡಿದ್ದು ಅಕ್ರಮ ನಡೆಸಲಾಗಿದೆ. ಓರ್ವರಿಗೆ ಇಂತಿಷ್ಟು ಎಂದು ಹಣ ಪಡೆದು ಪಾರ್ಟಿಗೆ ಕರೆಸಿದ್ದಾರೆ. ಸಿಕ್ಕ ಮಾಹಿತಿ ಪ್ರಕಾರ ಓರ್ವನ ಎಂಟ್ರಿಗೆ ಎರಡು ಲಕ್ಷ ಪಡೆಯಲಾಗಿದೆ ಎನ್ನಲಾಗುತ್ತಿದೆ.

### ಪಾರ್ಟಿಗೆ ರಾಜ್ ಭಾವ ಪ್ರಮುಖ ಡ್ರಗ್ಸ್ ಪೆಡ್ಲರ್

**ಈ ಪಾರ್ಟಿಯಲ್ಲಿ ರಾಜ್ ಭಾವ ಎಂಬಾತ ಎಲ್ಲರಿಗೂ ಡ್ರಗ್ಸ್ ತಂದು ನೀಡುತ್ತಿದ್ದ. ಹೊರಗಿನಿಂದ ನೋಡುವವರಿಗೆ ಇದೊಂದು ಮ್ಯೂಸಿಕ್, ಊಟ ಮತ್ತು ಮದ್ಯದ ಪಾರ್ಟಿ ಎನ್ನುವಂತೆ ತೋರುತ್ತಿತ್ತು. ಆದರೆ ಪಾರ್ಟಿಯೊಳಗೆ ವೆರೈಟಿ ವೆರೈಟಿ ಡ್ರಗ್ಸ್ ನೀಡಲಾಗುತ್ತಿತ್ತು. ಸದ್ಯ ವೈದ್ಯಕೀಯ ಪರೀಕ್ಷೆ ವರದಿಗಾಗಿ ಪೊಲೀಸರು ಕಾಯುತ್ತಿದ್ದಾರೆ. ಒಂದು ಸಲ ವೈದ್ಯಕೀಯ ವರದಿ ಬಂದ ನಂತರ ಎಷ್ಟು ಜನರು ಡ್ರಗ್ಸ್ ಸೇವನೆ ಮಾಡಿದ್ದಾರೆ ಎಂಬ ಬಗ್ಗೆ ಮಾಹಿತಿ ಸಿಗಲಿದೆ. ಸಿಸಿಬಿ ಪೊಲೀಸರು ಈಗ ಅಸಲಿ ತನಿಖೆ ಶುರು ಮಾಡಲಿದ್ದಾರೆ.ಸಿಸಿಬಿ ಪೊಲೀಸರಿಗೆ ಕಮಿಷನರ್ ಬಿ ದಯಾನಂದ ಖಡಕ್ ಸೂಚನೆ ನೀಡಿದ್ದು ಪ್ರಕರಣ ಗಂಭೀರವಾಗಿ ಪರಿಗಣಿಸಿ ತನಿಖೆ ನಡೆಸಿ ಎಂದಿದ್ದಾರೆ. ನಗರದಲ್ಲಿ ಇಂತಹ ಡ್ರಗ್ಸ್ ಮತ್ತು ರೇವ್ ಪಾರ್ಟಿಗಳು ನಡೆಯದಂತೆ ಕ್ರಮ ತೆಗೆದುಕೊಳ್ಳಬೇಕು. ಪಾರ್ಟಿ ಆಯೋಜನೆ, ಪಾರ್ಟಿಗೆ ಡ್ರಗ್ಸ್ ಸಪ್ಲೆ, ಪಾರ್ಟಿಗೆ ಸ್ಥಳದ ಅವಕಾಶ ನೀಡುವುದು ಹೀಗೆ ಎಲ್ಲಾ ಮಾದರಿಯಲಿಯೂ ತನಿಖೆ ನಡೆಸುವಂತೆ ಸೂಚನೆ ನೀಡಿದ್ದಾರೆ.**

ಅಲ್ಲದೆ ಪೊಲೀಸರು ಬಂದು ಕೇಳಿದ್ರೆ, ನಾವು ಬರ್ತಡೆಗೆ ಬಂದಿದ್ದೇವೆ. ನಾವೆಲ್ಲರೂ ವಾಸು ಗೆಳೆಯರು ಎಂದು ಹೇಳಬೇಕು ಎಂದು ಹೇಳಿಕೊಡಲಾಗಿತ್ತು. ಅದ್ರಂತೆ ಪೊಲೀಸರು ಪ್ರಶ್ನೆ ಮಾಡಿದಾಗ ವಾಸು ಬರ್ತಡೆಗೆ ಬಂದಿದ್ದೇವೆ ಎಂದು ಎಲ್ಲಿದ್ದವರು ಹೇಳಿಕೆ ನೀಡಿದ್ದರು. ತನಿಖೆ ವೇಳೆ ಬರ್ತಡೆ ಪಾರ್ಟಿ ಸುಳ್ಳು ಎಂಬುದು ಬಯಲಾಗಿದೆ.

# ಹೇಮಾ ಕೂದಲು ಸ್ಯಾಂಪಲ್ ಟೆಸ್ಟ್!

**ಬೆಂಗಳೂರು:** ಇಲ್ಲಿನ ಸಿಂಗೇನ ಅಗ್ರಹಾರ ಬಳಿಯ ಜಿಆರ್ ಫಾರ್ಮ್‌ಹೌಸ್‌ನಲ್ಲಿ ನಡೀತಿದ್ದ ರೇವ್‌ಪಾರ್ಟಿ ಇದೀಗ ತೆಲುಗು ನಟಿ ಹೇಮಾಗೆ ಸಂಕಷ್ಟ ತಂದೊಡ್ಡಿದೆ. ತೆಲುಗು ನಟಿ ಹೇಮಾ ಪಾರ್ಟಿಯಲ್ಲಿ ಇದ್ದದ್ದು ಈಗ ಜಗಜ್ಜಾಹೀರವಾಗಿದೆ. ಈ ಕುರಿತು ಖುದ್ದು ಪೊಲೀಸ್ ಆಯುಕ್ತ ದಯಾನಂದ್, ತೆಲುಗಿನ ಖ್ಯಾತ ನಟಿ ಪಾರ್ಟಿಯಲ್ಲಿ ಇದ್ದಿದ್ದನ್ನು ಬಹಿರಂಗಗೊಳಿಸಿದ್ದಾರೆ. ಇನ್ನೂ ಪಾರ್ಟಿಯಲ್ಲಿ ಇದ್ದರೂ ಕೂಡ, ನಾನು ಹೈದರಾಬಾದ್‌ನಲ್ಲಿದ್ದೇನೆ ಅಂತ ನಾಟಕವಾಡಿದ್ದ ನಟಿ ಹೇಮಾಗೆ ಈಗ ಸಂಕಷ್ಟ ಎದುಗುವ ಸಾಧ್ಯತೆ ಇದೆ.



# ಬೆಂಗ್ಳೂರಲ್ಲಿ ನೆಲಕಚ್ಚಿದ 800 ವಿದ್ಯುತ್ ಕಂಬ



**ಬೆಂಗಳೂರು:** ಮಳೆ ಬಂದರೆ ಸಾಕು ಎನ್ನುತ್ತಿದ್ದ ಬೆಂಗಳೂರಿನ ಜನರು ಇದೀಗ ಮಳೆ ಬಂದಾಗ ರಸ್ತೆಗಿಳಿಯಲು ಯೋಚಿಸಬೇಕಾದ ಸ್ಥಿತಿ ನಿರ್ಮಾಣವಾಗಿದೆ.ಗಾಳಿ-ಮಳೆಗೆ ಧರೆಗುರುಳಿದ ವಿದ್ಯುತ್ ಕಂಬಗಳಿಂದ ವಾಹನಗಳಿಗೆ ಹಾನಿಯಾದರೂ ಬೆಸ್ಕಾಂ ಎಚ್ಚೆತ್ತುಕೊಂಡಿಲ್ಲ ಎಂಬ ಆರೋಪ ಕೇಳಿಬರುತ್ತಿದೆ.ಬೆಂಗಳೂರಿನ ಹಲವು ಪ್ರದೇಶಗಳಲ್ಲಿ ವಿದ್ಯುತ್ ಕಂಬಗಳು ಬೀಳುವ ಸ್ಥಿತಿ ತಲುಪಿದ್ದು ಜನ ಆತಂಕಕ್ಕೀಡಾಗುವಂತೆ ಮಾಡಿದೆ. ಪುಟ 2

## ಸಂಕ್ಷಿಪ್ತ ಸುದ್ದಿ

### ಮೆಟ್ರೋ ನಿಲ್ದಾಣದಲ್ಲಿ ಕೇಜ್ರಿವಾಲ್‌ಗೆ ಬೆದರಿಕೆ ಸಂದೇಶ ಆರೋಪಿ ಸೆರೆ

**ನವದೆಹಲಿ:** ಮುಖ್ಯಮಂತ್ರಿ ಮತ್ತು ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಅವರಿಗೆ ಕೊಲೆ ಬೆದರಿಕೆ ಸಂದೇಶ ಬರೆದಿದ್ದ ವ್ಯಕ್ತಿಯನ್ನು ಬಂಧಿಸಲಾಗಿದೆ. ಬಂಧಿತನನ್ನು 33 ವರ್ಷದ ಆರೋಪಿ ಅಂಕಿತ್ ಗೋಯಲ್ ಎಂದು ಗುರುತಿಸಲಾಗಿದೆ. ಈತ ದೆಹಲಿ ಮೆಟ್ರೋ ನಿಲ್ದಾಣದಲ್ಲಿ ಬೆದರಿಕೆ ಸಂದೇಶ ಬರೆದಿದ್ದನು. ಅಂಕಿತ್ ಕೃತ್ಯ ಮೆಟ್ರೋ ನಿಲ್ದಾಣದಲ್ಲಿದ್ದ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಈ ಸಾಕ್ಷಿ ಆಧರಿಸಿ ದೆಹಲಿ ಪೊಲೀಸರು ಬಂಧಿಸಿದ್ದು, ಮೆಟ್ರೋ ಘಟಕವು ಎಫ್ ಐಆರ್ ದಾಖಲಿಸಿಕೊಂಡು ತನಿಖೆ ನಡೆಸುತ್ತಿದೆ. ಈ ಹಿಂದೆ ಬೆದರಿಕೆ ಸಂದೇಶ ಕುರಿತು ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದ ಎಎಪಿ, ದೆಹಲಿ ಮುಖ್ಯಮಂತ್ರಿ, ಅರವಿಂದ್ ಕೇಜ್ರಿವಾಲ್ ಅವರಿಗೆ ಸಾರ್ವಜನಿಕವಾಗಿ ಜೀವ ಬೆದರಿಕೆ ಹಾಕಲಾಗುತ್ತಿದೆ. ಪಿಎಂಒ, ಬಿಜೆಪಿ ಮತ್ತು ನರೇಂದ್ರ ಮೋದಿಯವರ ಆದೇಶದ ಮೇರೆಗೆ ರಾಜೀವ್ ಚೌಕ್, ಪಟೇಲ್ ನಗರ ಮೆಟ್ರೋ ನಿಲ್ದಾಣದಲ್ಲಿ ಬೆದರಿಕೆ ಸಂದೇಶ ಬರೆಯಲಾಗಿದೆ. ಹೀಗಾಗಿ ಅರವಿಂದ್ ಕೇಜ್ರಿವಾಲ್ ಅವರಿಗೆ ಏನಾದರೂ ಸಂಭವಿಸಿದರೆ ಅದಕ್ಕೆ ಬಿಜೆಪಿ ಮತ್ತು ನರೇಂದ್ರ ಮೋದಿ ನೇರ ಹೊಣೆಯಾಗುತ್ತಾರೆ ಎಂದು ಆರೋಪ ಮಾಡಿತ್ತು. ಪುಟ 2



### ಸಿಎಂ ವಿರುದ್ಧ ಕಾನೂನು ಹೋರಾಟ

**ಮೈಸೂರು:** ನಾನು ಸಂಸದ ಪ್ರಜ್ವಲ್ ರೇವಣ್ಣ ಪರವಾಗಿ ಇಲ್ಲ. ಆತನ ತಪ್ಪು ಸಾಬೀತಾದರೆ ಶಿಕ್ಷೆ ಕೊಡಿ. ಮುಖ್ಯಮಂತ್ರಿಗಳೇ ಅಧಿಕಾರ ಶಾಶ್ವತವಲ್ಲ. ನಿಮ್ಮ ಅಧಿಕಾರ ದುರುಪಯೋಗದ ವಿರುದ್ಧ ಕಾನೂನು ಹೋರಾಟ ಮಾಡಬೇಕಾಗುತ್ತದೆ. ದೇವರಾಜೇಗೌಡ, ಶಿವರಾಮೇಗೌಡ, ಡಿಕೆ ಶಿವಕುಮಾರ್ ಪೆನ್‌ಡ್ರೈವ್ ವಿತರಣೆ ಹಿಂದೆ ಇದ್ದಾರೆ. ಅರ್ಧ ನಿಮಿಷದಲ್ಲೆ ಎಲ್ಲವೂ ತೀರ್ಮಾನವಾಗಿದೆ. ಪೊಲೀಸರ ರಕ್ಷಣೆಯಲ್ಲಿ ಎಂಟು ಜನ ಸೇರಿದಂತೆ ಕಾರ್ತಿಕ್ ಸಹ ಇದ್ದಾನೆ ಯಾವ ಕಾರಣಕ್ಕೆ ಇನ್ನೂ ಕಾರ್ತಿಕ್ ಬಂಧನ ತೋರಿಸಿಲ್ಲ ನ್ಯಾಯಾಲಯಕ್ಕೆ ಹಾಜರು ಪಡಿಸಿಲ್ಲ ಹೇಳಿ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ ಕುಮಾರಸ್ವಾಮಿ ಪ್ರಶ್ನಿಸಿದರು.



# ವಿದ್ಯಾರ್ಥಿನಿ ಪ್ರಭುದ್ಧ್ಯಾ ಸಾವು ಎಫ್‌ಐಆರ್ ದಾಖಲು

**ಬೆಂಗಳೂರು:** ಇತ್ತೀಚೆಗೆ ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಪದವಿ ವಿದ್ಯಾರ್ಥಿನಿ ಪ್ರಭುದ್ಧ್ಯಾ ನಿಗೂಢ ಸಾವು ಸಾಕಷ್ಟು ಅನುಮಾನಕ್ಕೆ ಎಡೆ ಮಾಡಿಕೊಟ್ಟಿದೆ.

ಮಗಳದ್ದು ಆತ್ಮಹತ್ಯೆಯಲ್ಲ ಕೊಲೆ ಅಂತ ತಾಯಿ ಕೆ.ಆರ್ ಸೌಮ್ಯ ಆರೋಪಿಸಿದ್ದರು.ಅದರಂತೆ ದೂರು ಕೂಡ ದಾಖಲಿಸಿದ್ದರು.ಈ ಸಂಬಂಧ ಸುಬ್ರಮಣ್ಯಪುರ ಪೊಲೀಸರು ಐಪಿಸಿ ಸೆಕ್ಷನ್ 302 ಅಡಿಯಲ್ಲಿ ಕೊಲೆ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಮೇ 15 ರಂದು 20 ವರ್ಷದ ಪ್ರಭುದ್ಧ್ಯಾ ಮೃತದೇಹ ಮನೆಯ ಬಾತ್‌ರೂಂನಲ್ಲಿ ಪತ್ತೆ ಆಗಿತ್ತು.ಕತ್ತು ಹಾಗೂ ಕೈ ಕೊಯ್ದ ಸ್ಥಿತಿಯಲ್ಲಿ ಪತ್ತೆಯಾಗಿತ್ತು.ಮೇಲ್ನೋಟಕ್ಕೆ ಇದು ಆತ್ಮಹತ್ಯೆ ಅಂತಾ ಪೊಲೀಸರು ಪರಿಗಣಿಸಿದ್ದರು.ಮಗಳ ಸಾವಿನ ಬಗ್ಗೆ ತಾಯಿ ಅನುಮಾನ ವ್ಯಕ್ತಪಡಿಸಿದ್ದರು. ನನ್ನ ಮಗಳ ಕತ್ತು ಮತ್ತು ಕೈಯನ್ನ ಚಾಕುವಿನಿಂದ ಕುಯ್ದು ಕ್ರೂರವಾಗಿ ಕೊಲೆ ಮಾಡಿದ್ದಾರೆ. ಮುಖಕ್ಕೆ ಮತ್ತು ತಲೆಯ ಹಿಂಭಾಗಕ್ಕೆ ಬಲವಾಗಿ ಹೊಡೆಯಲಾಗಿದೆ. ಹೀಗಾಗಿ ನನ್ನ ಮಗಳದ್ದು ಆತ್ಮಹತ್ಯೆ ಅಲ್ಲ ಕೊಲೆ ಅಂತ ದೂರು ದಾಖಲಿಸಿದ್ದರು.ಇದೀಗ ಪೊಲೀಸರು ಕೊಲೆ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.ಅನುಮಾನಸ್ಪದ ವ್ಯಕ್ತಿಗಳನ್ನ ವಿಚಾರಣೆ ನಡೆಸ್ತಿದ್ದಾರೆ. ಪುಟ 2



# ಪೇದೆಯಿಂದ ಎಸ್‌ಐ, ಎಸಿಪಿಗೆ ಕೊಲೆ ಬೆದರಿಕೆ

**ಬೆಂಗಳೂರು:** ಅಮಾನತು ಶಿಕ್ಷೆಗೆ ಶಿಫಾರಸು ಮಾಡಿದರು ಅಂತ ಬಾಣಸವಾಡಿ ಠಾಣೆಯ ಇನ್ಸ್‌ಪೆಕ್ಟರ್‌ಮತ್ತು ಎಸಿಪಿ ಅವರಿಗೆ ಪೊಲೀಸ್ ಪೇದೆ ಚಾಕುವಿನಿಂದ ಇರಿದು ಕೊಲೆಮಾಡೋದಾಗಿ ಜೀವ ಬೆದರಿಕೆ ಹಾಕಿದ್ದಾರೆ. ಕೆಲ ದಿನಗಳ ಹಿಂದೆ ಬೆಂಗಳೂರಿನ ಬಾಣಸವಾಡಿ ವ್ಯಾಪ್ತಿಯ ರೌಡಿಶೀಟರ್ ಕಾರ್ತಿಕೇಯನ್ ಹತ್ಯೆಯಾಗಿತ್ತು. ಈ ಕೃತ್ಯದಲ್ಲಿ ಕರ್ತವ್ಯಲೋಪ ಎಸಗಿರುವ ಆರೋಪದ ಮೇಲೆ ಪೊಲೀಸ್‌ಪೇದೆಗಳಾದ ಸಂತೋಷ್, ಪುಟ್ಟಸ್ವಾಮಿ, ವಿನೋದ್ ಅವರನ್ನುಪೂರ್ವವಿಭಾಗದ ಡಿಸಿಪಿ ಕುಲದೀಪ್ ಕುಮಾರ್ ಆರ್. ಜೈನ್ ಅಮಾನತುಗೊಳಿಸಿದ್ದರು. ಪುಟ 2




## ಮುಂಗಾರು ಪೂರ್ವ ಮಳೆ ಆರ್ಭಟ

# ಕರಾವಳಿ 3 ದಿನ ಯೆಲ್ಲೊ ಅಲರ್ಟ್

**ಬೆಂಗಳೂರು:** ರಾಜ್ಯದಲ್ಲಿ ಮಂಗಳವಾರ ಕೂಡ ಉತ್ತಮ ಮಳೆಯಾಗಿದೆ. ಈ ಮೂಲಕ ರಾಜ್ಯದ ಹಲವೆಡೆ ವರುಣದೇವ ತಂಪೆರೆದಿದ್ದಾನೆ.



ಇಂದಿನಿಂದ ರಾಜ್ಯದಾದ್ಯಂತ ಮಳೆ ಪ್ರಮಾಣ ಇಳಿಕೆ ಸಾಧ್ಯತೆ ಇದೆ. ಉತ್ತರ ಒಳನಾಡಿಗೆ ಯಾವುದೇ ಅಲರ್ಟ್ ಇಲ್ಲ. ದಕ್ಷಿಣ ಒಳನಾಡಿನ ಕೊಡುಗು ಜಿಲ್ಲೆಗೆ ಆರೆಂಜ್ ಅಲರ್ಟ್ ಹಾಗೂ ಕರಾವಳಿ ಜಿಲ್ಲೆಗಳಿಗೆ ಮೂರು ದಿನ ಯಲ್ಲೋ ಅಲರ್ಟ್ ಘೋಷಣೆ ಮಾಡಲಾಗಿದೆ. ಉಳಿದಂತೆ ಇತರೆ ಜಿಲ್ಲೆಗಳಲ್ಲಿ ಕೆಲವೆಡೆ ಮಾತ್ರ ಸಾಧಾರಣ ಮಳೆಯಾಗುವ ಸಂಭವವಿದೆ.

**ನಿನ್ನೆ ಎಲ್ಲೆಲ್ಲಿ ಎಷ್ಟು ಮಳೆಯಾಗಿದೆ..?:** ಶಿವಮೊಗ್ಗ: 86.5 ಮಿ.ಮೀ, ಉತ್ತರ ಕನ್ನಡ: 81.5 ಮಿಮೀ, ರಾಮನಗರ: 74 ಮಿ.ಮೀ, ಚಾಮರಾಜನಗರ: 70.5 ಮಿ.ಮೀ, ರಾಯಚೂರು: 70 ಮಿ.ಮೀ, ಕೊಡಗು: 69.5 ಮಿ.ಮೀ, ದಕ್ಷಿಣ ಕನ್ನಡ: 69.5 ಮಿ.ಮೀ, ಉಡುಪಿ: 59.5 ಮಿ.ಮೀ, ಚಿಕ್ಕಮಗಳೂರು: 57 ಮಿ.ಮೀ, ಹಾವೇರಿ: 54 ಮಿ.ಮೀ, ತುಮಕೂರು: 49 ಮಿ.ಮೀ, ಚಿಕ್ಕಬಳ್ಳಾಪುರ: 47 ಮಿ.ಮೀ, ಬಳ್ಳಾರಿ: 46 ಮಿ.ಮೀ, ಮಂಡ್ಯ: 45 ಮಿ.ಮೀ, ಬೆಂಗಳೂರು ನಗರ: 44.5 ಮಿ.ಮೀ, ಮೈಸೂರು: 44 ಮಿ.ಮೀ, ಹಾಸನ: 36.5 ಮಿ.ಮೀ ಹಾಗೂ ದಾವಣಗೆರೆಯಲ್ಲಿ 34.5 ಮಿ.ಮೀ ಮಳೆಯಾಗಿದೆ. ಪುಟ 2

# ಮಾಜಿ ಸಂಸದ ಇಕ್ಬಾಲ್ ಅಹ್ಮದ್ ಸರಡಗಿ ವಿಧಿವಶ

**ಕಲಬುರಗಿ:** ಮಾಜಿ ಸಂಸದ ಇಕ್ಬಾಲ್ ಅಹ್ಮದ್ ಸರಡಗಿ (81) ನಿಧನರಾಗಿದ್ದಾರೆ. ದೀರ್ಘಕಾಲದ ಅನಾರೋಗ್ಯದಿಂದ ಬಳಲುತ್ತಿದ್ದ ಇಕ್ಬಾಲ್ ಅಹ್ಮದ್ ಸರಡಗಿಯವರು ಇಂದು ನಸುಕಿನ ಜಾವ 1 ಗಂಟೆಗೆ ಕಲಬುರಗಿ ನಗರದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.ದರ್ಗಾ ಪ್ರದೇಶದ ನ್ಯಾಷನಲ್ ಕಾಲೇಜು ಮೈದಾನದಲ್ಲಿ ಸರಡಗಿಯವರ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಇಂದು ಸಂಜೆ 6 ಗಂಟೆಗೆ ನಗರದಲ್ಲಿ ಸರಡಗಿ ಅಂತ್ಯಕ್ರಿಯೆ ನಡೆಯಲಿದೆ. ಸರಡಗಿ ನಿಧನಕ್ಕೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆಶಿ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ ಎಂದು ಕುಟುಂಬಸ್ಥರು ತಿಳಿಸಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮಾಜಿ ಸಿಎಂ ದಿ ಎನ್ ಧರ್ಮಸಿಂಗ್ ಪರಮಾಪ್ತರಾಗಿದ್ದ ಸರಡಗಿಯವರು 1999 ಮತ್ತು 2004 ರಲ್ಲಿ ಎರಡು ಬಾರಿ ಸಂಸದರಾಗಿ, 1 ಬಾರಿ ಎಮ್‌ಎಲ್‌ಸಿ ಆಗಿ ಸೇವೆ ಸಲ್ಲಿಸಿದ್ದಾರೆ. 2009 ರಲ್ಲಿ ಕಲಬುರಗಿ ಮೀಸಲು ಕ್ಷೇತ್ರವಾದ ನಂತರ ಮಲ್ಲಿಕಾರ್ಜುನ ಖರ್ಗೆಗೆ ಬಿಟ್ಟುಕೊಟ್ಟಿದ್ದರು.



# ಜೂ.4ರ ಬಳಿಕ ಬಿಜೆಪಿ ನಾಯಕರು ಜೈಲಿಗೆ ಹೋಗಲಿದ್ದಾರೆ: ಅತಿಶಿ

**ಎಎಪಿ ಸಚಿವೆ ಅತಿಶಿ ಹೇಳಿಕೆ**

**ನವದೆಹಲಿ:** ಜೂನ್ 4ರ ನಂತರ INDIA ಒಕ್ಕೂಟ ಗೆದ್ದು ಸರ್ಕಾರ ರಚಿಸಿದಾಗ ಚುನಾವಣಾ ಬಾಂಡ್ ಕುರಿತು ತನಿಖೆಯನ್ನು ಪ್ರಾರಂಭಿಸಲಾಗುವುದು. ಈ ವೇಳೆ ಬಿಜೆಪಿ ಮಾತ್ರವಲ್ಲ, ಇಡಿ, ಸಿಬಿಐ, ಐಟಿ ಅಧಿಕಾರಿಗಳನ್ನು ಕೂಡ ಜೈಲಿಗೆ ಕಳುಹಿಸಲಾಗುವುದು ಎಂದು ಎಎಪಿ ಸಚಿವೆ ಅತಿಶಿ ಹೇಳಿದ್ದಾರೆ.

ದೆಹಲಿಯಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಈಗ ನಿಮ್ಮ ಅಂತ್ಯ ಹತ್ತಿರವಾಗಿದೆ ಎಂದು ಬಿಜೆಪಿಗೆ ಸ್ಪಷ್ಟವಾಗಿ ಹೇಳಲು ಬಯಸುತ್ತೇನೆ. ಈ ದೇಶದ ಜನರು ತಮ್ಮ ಮತಗಳ ಮೂಲಕ ಬಿಜೆಪಿ ಸರ್ಕಾರವನ್ನು ತೊಡೆದುಹಾಕಲು ಮನಸ್ಸು ಮಾಡಿದ್ದಾರೆ. ಬಿಜೆಪಿಯವರು ಈಗ ಎಷ್ಟು ಬೇಕಾದರೂ ಹಗರಣಗಳನ್ನು ಮಾಡಬಹುದು. ಯಾಕೆಂದರೆ ಜೂನ್ 4 ರ ನಂತರ ದೇಶದ ಅತಿದೊಡ್ಡ ಹಗರಣದ ತನಿಖೆ ನಡೆಯುತ್ತದೆ ಎಂದು ತಿಳಿಸಿದ್ದಾರೆ. ಜೂನ್ 4 ರ ನಂತರ ನಮ್ಮ ಸರ್ಕಾರ ರಚನೆಯ ಬಳಿಕ ದೇಶದ ಅತಿದೊಡ್ಡ ಚುನಾವಣಾ ಬಾಂಡ್ ಹಗರಣದ ತನಿಖೆ ನಡೆಯಲಿದೆ. ಬಿಜೆಪಿ ನಾಯಕರು ಮಾತ್ರವಲ್ಲದೆ ಇಡಿ, ಸಿಬಿಐ ಮತ್ತು ಐಟಿ ಅಧಿಕಾರಿಗಳೂ ಜೈಲಿಗೆ ಹೋಗುತ್ತಾರೆ. ಯಾಕೆಂದರೆ ಅವರೂ ಇದರಲ್ಲಿ ಭಾಗಿಯಾಗಿದ್ದಾರೆ ಎಂದು ಅತಿಶಿ ಹೇಳಿದರು. ಇದೇ ವೇಳೆ ಮನೀಶ್ ಸಿಸೋಡಿಯಾ ಅವರ ಜಾಮೀನು ಅರ್ಜಿಯನ್ನು ದೆಹಲಿ ಹೈಕೋರ್ಟ್ ವಜಾಗೊಳಿಸಿದ ಕುರಿತು ಮಾತನಾಡಿದ ಅತಿಶಿ, ನಾವು ಹೈಕೋರ್ಟ್ ಅನ್ನು ಗೌರವಿಸುತ್ತೇವೆ. ಆದರೆ ನ್ಯಾಯಾಲಯದ ಈ ನಿರ್ಧಾರವನ್ನು ನಾವು ಗೌರವದಿಂದ ಒಪ್ಪುವುದಿಲ್ಲ. ಪುಟ 2



## ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಕ್ಯಾಬ್, ಟ್ಯಾಕ್ಸಿಗಳಿಗೆ ಪ್ರವೇಶ ದರ ನಿಗದಿ

**ಬೆಂಗಳೂರು:** ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕ್ಯಾಬ್ ಮತ್ತು ಟ್ಯಾಕ್ಸಿಗಳಿಗೆ ಪ್ರವೇಶ ದರ ನಿಗದಿ ಮಾಡಿದೆ.ಏರ್‌ಪೋರ್ಟ್ ಆಡಳಿತ ಮಂಡಳಿಯ ಈ ನಿರ್ಧಾರಕ್ಕೆ ವಿರೋಧ ವ್ಯಕ್ತಪಡಿಸಿ ಚಾಲಕರು ಪ್ರತಿಭಟನೆ ನಡೆಸಿದ್ದಾರೆ.

ಪ್ರಯಾಣಿಕರನ್ನ ಪಿಕಪ್ ಮಾಡಲು ಪ್ರವೇಶ ದರ 07 ನಿಮಿಷಕ್ಕೆ 150 ರೂ.ಪಾವತಿಸಬೇಕು.ಇನ್ನು 07 ನಿಮಿಷಕ್ಕಿಂತ ಹೆಚ್ಚು ಕಾಲ ನಿಂತರೆ 300 ರೂ.ಪಾವತಿ ಮಾಡಬೇಕು.ಬೆಂಗಳೂರು ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಆಡಳಿತ ಮಂಡಳಿ ಕಳೆದ ಭಾನುವಾರ ಈ ಹೊಸ ನಿಯಮವನ್ನ ಜಾರಿ ಮಾಡಿತ್ತು. ಆಡಳಿತ ಮಂಡಳಿಯ ದರ ನಿಗದಿ ಕ್ರಮಕ್ಕೆ ಯಲ್ಲೋ ಹಾಗೂ ವೈಟ್ ಬೋರ್ಡ್ ಚಾಲಕರು ಕಂಗಾಲಾಗಿದ್ದರು.ಅಲ್ಲದೇ ದರ ನಿಗದಿ ವಿರೋಧಿಸಿ ಕ್ಯಾಬ್ ಮತ್ತು ಟ್ಯಾಕ್ಸಿ ಚಾಲಕರು ಸೋಮವಾರ ಪ್ರತಿಭಟನೆ ಮಾಡುವ ಮೂಲಕ ಭಾರೀ ವಿರೋಧ ವ್ಯಕ್ತಪಡಿಸಿದ್ದರು. ಇದೀಗ ಟ್ಯಾಕ್ಸಿ ಮತ್ತು ಕ್ಯಾಬ್ ಚಾಲಕರು ಪ್ರತಿಭಟನೆ ಮಾಡಿದ್ದ ಪರಿಣಾಮ ದರ ನಿಗದಿ ಸಂಗ್ರಹಣೆಗೆ ತಾತ್ಕಾಲಿಕವಾಗಿ ಬ್ರೇಕ್ ಹಾಕಲಾಗಿದೆ. ಇತ್ತ ಸದ್ಯಕ್ಕೆ ಬ್ರೇಕ್ ಹಾಕಿರುವ ಆಡಳಿತ ಮಂಡಳಿಯವರು ಮತ್ತೆ ಶುರು ಮಾಡುತ್ತಾರೆ ಎಂದು ಏರ್ ಪೋರ್ಟ್ ಟ್ಯಾಕ್ಸಿ ಚಾಲಕರು ಇಂದು ಮುಖ್ಯಮಂತ್ರಿ ಹಾಗೂ ಸಾರಿಗೆ ಸಚಿವರನ್ನ ಭೇಟಿ ಮಾಡಲು ಮುಂದಾಗಿದ್ದಾರೆ.



## ರಾಮೇಶ್ವರಂಕೆಫೆ ಬ್ಲಾಸ್ಟ್‌ಗೆ ಸ್ಫೋಟಕ ತಿರುವು ವೈದ್ಯರಿಬ್ಬರು ಭಾಗಿಯಾಗಿರೋ ಶಂಕೆ

**ಬೆಂಗಳೂರು:** ಸಿಲಿಕಾನ್ ಸಿಟಿಯ ವೈಟ್‌ಫೀಲ್ಡ್ ನಲ್ಲಿ ನಡೆದಿದ್ದ ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟಕ್ಕೆ ಇದೀಗ ಸ್ಫೋಟಕ ತಿರುವೊಂದು ಸಿಕ್ಕಿದೆ.ಪ್ರಕರಣದಲ್ಲಿ ಇಬ್ಬರು ವೈದ್ಯರು ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದೆ. ಕೊಯಮತ್ತೂರು ಖಾಸಗಿ ಆಸ್ಪತ್ರೆಯ ಮೇಲೆ ಇಂದು ರಾಷ್ಟ್ರೀಯ ತನಿಖಾ ಸಂಸ್ಥೆಯು ದಾಳಿ ನಡೆಸಿದೆ.ಬ್ಲಾಸ್ಟ್ ಪ್ರಕರಣದಲ್ಲಿ ತಮಿಳುನಾಡಿನ ನಾರಾಯಣಗುರು ಖಾಸಗಿ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುತ್ತಿರುವ ಕರ್ನಾಟಕ ಮೂಲದ ಇಬ್ಬರು ಭಾಗಿಯಾಗಿರುವ ಅನುಮಾನ ಮೂಡಿದೆ. ಬಾಂಬ್ ಬ್ಲಾಸ್ಟ್ ಪ್ರಕರಣ ಇಂದು ಬೆಂಗಳೂರಿನ ಕೆ ಎಸ್ ಲೇಔಟ್ ಮತ್ತು ಬನಶಂಕರಿ ಸೇರಿ 5ಕ್ಕೂ ಹೆಚ್ಚು ಕಡೆ ಎನ್‌ಐಎ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ. ಮತೀನ್ ಮತ್ತು ಶಾಜೀಬ್ ಗೆ ಹಣ ಸಹಾಯ ಮಾಡಿದ ಆರೋಪದ ಮೇಲೆ ದಾಳಿ ನಡೆಸಿ ಅಧಿಕಾರಿಗಳು ದಾಖಲೆ ಜಪ್ತಿ ಮಾಡಿದ್ದಾರೆ. ಮಾರ್ಚ್ 1 ರಂದು ಮಧ್ಯಾಹ್ನ 12:55 ರ ಸುಮಾರಿಗೆ ವೈಟ್‌ಫೀಲ್ಡ್‌ನಲ್ಲಿರುವ ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟಿಸಲಾಗಿತ್ತು.ಘಟನೆ ನಡೆದ ಕೆಲ ದಿನಗಳ ಬಳಿಕ ಕೃತ್ಯ ಎಸಗಿದ ಮೊಹಮ್ಮದ್ ಮತೀನ್ ಮತ್ತು ಮುಸಾವಿರ್ ಹುಸೇನ್ ಅನ್ನು ಎನ್‌ಐಎ ಅಧಿಕಾರಿಗಳು ಪಶ್ಚಿಮ ಬಂಗಾಳದಲ್ಲಿ ಬಂಧಿಸಿದ್ದರು. ಬಂಧಿತರ ವಿಚಾರಣೆ ನಡೆಸಿದ್ದು ಸಾಕಷ್ಟು ವಿಚಾರಗಳು ಬೆಳಕಿಗೆ ಬಂದಿತ್ತು.




**40 ಕ್ಕೂ ಹೆಚ್ಚು ಮಂದಿ ಅಸ್ವಸ್ಥ**

# ಕಲುಷಿತ ನೀರು ಸೇವಿಸಿ ಯುವಕ ಸಾವು

**ಮೈಸೂರು:** ಜಿಲ್ಲೆಯ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಕಲುಷಿತ ನೀರು ಕುಡಿದು ಓರ್ವ ಯುವಕ ಮೃತಪಟ್ಟಿದ್ದಾನೆ. ಅಲ್ಲದೇ ಮೂವರ ಸ್ಥಿತಿ ಚಿಂತಾಜನಕವಾಗಿದ್ದು, ಒಟ್ಟು 48 ಜನರು ಆಸ್ಪತ್ರೆಗೆ ದಾಖಲಾಗಿದ್ದಾರೆ.

ಮೈಸೂರು ನಗರಕ್ಕೆ ಹೊಂದಿಕೊಂಡಂತೆ ಇರುವ ಕೆ.ಸಾಲುಂಡಿ ಗ್ರಾಮದಲ್ಲಿ ಕಳೆದ ಎರಡು ದಿನಗಳಿಂದ ಗ್ರಾಮಸ್ಥರಲ್ಲಿ ವಾಂತಿ-ಬೇಧಿ ಶುರುವಾಗಿತ್ತು.ಗ್ರಾಮಕ್ಕೆ ಕುಡಿಯುವ ನೀರು ಸರಬರಾಜು ಆಗುವ ಲೈನ್‌ಗೆ ಡ್ರೈನೇಜ್ ನೀರು ಸೇರಿದ ಪರಿಣಾಮ ಗ್ರಾಮಸ್ಥರು ಸಾಲು ಸಾಲಾಗಿ ಅಸ್ವಸ್ಥರಾಗಲು ಶುರುವಾಯಿತು.ಇದರ ಗಂಭೀರತೆ ಅರಿತ ಮೈಸೂರು ಜಿಲ್ಲಾಡಳಿತ ಗ್ರಾಮದಲ್ಲೇ ತಾತ್ಕಾಲಿಕ ವೈದ್ಯಕೀಯ ಕ್ಯಾಂಪ್ ಆರಂಭಿಸಿತ್ತು.ಈ ನಡುವೆ ಒಟ್ಟು 48 ಜನರು ಮೈಸೂರಿನ ವಿವಿಧ ಆಸ್ಪತ್ರೆಗಳಿಗೆ ದಾಖಲಾದರು.ಇದರಲ್ಲಿ ನಾಲ್ವರ ಸ್ಥಿತಿ ಗಂಭೀರವಾಗಿತ್ತು.ಈ ನಾಲ್ವರಲ್ಲಿ ಓರ್ವ ಯುವಕ ಇಂದು ಮೃತಪಟ್ಟಿದ್ದಾರೆ.20 ವರ್ಷದ ಕನಕರಾಜ್ ಮೃತ ಯುವಕ.ನಿನ್ನೆ ತೀವ್ರ ವಾಂತಿ-ಬೇಧಿಯಿಂದ ನಗರದ ಖಾಸಗಿ ಆಸ್ಪತ್ರೆಗೆ ಕನಕರಾಜ್ ದಾಖಲಾಗಿದ್ದರು.ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ.



ಈ ಬಗ್ಗೆ ಮೈಸೂರು ಜಿಲ್ಲಾ ಆರೋಗ್ಯಾಧಿಕಾರಿಗಳು ಪ್ರತಿಕ್ರಿಯಿಸಿದ್ದು, ಕಲುಷಿತ ನೀರಿನಿಂದಲೇ ಈ ಪ್ರಕರಣ ಆಗಿದೆ ಎಂಬುದು ಖಚಿತವಾಗಿಲ್ಲ. ನೀರನ್ನು ಪ್ರಯೋಗಾಲಕ್ಕೆ ಕಳುಹಿಸಲಾಗಿದೆ.ವರದಿ ಬರಬೇಕಿದೆ.ಸದ್ಯಕ್ಕೆ ಗ್ರಾಮದಲ್ಲೇ ತುರ್ತು ವೈದ್ಯಕೀಯ ಚಿಕಿತ್ಸೆಗೆ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಹೇಳಿದ್ದಾರೆ. ಆಸ್ಪತ್ರೆಗೆ ಭೇಟಿ ನೀಡಿದ್ದ ಸ್ಥಳೀಯ ಶಾಸಕ ಜಿ.ಟಿ.ದೇವೇಗೌಡ, ಈ ಪ್ರಕರಣಕ್ಕೆ ಅಧಿಕಾರಿಗಳೇ ನೇರ ಹೊಣೆ.ಕಲುಷಿತ ನೀರಿನಿಂದಲೇ ಈ ಘಟನೆ ನಡೆದಿದೆ.ಅಧಿಕಾರಿಗಳ ಬೇಜವಾಬ್ದಾರಿತನದಿಂದಲೇ ಈ ಘಟನೆ ನಡೆದಿದೆ ಎಂದು ಆರೋಪಿಸಿದ್ದಾರೆ.

# ರೇವ್ ಪಾರ್ಟಿಯಲ್ಲಿ ನಟಿ ಹೇಮಾ ಭಾಗಿಯಾಗಿದ್ದು ನಿಜ

**ಬೆಂಗಳೂರು:** ಬೆಂಗಳೂರು ಎಲೆಕ್ಟ್ರಾನಿಕ್ ಸಿಟಿಯ ಫಾರ್ಮ್ ಹೌಸ್‌ನಲ್ಲಿ ನಡೆದ ರೇವ್ ಪಾರ್ಟಿ ಪ್ರಕರಣದಲ್ಲಿ ಹೊಸ ಹೊಸ ತಿರುವುಗಳನ್ನು ಪಡೆದುಕೊಳ್ತಿದೆ.ಈ ಪ್ರಕರಣದಲ್ಲಿ ಹೇಮಾ ಹೆಸರು ಕೇಳಿ ಬಂದಿತ್ತು. ನಟಿ ತಾವು ಹೈದರಾಬಾದ್‌ನಲ್ಲಿರೋದಾಗಿ ಹೈಡ್ರಾಮಾ ಮಾಡಿದ್ದರು. ಇದೀಗ ಅಸಲಿ ಹೊರಬಿದ್ದಿದೆ. ಹೇಮಾ ಕೂಡ ರೇವ್ ಪಾರ್ಟಿಯಲ್ಲಿ ಇದ್ದರು ಎಂಬುದನ್ನು ಬೆಂಗಳೂರು ನಗರ ಪೊಲೀಸ್ ಆಯುಕ್ತ ದಯಾನಂದ್ ಸ್ಪಷ್ಟನೆ ನೀಡಿದ್ದಾರೆ.

'ರೇವ್ ಪಾರ್ಟಿಯಲ್ಲಿ ತೆಲುಗು ನಟಿ ಹೇಮಾ ಭಾಗಿಯಾಗಿದ್ದು ಸತ್ಯ' ಎಂದು ಪೊಲೀಸ್ ಆಯುಕ್ತ ದಯಾನಂದ್ ಕ್ಲ್ಯಾರಿಟಿ ನೀಡಿದ್ದಾರೆ. ಇದೇ ವೇಳೆ ಫಾರ್ಮ್ ಹೌಸ್‌ನಲ್ಲೇ ನಟಿ ವಿಡಿಯೋ ಮಾಡಿ ಹೇಳಿಕೆ ಬಿಡುಗಡೆ ಮಾಡಿರುವ ಪ್ರಕರಣದ ಕುರಿತು ದಯಾನಂದ್ ಮಾತನಾಡಿದ್ದಾರೆ. ಯಾವ ಸಂದರ್ಭದಲ್ಲಿ ವಿಡಿಯೋ ಮಾಡಿದ್ದಾರೆಂಬ ಬಗ್ಗೆ ಪರಿಶೀಲನೆ ನಡೆಯುತ್ತಿದೆ ಎಂದು ದಯಾನಂದ್ ಹೇಳಿದ್ದಾರೆ.ಸದ್ಯ ಹೇಮಾ ಅವರ ರಕ್ತದ ಮಾದರಿ ತೆಗೆದುಕೊಂಡು ಅವರನ್ನು ಕಳುಹಿಸಲಾಗಿದೆ. ಮೆಡಿಕಲ್ ಟೆಸ್ಟ್ ಬಳಿಕ ಸ್ಟೇಷನ್ ಬೇಲ್ ಮೇಲೆ ಹೇಮಾರನ್ನು ಬಿಡುಗಡೆ ಮಾಡಲಾಗಿದೆ ಎಂದು ದಯಾನಂದ್ ಮಾತನಾಡಿದ್ದಾರೆ. ಎಲೆಕ್ಟ್ರಾನಿಕ್ ಸಿಟಿ ಹೊರಭಾಗದ ಸಿಂಗೇನಾ ಅಗ್ರಹಾರದ ಫಾರಂ ಹೌಸ್‌ನಲ್ಲಿ ಮೇ 19ರ ತಡರಾತ್ರಿ ನಡೆಯುತ್ತಿದ್ದ ರೇವ್ ಪಾರ್ಟಿ ಮೇಲೆ ಸಿಸಿಬಿ ಅಧಿಕಾರಿಗಳು ದಾಳಿ ನಡೆಸಿದ್ದರು.ಅಪಾರ ಪ್ರಮಾಣದ ಮಾದಕ ವಸ್ತುಗಳು ಪತ್ತೆಯಾಗಿತ್ತು.ಪಾರ್ಟಿಯಲ್ಲಿ ತೆಲುಗು ನಟ-ನಟಿಯರು, ಮಾಡೆಲ್‌ಗಳು ಹಾಗೂ ಟೆಕ್ಕಿಗಳು ಭಾಗಿಯಾಗಿದ್ದರು. ಈ ರೇವ್ ಪಾರ್ಟಿಯಲ್ಲಿ ನಾನು ಇರಲಿಲ್ಲ ಎಂದು ಸುಳ್ಳು ಹೇಳಿದ್ದ ನಟಿ ಹೇಮಾ ಬಗ್ಗೆ ಅಸಲಿ ವಿಚಾರ ಇದೀಗ ಹೊರಬಿದ್ದಿದೆ.

ಹೇಮಾ ಸುಮಾರು 250 ಚಿತ್ರಗಳಲ್ಲಿ ನಟಿಸಿದ್ದಾರೆ. ಸ್ಟಾರ್ ನಟರ ಚಿತ್ರಗಳಲ್ಲಿ ಖಾಯಂ ಪೋಷಕ ನಟಿಯಾಗಿ ಹೇಮಾ ಕೆಲಸ ಮಾಡಿದ್ದಾಳೆ.ಕನ್ನಡದಲ್ಲೂ ಆಕ್ಟ್ ಮಾಡಿದ್ದ ಹೇಮಾ 2014ರಲ್ಲಿ ಪುನೀತ್ ರಾಜ್‌ಕುಮಾರ್ ನಟನೆಯ 'ಪವರ್' ಚಿತ್ರದಲ್ಲೂ ಕಾಣಿಸಿಕೊಂಡಿದ್ದರು.ವಿನಯ ವಿಧೇಯ ರಾಮ, ಸನ್ ಆಫ್ ಸತ್ಯಮೂರ್ತಿ, ಡಿಕ್ಟೇಟರ್, ಅತ್ತಾರಿಂಟಿಕಿ ದಾರೇದಿ, ಮಿರ್ಚಿ, ರಭಸ, ಬೃಂದಾವನಂ, ರೆಬೆಲ್, ಜುಲಾಯ್, ಮಗಧೀರ ಸೇರಿ ಅನೇಕ ಸಿನಿಮಾಗಳಲ್ಲಿ ನಟಿಸಿದ್ದಾರೆ.

**ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ಆರೋಪ**

# ಡಿಕೆಶಿ ರಕ್ಷಣೆಗೆ ಸಿಎಂ, ಸರ್ಕಾರ ನಿಂತಿದೆ

**ಬೆಂಗಳೂರು:** ಡಿಸಿಎಂ ಡಿ.ಕೆ ಶಿವಕುಮಾರ್ ರಕ್ಷಣೆಗೆ ಸಿಎಂ ಸಿದ್ದರಾಮಯ್ಯ ಮತ್ತು ಸರ್ಕಾರ ನಿಂತಿದೆ ಎಂದು ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಿವಕುಮಾರ್ ರಕ್ಷಣೆಗೆ ಸಿಎಂ ಹಾಗೂ ಸರ್ಕಾರ ನಿಂತಿದೆ.ಆಡಿಯೋ ರಿಲೀಸ್ ಆದಾಗಿನಿಂದ ಡಿಕೆಶಿವಕುಮಾರ್ ಮಾತಾಡ್ತಿಲ್ಲ. ಅದಕ್ಕೆ ನಾನು ತನಿಖೆ ಯಾವ ರೀತಿ ನಡೆಯುತ್ತಿದೆ ಎಂದಿದ್ದು.ಈ ಬಗ್ಗೆ ನಾವು ಕಾನೂನು ವ್ಯಾಪ್ತಿಯಲ್ಲಿ ಹೋರಾಟ ನಡೆಸುತ್ತೇವೆ ಎಂದರು.

ನಾನು ಮೊದಲಿನಿಂದ ಹೇಳಿದ್ದೇನೆ ಯಾರೇ ತಪ್ಪು ಮಾಡಿದ್ರೂ ಶಿಕ್ಷೆ ಆಗಬೇಕು.ತಪ್ಪಿತಸ್ಥರನ್ನು ರಕ್ಷಣೆ ಮಾಡಲು ನಾವು ಹೋಗಲ್ಲ. ಈ ವಿಷಯದಲ್ಲಿ ಸರ್ಕಾರ ನಡೆದುಕೊಳ್ಳೋದು ನೋಡುತ್ತಿದ್ದಾರೆ. ಈ ಕುಟುಂಬವನ್ನು ನಿರ್ನಾಮ ಮಾಡಬೇಕು ಎಂಬಂತಿದೆ.ಈ ಪ್ರಕರಣ ಸೃಷ್ಟಿ ಮಾಡಿ ಹೊರಗೆ ತಂದು ಇವರೇ ಅಮಿತ್ ಶಾ ಅವರಿಗೆ ಪ್ರಶ್ನೆ ಮಾಡ್ತಾರೆ.ಜೆಡಿಎಸ್ ಹೊಂದಾಣಿಕೆ ಯಾವಾಗ ಮುರಿದುಕೊಳ್ತೀರಾ?ಜೆಡಿಎಸ್‌ನ್ನು ಯಾವಾಗ ದೂರ ಇಡ್ತೀರಾ ಎಂದು ಬಿಜೆಪಿ ನಾಯಕರಿಗೆ ಪ್ರಶ್ನೆ ಮಾಡಿದ ಉದ್ದೇಶ ಮತ್ತು ಈ ಪ್ರಕರಣವನ್ನ ಇಷ್ಟು ದೊಡ್ಡ ಮಟ್ಟದಲ್ಲಿ ಸೃಷ್ಟಿ ಮಾಡಿರೋದೇ ಜೆಡಿಎಸ್-ಬಿಜೆಪಿ ಸಂಬಂಧಿಂದ.ಇವರು 20 ಸೀಟು ಗೆಲ್ಲುವ ಭ್ರಮೆಯಲ್ಲಿ ಇದ್ದರು.ಅ ಕನಸು ನುಚ್ಚು ನೂರಾಗಿದೆ ಅದಕ್ಕೆ ಹೀಗೆ ಮಾಡುತ್ತಿದ್ದಾರೆ ಎಂದರು.



ಲೋಕಸಭಾ ಚುನಾವಣೆ ಫಲಿತಾಂಶ ಏನಾಗುತ್ತೆ ಎಂದು ಗೊತ್ತಿದೆ.ಬಿಜೆಪಿ-ಜೆಡಿಎಸ್ ಹೊಂದಾಣಿಕೆ ಮಾಡಿಕೊಂಡ ದಿನವೇ ಅವರಿಗೆ ನಮ್ಮ ಓಟಕ್ಕೆ ಕಡಿವಾಣ ಹಾಕ್ತಾರೆ ಎಂದು ಅರ್ಥವಾಗಿದೆ.ಇವರಿಗೆ ಕಡಿವಾಣ ಹಾಕಿದ್ದೇವೆ ಎಂದು ಆತಂಕಕ್ಕೆ ಒಳಗಾಗಿ ಈ ರೀತಿಯ ಪ್ರಕರಣವನ್ನು ರಾಜ್ಯವೇ ತಲೆ ತಗ್ಗಿಸೋ ಪ್ರಕರಣವನ್ನು ಸೃಷ್ಟಿ ಮಾಡಿದ್ದು ಇದೇ ಡಿ.ಕೆ ಶಿವಕುಮಾರ್ ಮತ್ತು ಇವರ ಪಟಾಲಂಗಳು ಇದನ್ನ ಮಾಡಿರೋದು ಎಂದು ಆರೋಪಿಸಿದ್ದಾರೆ.

ಯಾರು ಈ ಪೆನ್ ಡ್ರೈವ್ ಸೃಷ್ಟಿ ಮಾಡಿ ಇವರ ಕೈಗೆ ತೆಗೆದುಕೊಂಡು ಕೊಟ್ಟಿದ್ದಾನೆ. ಇವತ್ತಿನವರೆಗೂ ಆ ವ್ಯಕ್ತಿಯನ್ನ ಬಂಧಿಸಿದ್ದೀರಾ? ಇವತ್ತಿನವರೆಗೂ ಆತನನ್ನ ಕೋರ್ಟ್ ಮುಂದೆ ಹಾಜರುಪಡಿಸಿಲ್ಲ. ಇದರಲ್ಲಿ ಏನು ಹುನ್ನಾರವಿದೆ.ಸಿಎಂ ಅವರು ಇಷ್ಟು ಲಘುವಾಗಿ ಮಾತಾಡೋದು ಬೇಡ.ಸಿಎಂ ಅವರು ನಮ್ಮ ಪ್ರಶ್ನೆಗಳಿಗೆ ಉತ್ತರ ಕೊಡದೇ ನುಣಿಚಿಕೊಳ್ತಿದ್ದಾರೆ.ಈ ಪ್ರಕರಣವನ್ನ ಇವರು ಪ್ರಚಾರಕ್ಕಾಗಿ ಇಟ್ಟುಕೊಂಡಿದ್ದೀರಾ.ಯಾರಿಗೂ ಇದರಲ್ಲಿ ನ್ಯಾಯದೊರಕಿಸುವ ನಿಟ್ಟಿನಲ್ಲಿ ಸರ್ಕಾರದ ತನಿಖೆ ಆಗ್ತಿಲ್ಲ. ಇದು ಎಸ್‌ಐಟಿ ತಂಡ ಅಲ್ಲ, ಇದು ಎಸ್‌ಐಟಿ ದಂಡ ಇದು.ಈ ದಂಡವನ್ನು ಯಾರ ಮೇಲೆ ಪ್ರಯೋಗ ಮಾಡಬೇಕು ಎಂದು ಇಟ್ಟುಕೊಂಡಿದ್ದೀರಾ ಎಂದು ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.

## ನನ್ನ ನಾಯಕತ್ವದಲ್ಲಿ ಪಕ್ಷ ಅಧಿಕಾರಕ್ಕೆ ಬಂದಿರುವುದು ಮುಖ್ಯ

**ಬೆಂಗಳೂರು:** ರಾಜ್ಯ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷ ಆದ ಹಿನ್ನೆಲೆಯಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ಕೆಪಿಸಿಸಿ ಘಟಕದಿಂದ ಸನ್ಮಾನ ಮಾಡಲಾಯಿತು. ಕೆಪಿಸಿಸಿ ಕಚೇರಿಯ ಸನ್ಮಾನದ ಸಂದರ್ಭದಲ್ಲಿ ಮಾತನಾಡಿದ ಅವರು, ಸರ್ಕಾರ ಒಂದು ವರ್ಷ ಪೂರೈಸಿದ್ದು ಮುಖ್ಯವಲ್ಲ, ನಾಲ್ಕು ವರ್ಷಗಳಲ್ಲಿ ನನ್ನ ನಾಯಕತ್ವದಲ್ಲಿ ಪಕ್ಷ ಅಧಿಕಾರಕ್ಕೆ ಬಂದಿದೆ.ಅದು ಮುಖ್ಯ ಎಂದು ತಿಳಿಸಿದರು. ಬಿಬಿಎಂಪಿ ಎಲೆಕ್ಷನ್ ಬಗ್ಗೆ ಈಗ ಚರ್ಚೆ ಬೇಡ.ಇನ್ನೂ ಟೈಮ್ ಇದೆ.ರಾಜೀವ್ ಗಾಂಧಿ ತಂದ ತಿದ್ದುಪಡಿಯಿಂದಲೇ ಸ್ಥಳೀಯ ಸಂಸ್ಥೆಗಳಿಗೆ ಎಲೆಕ್ಷನ್ ನಡೀತಿರೋದು. ಇದಕ್ಕೆಲ್ಲಾ ನೀವು ತಯಾರಿ ಮಾಡಿಕೊಳ್ಳಬೇಕು.ಎಂಪಿ ಎಲೆಕ್ಷನ್‌ನಲ್ಲಿ ಗೆದ್ದೋ ಸೋತ್ರೋ ಮುಖ್ಯವಲ್ಲ. ಎಲ್ಲಾ ಸೆಲ್‌ಗಳಲ್ಲಿ ಲೀಡರ್‌ಗಳು ಆಕ್ಟೀವ್ ಆಗಿರಬೇಕು. ಇಲ್ಲಾಂದ್ರೆ ಡಿಸಾಲ್ವ್ ಮಾಡಬೇಕಾಗುತ್ತೆ ಎಂದು ಎಚ್ಚರಿಕೆ ನೀಡಿದರು. ಬೂತ್ ಮಟ್ಟದಲ್ಲಿ ಲೀಡ್ ಕೊಡಬೇಕು, ಇಲ್ಲಾಂದ್ರೆ ಅಧಿಕಾರ ಯಾರೂ ಕೇಳಬಾರದು. ಖಾದಿ ಬಟ್ಟೆ, ಒಂದು ಕಾರ್ ಇಟ್ಕೊಂಡು ಎಂಎಲ್‌ಎ, ಎಂಎಲ್‌ಸಿ ಮಾಡಿ ಅಂದ್ರೆ ಆಗಲ್ಲ. ಲೀಡ್ ತಂದುಕೊಡಬೇಕು.ಇಲ್ಲಾಂದ್ರೆ ಹೊಸಬರನ್ನ ತಯಾರಿ ಮಾಡ್ತೀವಿ. ಮೂರ್ನಾಲ್ಕು ತಿಂಗಳಲ್ಲಿ ಪ್ಲ್ಯಾನ್ ಆಫ್ ಆಕ್ಷನ್ ರೆಡಿ ಮಾಡ್ತೀವಿ.ಎಲ್ಲದಕ್ಕೂ ತಾವು ತಯಾರಾಗಿರಬೇಕು.ನಾಲ್ಕು ವೋಟ್ ಹಾಕಿಸದೆ ಬಂದು ಸ್ಥಾನ ಕೇಳ್ತೀರಾ ಎಂದು ಪ್ರಶ್ನಿಸಿದರು. ಮೊದಲು ನಿಮ್ಮ ಬೂತ್‌ನಲ್ಲಿ ಸಂಘಟನೆ ಮಾಡಿ. ಬೂತ್ ಲೀಡ್ ಕೊಡಿಸಿ ಬಂದು ನಾಯಕತ್ವ ಕೇಳಿ. ಇಲ್ಲದೆ ಹೊದ್ರೆ ನಾಯಕತ್ವ ಕೊಡಲ್ಲ. ಬಿಳಿ ಜುಬ್ಬಾ, ಬಿಳಿ ಕಾರು ತೆಗೆದುಕೊಂಡು ಬಂದು ಸ್ಥಾನ ಕೇಳೋದಲ್ಲ. ಮೊದಲು ಸಂಘಟನೆ ಮಾಡಿ, ಇಲ್ಲ ಜಾಗ ಖಾಲಿ ಮಾಡಿ.ನಾವು ಹೊಸ ನಾಯಕತ್ವ ಬೆಳೆಸುತ್ತೇವೆ. ನಾನು ಸದ್ಯ ಕೆಪಿಸಿಸಿ ಅಧ್ಯಕ್ಷನಾಗಿದ್ದೇನೆ. ಇನ್ನೂ ಎಷ್ಟು ದಿನ ಇರ್ತೇನೆ ಅನ್ನುವುದು ಗೊತ್ತಿಲ್ಲ. ನಮ್ಮ ಪಕ್ಷದ ನಾಯಕತ್ವ ಬುನಾದಿ ಗಟ್ಟಿ ಮಾಡಬೇಕು. ಬೂತ್ ಮಟ್ಟದಲ್ಲಿ ಗಟ್ಟಿ ಮಾಡಬೇಕು ಎಂದು ಕರೆ ನೀಡಿದರು.

## ಭಾರತದ ಸಂವಿಧಾನ ಜಗತ್ತಿಗೆ ಶ್ರೇಷ್ಠ

**ಅಥಣಿ :** ಡಾ.ಬಾಬಾಸಾಹೇಬ ಅಂಬೇಡ್ಕರ್ ಭಾರತದ ದೇಶದ ಆಸ್ತಿ ಅವರು ರಚಿಸಿದ ಭಾರತದ ಸಂವಿಧಾನ ಜಗತ್ತಿನ ಅತ್ಯಂತ ದೊಡ್ಡ ಮತ್ತು ಶ್ರೇಷ್ಠ ಸಂವಿಧಾನ. ಅವರು ರಚಿಸಿರುವ ಸಂವಿಧಾನದಿಂದ ಭಾರತವು ಜಗತ್ತಿನಲ್ಲಿಯೇ ಸುಭದ್ರ ಹಾಗೂ ಸಾರ್ವಭೌಮ ರಾಷ್ಟ್ರವಾಗಿದೆ. ಪ್ರಜಾಪ್ರಭುತ್ವಕ್ಕೆ ಸಂವಿಧಾನವೇ ಅಡಿಪಾಯ. ಸಂವಿಧಾನದಿಂದ ಭಾರತದ ಪ್ರಜಾಪ್ರಭುತ್ವದ ಬೇರುಗಳು ಬಲವಾಗಿವೆ. ಎಂದು ಕಾಂಗ್ರೆಸ್ ಯುವ ನಾಯಕ ಚಿದಾನಂದ ಸವದಿ ಹೇಳಿದರು.

» **ಅಂಬೇಡ್ಕರ್ ಅವರ ಶಿಕ್ಷಣ ,ಸಂಘಟನೆ ಹೋರಾಟ ನಮಗೆಲ್ಲರಿಗೂ ಪ್ರೇರಣೆ**

ತಾಲೂಕಿನ ಕಟಗೇರಿ ಗ್ರಾಮದಲ್ಲಿ ಆಯೋಜಿಸಿದ್ದ ಡಾ. ಬಿ. ಆರ್. ಅಂಬೇಡ್ಕರ್ ಅವರ 133 ನೇ ಜಯಂತೋತ್ಸವ ಕಾರ್ಯಕ್ರಮವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡುತ್ತಿದ್ದರು. ಸಂವಿಧಾನ ಬರೆದು ಭಾರತದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆಯ ಬಲಪಡಿಸಿದ ಕೀರ್ತಿ ಡಾ. ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ ಅವರ ಅವರ ತತ್ವ, ಸಿದ್ಧಾಂತಗಳು ಆಚಾರ ವಿಚಾರ ,ಆದರ್ಶ, ಶಿಕ್ಷಣ ,ಸಂಘಟನೆ ಹೋರಾಟ ನಮಗೆಲ್ಲರಿಗೂ ಪ್ರೇರಣೆಯ ಯಾಗಿವೆ' ಅವರು ತಿಳಿಸಿದಂತೆ ನಾವೆಲ್ಲರೂ ಅರಿಕೆ ಮಾಡಿಕೊಳ್ಳಬೇಕು. ಅವರ ಜೀವನ ಚರಿತ್ರೆ ನಮಗೆಲ್ಲರಿಗೂ ಸ್ಫೂರ್ತಿದಾಯಕವಾಗಿದೆ' ಎಂದರು.

'ತಮ್ಮ ಜೀವನಪೂರ್ತಿ ದೇಶದ ಏಳ್ಗೆ, ಸಮಾಜದ ಉನ್ನತಿಗಾಗಿ ಶ್ರಮಿಸಿದ ಅಂಬೇಡ್ಕರ್ ಅವರು ಉಜ್ವಲ ಭಾರತದ ಕನಸು ಕಂಡಿದ್ದರು. ಅಸ್ಪೃಶ್ಯತೆಯ ನಿವಾರಣೆ, ಅಸಮಾನತೆಯನ್ನು ತೊಡೆದು ಹಾಕುವುದು, ಎಲ್ಲರಿಗೂ ಶಿಕ್ಷಣ ಹಾಗೂ ಉದ್ಯೋಗದ ಸಮಾನ ಅವಕಾಶಗಳು ಸಿಗಬೇಕು ಎಂಬ ಮಹಾದಾಸೆಯನ್ನು ಬಾಬಾ ಸಾಹೇಬರು ಹೊಂದಿದ್ದರು ಎಂದರು.

ಈ ವೇಳೆ ಮುಖಂಡರಾದ ಸದಾಶಿವ ಬುಟಾಳಿ ಮಾತನಾಡಿ ವಿಶ್ವದ ಅತಿ ದೊಡ್ಡ ಪ್ರಜಾಪ್ರಭುತ್ವ ದೇಶವಾದ ಭಾರತಕ್ಕೆ ಅಂಬೇಡ್ಕರ್‌ರವರು ಅತ್ಯುತ್ತಮ ಸಂವಿಧಾನ ರಚಿಸಿ ಭದ್ರ ಬುನಾದಿ ಹಾಕಿದ್ದಾರೆ ಎಲ್ಲಾ ಜಾತಿ ಧರ್ಮಗಳಿಗೆ ದೊರೆಯಬೇಕಾದ ಸಾಮಾಜಿಕ ನ್ಯಾಯ ಒದಗಿಸಿದ್ದಾರೆ ಪ್ರತಿಯೊಬ್ಬ ಭಾರತೀಯರಿಗೆ ಸಮಾನ ಹಕ್ಕು ನೀಡಿ ,ಸಮಾನತೆಯ ಬಾಳ್ವೆಯ ಬದುಕಿನ ಮಾರ್ಗ ತೋರಿದ್ದಾರೆ ಅವರು ಹಾಕಿಕೊಟ್ಟ ಮಾರ್ಗ ನಮಗೆ ದಾರಿದೀಪವಾಗಿದೆ' ಎಂದರು. ಆನಂತರ ಶಿಕ್ಷಕರಾದ ಎಸ್ ಎನ್ ಕಾಂಬಳೆ ಮಾತನಾಡಿ ಡಾ. ಬಿ. ಆರ್. ಅಂಬೇಡ್ಕರ್ ಅವರು ಅಸ್ಪೃಶ್ಯತೆಯ ಪರಿಕಲ್ಪನೆಯನ್ನು ತೊಡೆದು ಹಾಕಲು ಜೀವಮಾನದ ಹೋರಾಟವನ್ನು ಮಾಡಿದರು. ಅವರ ಬದುಕು. ನಮ್ಮೆಲ್ಲರಿಗೆ ಮಾದರಿಯಾಗಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನ ಅಥಣಿ ಪುರಸಭೆ ಸದಸ್ಯ ಕಲ್ಲೇಶ ಮಡ್ಡಿ ವಹಿಸಿದ್ದರು. ಅಶೋಕ ಮಗದುಮ್, ಗ್ರಾಪಂ ಅಧ್ಯಕ್ಷ ಗುರುಪಾದ ಸವದಿ, ಬಾಪು ಗಸ್ತಿ, ಸುಧೀರ್ ಮಡ್ಡಿ, ಮಂಜು ಭಜಂತ್ರಿ. ಮುರುಗೇಶ ನಂದಿಕೋಲಮಠ. ಭರತೇಶ ಕಲಾಲ. ಸಿದ್ಧಾರ್ಥ ಮಡ್ಡಿ. ಶಿವಲಿಂಗ ಪೂಜಾರಿ, ಶಿವಪ್ಪ ಗಣಿ, ಬಸವರಾಜ ಸೊನ್ನದ, ಮುರಸಿದ್ದ ಹಾರೂಗೇರಿ , ಸಿದ್ಧಾರೂಢ ಕಾಂಬಳೆ, ಯಮನಪ್ಪ ಕಾಂಬಳೆ, ರಾಜು ಭಜಂತ್ರಿ, ಅಣ್ಣಪ್ಪ ಭಜಂತ್ರಿ, ಈಶ್ವರ ಭಜಂತ್ರಿ, ಯಲ್ಲಪ್ಪ ಕಾಂಬಳೆ, ಸಂಗಪ್ಪ ಕಾಂಬಳೆ, ಶೆಟ್ಟಪ್ಪ ಮಾಂಗ ಇದ್ದರು.

## ಡಿವೈಎಸ್‌ಪಿ ಬ್ಯಾಂಕ್ ಖಾತೆಗೆ ಕನ್ನ

ಈ ಸಂಬಂಧ ಹಾಸನ ನಗರದ ಸಿಇಎನ್ ಪೊಲೀಸ್ ಠಾಣೆಗೆ ಮುರಳೀಧರ್ ಅವರು ದೂರು ನೀಡಿದ್ದಾರೆ. ಮಡಿಕೇರಿಯ ಕೆನರಾ ಬ್ಯಾಂಕ್ ಮುಖ್ಯಶಾಖೆ ಹಾಗೂ ಭಾಗಮಂಡಲದ ಕೆನರಾಬ್ಯಾಂಕ್‌ನ ಶಾಖೆಯಲ್ಲಿ ಪಿ.ಕೆ.ಮುರಳೀಧರ್ ಖಾತೆಗಳನ್ನು ಹೊಂದಿದ್ದಾರೆ.

ಅಷ್ಟಕ್ಕೂ ಆಗಿದ್ದೇನು?: ಮೇ 20 ರಂದು ಮಧ್ಯಾಹ್ನ 1:30ರ ವೇಳೆಗೆ ಡಿವೈಎಸ್‌ಪಿ ಅವರ ಮೊಬೈಲ್ ಸಂಖ್ಯೆಗೆ ಖಾಲಿ ಮೆಸೇಜ್‌ಗಳು ಬಂದಿವೆ. ಇದಾದ ನಂತರ ತಮ್ಮ ಗಮನಕ್ಕೇ ಬಾರದೇ ಬೇರೆ ಬೇರೆ ಬ್ಯಾಂಕ್ ಖಾತೆಗಳಿಂದ ಹಣ ವರ್ಗಾವಣೆ ಆಗಿರುವುದು ಬೆಳಕಿಗೆ ಬಂದಿದೆ. ಮಡಿಕೇರಿಯಲ್ಲಿರುವ ಕೆನರಾ ಬ್ಯಾಂಕ್ ಮುಖ್ಯಶಾಖೆ ಖಾತೆಯಿಂದ ಬೆಳಗ್ಗೆ 10.29 ಗಂಟೆಯಿಂದ ಮಧ್ಯಾಹ್ನ 1.30 ಗಂಟೆವರೆಗೆ ಒಟ್ಟು 25 ವರ್ಗಾವಣೆಗಳ ಮೂಲಕ ಒಟ್ಟು 12,12,711 ರೂ. ಕೆನರಾಬ್ಯಾಂಕ್ ಭಾಗಮಂಡಲ ಶಾಖೆ ಖಾತೆಯಿಂದ ಬೆಳಿಗ್ಗೆ 10.28 ಗಂಟೆಯಿಂದ ಮಧ್ಯಾಹ್ನ 12.56 ಗಂಟೆವರೆಗೆ ಒಟ್ಟು 10 ವರ್ಗಾವಣೆ ಮೂಲಕ 3,88,050 ರೂ. ಎಗರಿಸಿದ್ದಾರೆ. ಎರಡು ಕೆನರಾ ಬ್ಯಾಂಕ್ ಖಾತೆಗಳಿಂದ ಒಟ್ಟು 15,98,761 ರೂ. ಹಣವನ್ನು ಸೈಬರ್ ಕಳ್ಳರು ಎಗರಿಸಿದ್ದಾರೆ. ಸದ್ಯ ಖದೀಮರನ್ನು ಪತ್ತೆ ಮಾಡಿ ತಮ್ಮ ಹಣ ವಾಪಸ್ ಕೊಡಿಸುವಂತೆ ಸೆನ್ ಪೊಲೀಸ್ ಠಾಣೆಗೆ ಡಿವೈಎಸ್‌ಪಿ ಬಿ.ಕೆ ಮುರುಳೀಧರ್ ದೂರು ನೀಡಿದ್ದಾರೆ.

## ಬಿಜೆಪಿ ನಾಯಕರು ಜೈಲಿಗೆ ಹೋಗಲಿದ್ದಾರೆ: ಅತಿಶಿ

ಯಾಕೆಂದರೆ ಈ ಸಂಪೂರ್ಣ ಮದ್ಯದ ಹಗರಣವು ಬಿಜೆಪಿಯ ರಾಜಕೀಯ ಪಿತೂರಿಯಾಗಿದೆ. ಚುನಾವಣಾ ಕಣದಲ್ಲಿ ಎಎಪಿಯನ್ನು ಸೋಲಿಸಲು ಬಿಜೆಪಿಗೆ ಸಾಧ್ಯವಾಗದಿದ್ದಾಗ ಪಿತೂರಿ ಹೊರಹೊಮ್ಮಿತು. ಇದಕ್ಕಾಗಿ ಇಡಿ ಮತ್ತು ಸಿಬಿಐ ಅನ್ನು ಬಳಸಲಾಯಿತು ಎಂದು ಆರೋಪಿಸಿದರು.ಮಂಗಳವಾರ ಮುಂಜಾನೆ, ಮದ್ಯದ ಹಗರಣ ಪ್ರಕರಣದಲ್ಲಿ ದೆಹಲಿ ಮಾಜಿ ಉಪಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಅವರ ಜಾಮೀನು ಅರ್ಜಿಯನ್ನು ದೆಹಲಿ ಹೈಕೋರ್ಟ್ ವಜಾಗೊಳಿಸಿದೆ. ಈ ನಡುವೆ ಅನಾರೋಗ್ಯದಿಂದ ಬಳಲುತ್ತಿರುವ ಪತ್ನಿಯನ್ನು ವಾರಕ್ಕೊಮ್ಮೆ ಭೇಟಿಯಾಗಲು ಕೋರ್ಟ್ ಅನುಮತಿ ನೀಡಿದೆ.

## ಕರಾವಳಿ 3 ದಿನ ಯೆಲ್ಲೋ ಅಲರ್ಟ್

ಅತಿ ಹೆಚ್ಚು ಮಳೆ ಆಗಿರುವ ಸ್ಥಳಗಳು: ನೊಣಬೂರು, ಶಿವಮೊಗ್ಗ: 86.5 ಮಿ.ಮೀ, ಉತ್ತರ ಕನ್ನಡ ಜಿಲ್ಲೆಯ ಬೆಂಗ್ರೆ: 81.5ಮಿ.ಮೀ., ಹೆಬೆಲ್: 80ಮಿ.ಮೀ. ಜಾಲಿ: 74ಮಿ.ಮೀ., ನಾಗವಾರ, ರಾಮನಗರ: 74ಮಿ.ಮೀ ಮಳೆಯಾಗಿದೆ. ನಿನ್ನೆ ಮಡಿಕೇರಿಯಲ್ಲಿ ಸುರಿದ ಭಾರೀ ಮಳೆಗೆ ಕುಶಾಲನಗರದ ಕೂಡ್ಲೂರಿನ ಕೆ.ಕೆ.ನಿಂಗಪ್ಪ ಬಡಾವಣೆಯಲ್ಲಿ ತಡೆಗೋಡೆ ಕುಸಿದು ಮನೆಗೆ ಹಾನಿಯಾಗಿದೆ. ಕುಶಾಲನಗರ ಉರ್ದು ಶಾಲಾ ಶಿಕ್ಷಕಿಯಾಗಿರುವ ಶಾಂತಲಾ ಎಂಬುವರಿಗೆ ಸೇರಿದ ಮನೆಯ ಬೆಡ್ ರೂಂ, ಅಡುಗೆ ಕೋಣೆ, ಡೈನಿಂಗ್ ರೂಂ ಗೋಡೆ ಹಾನಿಯಾಗಿದೆ. ತಡೆಗೋಡೆ ಕುಸಿದು ಮನೆಗೆ ಬಿದ್ದ ಹಿನ್ನಲೆ ಅಂದಾಜು 15 ಲಕ್ಷ ನಷ್ಟವಾಗಿದ್ದು, ಸೂಕ್ತ ಪರಿಹಾರ ನೀಡುವಂತೆ ಮಾಲೀಕರು ಒತ್ತಾಯ ಮಾಡಿದ್ದಾರೆ.

## ಹೇಮಾ ಕೂದಲು ಸ್ಯಾಂಪಲ್ ಟೆಸ್ಟ್!

**ಮೊದಲನೇ ಪುಟದಿಂದ...**

ಸ್ಟೇಷನ್ ಬೇಲ್ ಮೇಲೆ ರಕ್ತದ ಮಾದರಿ ಕೊಟ್ಟು ಹೋಗಿರೋ ನಟಿಗೆ ಪೊಲೀಸರು ಮಾಸ್ಟರ್ ಸ್ಟ್ರೋಕ್ ಕೊಡಲು ಮುಂದಾಗಿದ್ದಾರೆ ಅನ್ನೋದು ಗೊತ್ತಾಗಿದೆ. ರೇವ್ ಪಾರ್ಟಿಯಲ್ಲಿ ಕುಣಿದು ಕುಪ್ಪಳಿಸಿದ್ದ ತೆಲುಗು ನಟಿ ಹೇಮಾಗೆ ಪೊಲೀಸರು ಬ್ಲಡ್ ಸ್ಯಾಂಪಲ್ ಪಡೆದು ಕಳಿಸಿದ್ದಾರೆ. ಬ್ಲಡ್ ಸ್ಯಾಂಪಲ್ ನಲ್ಲಿ ಪಾಸಿಟಿವ್ ಬಂದರೆ ಹೇರ್ ಪಾಲಿಕಲ್ ಟೆಸ್ಟ್ ಮಾಡಿಸಲು ಪೊಲೀಸರು ಮುಂದಾಗಿದ್ದಾರೆ.ಡ್ರಗ್ಸ್ ಸೇವನೆ ಮಾಡಿರೋದು ಹೇರ್ ಪಾಲಿಕಲ್ ಟೆಸ್ಟ್ ನಲ್ಲಿ ಗೊತ್ತಾಗಲಿದೆ. ಹಾಗಾಗಿ ಪೊಲೀಸ್ ಹೇರ್ ಪಾಲಿಕ್ ಟೆಸ್ಟ್ ಮೊರೆ ಹೋಗಲು ಮುಂದಾಗಿದ್ದಾರೆ.

## ಪೇದೆಯಿಂದ ಎಸ್‌ಐ, ಎಸಿಪಿಗೆ ಕೊಲೆ ಬೆದರಿಕೆ

ಪೊಲೀಸ್ ಪೇದೆ ರೇಣುಕಾನಾಯಕ್ ಅವರನ್ನೂ ಅಮಾನತು ಮಾಡುವಂತೆ ಶಿಫಾರಸು ಮಾಡಲಾಗಿತ್ತು. ತನ್ನಹೆಸರನ್ನು ಅಮಾನತುಶಿಕ್ಷೆಗೆಶಿಫಾರಸುಮಾಡಿದ ಕಾರಣಕ್ಕೆಬಾಣಸವಾಡಿ ಉಪವಿಭಾಗದ ಎಸಿಪಿಹಾಗೂ ಇನ್ಸ್‌ಪೆಕ್ಟರ್ ಅವರಿಗೆಪೇದೆ ರೇಣುಕಾನಾಯಕ್ ಕೊಲೆಮಾಡುವುದಾಗಿ ಬೆದರಿಕೆ ಹಾಕಿದ್ದಾರೆ. ಇದರಿಂದ ಆತಂಕಗೊಂಡ ಎಸಿಪಿ ಅವರು, ಕೊನೆ ಕ್ಷಣದಲ್ಲಿ ತಮ್ಮ ಶಿಫಾರಸು ಹಿಂಪಡೆದು.ಒಂದು ತಿಂಗಳು ರಜೆ ಕೊಟ್ಟು ಕಳಿಸಿದ್ದಾರೆ. ಈ ಪ್ರಕರಣದ ತನಿಖೆಯನ್ನು ಸಿಸಿಬಿಗೆ ವರ್ಗಾಯಿಸಿ ನಗರ ಪೊಲೀಸ್ ಆಯುಕ್ತಬಿ. ದಯಾನಂದ್ ಆದೇಶಹೊರಡಿಸಿದ್ದಾರೆ.

## ಬೆಂಗ್ಳೂರಲ್ಲಿ ನೆಲಕಚ್ಚಿದ 800 ವಿದ್ಯುತ್ ಕಂಬ

ಮೆಜೆಸ್ಟಿಕ್‌ನಿಂದ ರಾಜಾಜಿನಗರ ಕಡೆ ತೆರಳುವ ರಸ್ತೆಯಲ್ಲಿ ಬಸ್ ನಿಲ್ದಾಣದ ಪಕ್ಕವೇ ವಿದ್ಯುತ್ ಕಂಬ ಅಪಾಯಕ್ಕೆ ಆಹ್ವಾನ ನೀಡುತ್ತಿದೆ. ವಿದ್ಯುತ್ ಕಂಬದ ಕೆಳಭಾಗದಲ್ಲಿ ಬಹುತೇಕ ಓಪನ್ ಆಗಿದ್ದು ಎರಡೇ ಎರಡು ಕಂಬಿಗಳ ಮೇಲೆ ಇಡೀ ಕಂಬ ನಿಂತಿದೆ. ಪಕ್ಕದಲ್ಲೇ ಇರೋ ಮತ್ತೊಂದು ಕಂಬದಲ್ಲಿ ಜಂಕ್ಷನ್ ಬಾಕ್ಸ್ ಬಾಯ್ತೆರೆದಿದ್ದು ಅಪಾಯದ ಸೂಚನೆ ನೀಡ್ತಿದೆ.ಪ್ರತಿನಿತ್ಯ ನೂರಾರು ಜನ ಓಡಾಡೋ ಈ ರಸ್ತೆಯಲ್ಲಿ ಯಾವುದೇ ಕ್ಷಣದಲ್ಲಿ ಅಪಾಯ ಎದುರಾಗೋ ಲಕ್ಷಣ ಎದ್ದು ಕಾಣುತ್ತಿದೆ.

ಅತ್ತ ಮಹಾಲಕ್ಷ್ಮೀ ಲೇ ಔಟ್, ನಂದಿನಿ ಲೇ ಔಟ್ ಸುತ್ತಮುತ್ತ ಮೂರ್ನಾಲ್ಕು ಕಡೆ ವಿದ್ಯುತ್ ಕಂಬ ವಾಲಿದ್ದು, ಜನರ ಜೀವ ಬಲಿ ಪಡೆಯುವ ಮೊದಲೇ ಎಚ್ಚೆತ್ತುಕೊಳ್ಳಿ ಎಂದು ಜನರು ಬೆಸ್ಕಾಂಗೆ ಮನವಿ ಮಾಡಿದ್ದಾರೆ.

ಇತ್ತ ವಿದ್ಯುತ್ ಕಂಬಗಳು ವಾಲಿರೋದನ್ನು ಒಪ್ಪಿಕೊಂಡಿರುವ ಬೆಸ್ಕಾಂ, ಮಳೆ ಇರುವುದರಿಂದ ಒಂದ?ಟು ಕಡೆ ಹೀಗಾಗೊದೆ.ಈಗ ಸಮಸ್ಯೆ ಬಗೆಹರಿಸುತ್ತಿದ್ದೇವೆ ಎಂದಿದೆ. ಅಲ್ಲದೆ ಮಳೆ-ಗಾಳಿಗೆ 9.19 ಕೋಟಿ ರೂ.ನ?ಟವಾಗಿದೆ. ಗ್ರಾಹಕರಿಗೆ ವಿದ್ಯುತ್ ನೀಡಬೇಕಿರುವುದರಿಂದ ಮಳೆ ಕಡಿಮೆಯಾದಾಗ ಸರಿಪಡಿಸುತ್ತೇವೆ ಎಂದು ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ನಾಗರಾಜ್ ಹೇಳಿದ್ದಾರೆ. ಒಟ್ಟಿನಲ್ಲಿ ರಸ್ತೆಗುಂಡಿ, ಮರಗಳ ಕಂಟಕ ಸೇರಿ ಹಲವು ಅವಾಂತರಗಳಿಂದ ಸುಸ್ತಾಗಿದ್ದ ಬೆಂಗಳೂರು ಮಂದಿಗೆ ಈಗ ವಿದ್ಯುತ್ ಕಂಬಗಳಿಂದ ಸಂಕ?ಟ ಎದುರಾಗುವ ಭೀತಿ ಕಾಡುತ್ತಿದೆ. ಮಳೆಗಾಲ ಶುರುವಾಗುತ್ತಿದ್ದು, ಆಪತ್ತು ಎದುರಾಗುವ ಮೊದಲೇ ನಗರದಲ್ಲಿರುವ ವಾಲಿದ ಕಂಬಗಳು, ಅಪಾಯಕ್ಕೆ ಆಹ್ವಾನ ನೀಡುತ್ತಿರೋ ಟ್ರಾನ್ಸ್‌ಫಾರ್ಮರ್‌ಗಳಬಗ್ಗೆಬೆಸ್ಕಾಂ ಗಮನಹರಿಸಬೇಕಿದೆ ಎಂದುಸಾರ್ವಜನಿಕರು ಆಗ್ರಹಿಸಿದ್ದಾರೆ.

## ಸಿಎಂ ವಿರುದ್ಧ ಕಾನೂನು ಹೋರಾಟ

ಮೈಸೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ವಿರೋಧಿಗಳಿಗೆ ತೊಂದರೆ ಕೊಡುವುದು. ದ್ವೇಷದ ರಾಜಕಾರಣ ಮಾಡುವುದಷ್ಟೆ ಸರಕಾರದ ಕೆಲಸ ಆಗಿದೆ. ಸರ್ಕಾರದ ಪ್ರಾಯೋಜಕತ್ವದಲ್ಲಿ ಮೇ 30 ರಂದು ಹಾಸನದಲ್ಲಿ ಪ್ರತಿಭಟನೆ ಆಯೋಜನೆ ಮಾಡಲಾಗಿದೆ. ಅಂಗನವಾಡಿ ಕಾರ್ಯಕರ್ತರನ್ನು ಪ್ರತಿಭಟನೆಗೆ ಕರೆ ತರಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ನನಗೆ ಹೇಳಿದ್ದರೆ ನಾನೇ ಒಂದಿಷ್ಟು ಮಹಿಳೆಯರನ್ನು ಪ್ರತಿಭಟನೆಗೆ ಕಳುಹಿಸುತ್ತಿದ್ದೆ ಎಂದು ವಾಗ್ದಾಳಿ ಮಾಡಿದರು.

ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಬಳಿ ಇರುವವರೆಲ್ಲ ಭಯೋತ್ಪಾದಕರೇ, ಬಹಳಷ್ಟು ಭಯೋತ್ಪಾದಕರು ಅವರ ಸುತ್ತಮುತ್ತ ಇದ್ದಾರೆ. ನನಗೆ ಡಿಕೆ ಶಿವಕುಮಾರ್ ಕಂಡರೆ ಅಸೂಯೆ ಅಂತಾ ಹೇಳಿದ್ದಾರೆ. ನಾನು ಯಾಕೆ ಅವರನ್ನು ನೋಡಿ ಅಸೂಯೆ ಪಡಲಿ ವಿಡಿಯೋ ಮಾಡಿರುವುದು ಒಂದು ಭಾಗ. ವಿಡಿಯೋವನ್ನು ಚುನಾವಣೆಗಾಗಿ ವಿತರಿಸಿದ್ದು ಅಪರಾಧ ಅಲ್ವಾ? ವಿಡಿಯೋ ಮಾಡಿದ್ದಕ್ಕಿಂತ ಅದನ್ನು ಹಂಚಿದ್ದು ಹೆಚ್ಚು ಅಪರಾಧ ಅಲ್ವಾ? ಎಂದು ಪ್ರಶ್ನಿಸಿದರು.

ಮಹಾನುಭಾವರು 1980 ರಲ್ಲೇ ಸಿಡಿ ಫ್ಯಾಕ್ಟರಿ ಓಪನ್ ಮಾಡಿದ್ದರು. ಅಧಿಕಾರ ಯಾರ ಅಪ್ಪನ ಮನೆ ಆಸ್ತಿಯೂ ಅಲ್ಲ. ರಾಜಕೀಯದಲ್ಲಿ ಏಳು ಬೀಳು ಅದು ಭಗವಂತನ ಇಚ್ಛೆ. ಇದರಲ್ಲಿ ಅಸೂಯೆ ಯಾಕೆ?ಪ್ರಧಾನಿ ಸ್ಥಾನವನ್ನೇ ಅತ್ಯಂತ ಸುಲಭವಾಗಿ ತೆರವು ಮಾಡಿದ ವಂಶ ನಮ್ಮದು. ಎಲ್ಲ ಅಧಿಕಾರವನ್ನು ನಾವು ನೋಡಿಯಾಗಿದೆ. ನಮಗೆ ಅಧಿಕಾರ ಬೇಡ ಅಂದರೂ ಬಂದಿದೆ. ನಾವು ಅಧಿಕಾರ ಹುಡುಕಿಕೊಂಡು ಹೋಗಿಲ್ಲ. ನಿಮಗೆ ಇದು ಗೊತ್ತಿರಲಿ ಎಂದರು.

ಪೆನ್ ಡ್ರೈವ್ ಮೂಲ ವ್ಯಕ್ತಿ ಕಾರ್ತಿಕ್. ಕಾರ್ತಿಕ್ ಹಾಸನದ ಕಾಂಗ್ರೆಸ್ ಅಭ್ಯರ್ಥಿ ಇಟ್ಟುಕೊಂಡು ಡಿಕೆ ಸುರೇಶ್ ಬಳಿಗೆ ಮೊದಲು ಹೋಗಿದ್ದನು. ನಂತರ ವಿಡಿಯೋಗಳನ್ನು ಸಿಡಿ ಶಿವಕುಮಾರ್ ಕಾಪಿ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು.

ನನ್ನ ಬಳಿ ಇರುವ ಪೆನ್?ಡ್ರೈವ್ ನಿಮ್ಮ ಸರ್ಕಾರದ ವರ್ಗಾವಣೆಯ ಭ್ರಷ್ಟಾಚಾರದ್ದು. ಅದನ್ನು ನಾನು ಈಗ ಬಿಟ್ಟರೆ ಅದು ನನ್ನದೇ ಸೃಷ್ಟಿ ಅಂತ ನೀವು ಹೇಳುತ್ತೀರಿ. ಎಸ್ ಐಟಿಗೆ ಇದುವರೆಗೂ ಕೊಟ್ಟ ಯಾವ ಪ್ರಕರಣ ತಾರ್ಕಿಕ ಅಂತ್ಯ ಕಂಡಿದೆ ಹೇಳಿ? ನನ್ನ ಅವಧಿಯಲ್ಲಿ ಯಾವ ಪ್ರಕರಣವನ್ನು ಎಸ್ ಐಟಿಗೆ ಕೊಟ್ಟರಲಿಲ್ಲ. ನಾನು ಪ್ರಜ್ವಲ್ ಪರ ಇಲ್ಲ, ಆರೋಪ ಸಾಬೀತಾದ್ರೆ ಶಿಕ್ಷೆ ಕೊಡಿ ಎಂದರು.

ಮೈತ್ರಿಗೂ ಪೆನ್‌ಡ್ರೈಗೂ ಸಂಬಂಧ ಇಲ್ಲ. ಪ್ರಜ್ವಲ್ ಕರ್ನಾಟಕದಲ್ಲಿ ಇದ್ದಾಗಲೇ ನನ್ನ ಸಂಪರ್ಕದಲ್ಲಿ ಇರಲಿಲ್ಲ ಇನ್ನೂ ಈಗ ಇರುತ್ತಾನಾ. ಸತ್ಯ. ಪ್ರಜ್ವಲ್ ಹೆಚ್.ಡಿ. ರೇವಣ್ಣನ ಸಂಪರ್ಕದಲ್ಲೂ ಇಲ್ಲ. ಪೆನ್‌ಡ್ರೈವ್ ಪ್ರಕರಣದಿಂದ ದೇವೇಗೌಡರ ಕುಟುಂಬಕ್ಕೆ ಸ್ವಲ್ಪ ಡ್ಯಾಮೇಜ್ ಆಗಿರುವುದು. ನಾನು ಈಗ ಏನಾದರೂ ವಿದೇಶಕ್ಕೆ ಹೋದರೆ ಪ್ರಜ್ವಲ್ ರಕ್ಷಣೆಗೆ ಹೋಗಿದ್ದಾರೆ ಅಂತ ಇವರು ಸುದ್ದಿ ಹಬ್ಬಿಸಿ ಬಿಡುತ್ತಾರೆ. ಯಾವ ಕರ್ಮ ಗ್ರಹಚಾರ ನಮಗೆ. ಪ್ರಜ್ವಲ್ ವಿದೇಶಕ್ಕೆ ಹೋಗುವುದು ಅವತ್ತೆ ಗೊತ್ತಾಗಿದ್ದರೆ ನಾನು ಅವತ್ತೆ ಅವನನ್ನು ತಡೆಯುತ್ತಿದ್ದೆ. ಪ್ರಜ್ವಲ್ ಭಯ ಬಿದ್ದಿರಬಹುದು ಅದಕ್ಕೆ ಭಾರತಕ್ಕೆ ಬರುತ್ತಿಲ್ಲ. ಪ್ರಜ್ವಲ್, ವಕೀಲರ ಸಲಹೆ ಬೇಡ ನೈತಿಕತೆ ಉಳಿಸಿಕೊಳ್ಳಲು ದೇಶಕ್ಕೆ ವಾಪಸ್ಸು ಬಾ. ತಪ್ಪು ಮಾಡಿಲ್ಲ ಅನ್ನುವುದಾರೆ ಎದುರಿಸು. ತಪ್ಪು ಮಾಡಿದ್ದರೆ ಈ ನಾಡಿನ ಕಾನೂನು ಪ್ರಕಾರ ಶಿಕ್ಷೆ ಅನುಭವಿಸು ಎಂದು ಪ್ರಜ್ವಲ್ ರೇವಣ್ಣಗೆ ಹೇಳಿದರು.

# ಸರ್ಕಾರ ಜನರನ್ನು ಭಯದ ವಾತಾವರಣದಲ್ಲಿ ಬದುಕುವ ಧಾರುಣ ಸ್ಥಿತಿಗೆ ತಲುಪಿಸಿದೆ

**ಪಾಂಡವಪುರ:** ಪದೇ ಪದೇ ಮಹಿಳೆಯರ ಮೇಲೆ ದೌರ್ಜನ್ಯ, ಹಲ್ಲೆ, ಹತ್ಯೆ ಅವ್ಯಾಹತವಾಗಿ ನಡೆಯುತ್ತಿದ್ದು, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವುದು ಕಂಡುಬಂದಿದೆ. ರಾಜ್ಯ ಸರ್ಕಾರ ಜನರನ್ನು ಭಯದ ವಾತಾವರಣದಲ್ಲಿ ಬದುಕುವ ಧಾರುಣ ಸ್ಥಿತಿಗೆ ತಲುಪಿಸಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಡಾ. ಎಸ್.ಎನ್.ಇಂದ್ರೇಶ್ ಆರೋಪಿಸಿದರು.

ಆಡಳಿತ ಮತ್ತು ಕಾನೂನು ಸುವ್ಯವಸ್ಥೆಯನ್ನು ಹೇಗೆ ಹತೋಟಿಗೆ ತರಬೇಕು ಎಂಬ ಸಾಮರ್ಥ್ಯವೇ ಇಲ್ಲದ ಗೃಹ ಸಚಿವರು ರಾಜ್ಯದಲ್ಲಿ ಇದ್ದಾರೆ. ಪರಿಸ್ಥಿತಿಯನ್ನು ಅವಲೋಕನ ಮಾಡಲೂ ಅಸಮರ್ಥರಾಗಿರುವ ರಾಜ್ಯ ಸರ್ಕಾರ ಇರುವ ಕಾರಣಕ್ಕೋಸ್ಕರ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವುದು ಕಂಡುಬಂದಿದೆ ಎಂದು ದೂರಿದರು. ಪ್ರತಿಯೊಂದರಲ್ಲೂ ರಾಜಕೀಯ ಲಾಭದ ಹುನ್ನಾರ, ಮತಬ್ಯಾಂಕ್ ಸಂರಕ್ಷಣೆಯ ಕಾರಣಕ್ಕೆ ಹಿಂದೆ ಕಾನೂನು ಸುವ್ಯವಸ್ಥೆಗೆ ಹೆಸರುವಾಸಿಯಾಗಿದ್ದ ಕರ್ನಾಟಕ ರಾಜ್ಯ ಇಂದು ಗೂಂಡಾ ರಾಜ್ಯವಾಗಿ ಮತ್ತು ಕೊಲೆಗಡುಕರ ರಾಜ್ಯವಾಗಿ ಪರಿವರ್ತನೆಯಾಗಿದೆ ಎಂದು ಕಿಡಿಕಾರಿದರು.

ಸಿಟಿ ಕ್ರೈಮ್ ಮತ್ತು ರಾಷ್ಟ್ರೀಯ ಕ್ರೈ ಬ್ಯೂರೋ ಪ್ರಕಾರ 11 ತಿಂಗಳಲ್ಲಿ ಶೇ.60ಕ್ಕಿಂತ ಹೆಚ್ಚು ಕ್ರಿಮಿನಲ್ ಚಟುವಟಿಕೆ ಹೆಚ್ಚಾಗಿರುವುದು ಕಂಡುಬಂದಿದೆ. ವಿಶೇಷವಾಗಿ ಮಹಿಳೆಯರ ಮೇಲಿನ ಅಮಾನುಷ ಕೃತ್ಯಗಳು ಹೆಚ್ಚಾಗಿವೆ ಎಂದು ಅವರು ದೂರಿದರು.

ಹುಬ್ಬಳ್ಳಿಯ ಅಂಜಲಿಯ ಹತ್ಯಾ ಪ್ರಕರಣ, ಅದಕ್ಕೂ ಮೊದಲು ನೇಹಾ ಪ್ರಕರಣ, ಬೆಳಗಾವಿಯಲ್ಲಿ ನಡೆದ ದಲಿತ ಮಹಿಳೆಯ ವಿವಸ್ತ್ರಗೊಳಿಸಿದ ಅಮಾನವೀಯ ಘಟನೆ, ರೊಟ್ಟಿ ಕೇಳಿದ ದಲಿತ ಯುವಕನ ಹತ್ಯೆ, ಮತ್ತೊಂದೆಡೆ ಮತಾಂಧ ಶಕ್ತಿಗಳು ಸ್ವಚ್ಛಂದವಾಗಿ ವಿಜೃಂಭಿಸುತ್ತಿದ್ದರೆ ಇನ್ನೊಂದು ಕಡೆ ಕೊಲೆಗಡುಕರು, ಗುಂಡಾ ರಾಜ್ಯವಾಗಿ ಕರ್ನಾಟವನ್ನು ಪರಿವರ್ತನೆ ಮಾಡುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ಕೈಯ್ಯಲ್ಲಿ ರಾಜ್ಯ ಸುರಕ್ಷಿತವಾಗಿಲ್ಲ. ಅಪಾಯಕಾರಿ ಸ್ಥಿತಿಯಲ್ಲಿದೆ ಎಂಬುದನ್ನು ಇದಕ್ಕಿಂತಲೂ ಸಾಕ್ಷಿ ಬೇಕಾ ಎಂದು ಪ್ರಶ್ನಿಸಿದ್ದಾರೆ.

ರಾಜ್ಯ ಗೃಹ ಸಚಿವರು ಈ ಕೂಡಲೇ ರಾಜೀನಾಮೆ ಕೊಡಬೇಕು. ಈ ಸಂಬಂಧ ಬಿಜೆಪಿ ರಾಜ್ಯಾದ್ಯಂತ ಹೋರಾಟ ಮಾಡಬೇಕಾಗುತ್ತದೆ. ಒಬ್ಬ ಅಸಮರ್ಥ ರಾಜ್ಯದ ಗೃಹ ಸಚಿವರು ಕೂಡಲೇ ರಾಜೀನಾಮೆ ಕೊಡಬೇಕು ಎಂದು ಒತ್ತಾಯಿಸಿದರು.

## ಉದ್ಯೋಗ ಮೇಳ

**ಅರಸೀಕೆರೆ :** ಮಾಲೇಕಲ್ ತಿರುಪತಿಯಲ್ಲಿರುವ ಶ್ರೀ ಚಂದ್ರಶೇಖರ ಭಾರತಿ ಐ.ಟಿ.ಐ ಆವರಣದಲ್ಲಿ ಇದೇ 21ರಂದು ಮಂಗಳವಾರ ಹೆಸರಾಂತ ಕಂಪನಿಗಳಿಂದ ಉದ್ಯೋಗ ಮೇಳವನ್ನು ತಮ್ಮ ಸಂಸ್ಥೆಯ ವತಿಯಿಂದ ಆಯೋಜಿಸಲಾಗಿದೆ ಎಂದು ಶ್ರೀ ಚಂದ್ರಶೇಖರ ಭಾರತಿ ಐ.ಟಿ.ಐ ಕಾಲೇಜಿನ ಪ್ರಾಚಾರ್ಯ ಕೆ.ಆರ್.ಸುರೇಶ್ ತಿಳಿಸಿದ್ದಾರೆ

ಪತ್ರಕರ್ತರೊಂದಿಗೆ ಮಾತನಾಡಿದ ಅವರು ಗ್ರಾಮೀಣ ವಿದ್ಯಾರ್ಥಿಗಳಿಗೆ ಭವಿಷ್ಯ ರೂಪಿಸುವ .ಸಲುವಾಗಿಯೇ ಸಂಸ್ಥಾಪಕರು ಈ ಕಾಲೇಜನ್ನು ಪ್ರಾರಂಭಿಸಿದ್ದಾರೆ ಪ್ರಸ್ತುತ ದ್ವಿತೀಯ ವರ್ಷದ ಐ ಟಿ ಐ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗಾಗಿ ಈ ಕ್ಯಾಂಪಸ್ ನಡೆಯುತ್ತಿದ್ದು ಹೆಸರಾಂತ .ಕಂಪನಿಗಳಾದ, ಟೊಯೋಟೊ, ಆರ್ಟೆಕ್ ಮಿಷನರಿ ಕಂಪನಿ, ಎ ಟಿ ಎಸ್ ಕಂಪನಿ, ಈಕ್ಯಾಪ್ ಕಂಪನಿಗಳು, ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲು ಆಗಮಿಸುತ್ತಿರುವುದಾಗಿ ಹೇಳಿದ ಅವರು ಬೆಳಗ್ಗೆ 10-30 ಕ್ಕೆ ಉದ್ಯೋಗ ಮೇಳಕ್ಕೆ ಆಗಮಿಸುವ ವಿದ್ಯಾರ್ಥಿಗಳು ತಮ್ಮ ಮೊದಲನೇ ವರ್ಷದ ಅಂಕಪಟ್ಟಿಯೊಂದಿಗೆ ಹಾಜರಾಗಬೇಕೆಂದು ತಿಳಿಸಿದರು. ಚಂದ್ರಶೇಖರ ಭಾರತಿ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಅಶೋಕ್ ಹಾರನಹಳ್ಳಿ ಅವರು. ಅಧ್ಯಕ್ಷತೆ ವಹಿಸಿ ಮೇಳವನ್ನು ಉದ್ಘಾಟಿಸಲಿದ್ದಾರೆ ಸಂಸ್ಥೆಯ ಉಪಾಧ್ಯಕ್ಷ ಕಲ್ಯಾಡಿ ಹಿರಿಯಣ್ಣ ಕಾರ್ಯದರ್ಶಿ ವೇಣುಗೋಪಾಲ್ ಮತ್ತು ನಿರ್ದೇಶಕರುಗಳು ಉಪಸ್ಥಿತರಿರುವರು ಎಂದು ಹೇಳಿದ್ದಾರೆ.

# ಮನೆಗಳ್ಳರ ಬಂಧನ

**ಶಿವಮೊಗ್ಗ:** ಮನೆಗಳ್ಳತನದ ಆರೋಪದ ಮೇರೆಗೆ ಶಿವಮೊಗ್ಗದ ಹಸೂಡಿ ಫಾರಂನ ನಿವಾಸಿ ಬಸಣ್ಣ ಯಾನೆ ಶರಫೀಯ ಎಂಬುವನನ್ನ ಬಂಧಿಸಿ 4.85 ಲಕ್ಷ ರೂರೂ ಮೌಲ್ಯದ ಚಿನ್ನಾಭರಣವನ್ನ ವಶಕ್ಕೆ ಪಡೆಯಲಾಗಿದೆ.

ದಿನಾಂಕ:-16-02-2024 ರಂದು ಆನವಟ್ಟಿ ಗ್ರಾಮದ ಸದಾಶಿವಗೌಡ, (64), ರವರ ವಾಸದ ಮನೆಯ ಬೀಗವನ್ನು ಮುರಿದು ಮನೆಯಲ್ಲಿದ್ದ ಬಂಗಾರದ ಒಡವೆಗಳನ್ನು ಹಾಗೂ ನಗದು ಹಣವನ್ನು ಕಳ್ಳತನ ಮಾಡಿಕೊಂಡು ಹೋಗಿದ್ದು ಈ ಕುರಿತು ಆನವಟ್ಟಿ ಪೊಲೀಸ್ ಠಾಣೆಲ್ಲಿ ದೂರು ದಾಖಲಾಗಿತ್ತು.

ಪ್ರಕರಣದ ಆರೋಪಿತರ ಮತ್ತು ಕಳುವಾದ ಮಾಲು ಪತ್ತೆಗಾಗಿ ಮಿಥುನ್ ಕುಮಾರ್ ಜಿ. ಕೆ. ಐಪಿಎಸ್, ಪೊಲೀಸ್ ಅಧೀಕ್ಷಕರು, ಶಿವಮೊಗ್ಗ ಜಿಲ್ಲೆ, ಅನಿಲ್ ಕುಮಾರ್ ಭೂಮರಡ್ಡಿ, ಹೆಚ್ಚುವರಿ ಪೊಲೀಸ್ ಅಧಿಕ್ಷಕರು-1, ಶಿವಮೊಗ್ಗ ಜಿಲ್ಲೆ ಮತ್ತು ಕಾರಿಯಪ್ಪ, ಎ ಜಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕರು-2, ಶಿವಮೊಗ್ಗ ಜಿಲ್ಲೆರವರ ಮಾರ್ಗದರ್ಶನದಲ್ಲಿ

ಕೇಶವ್, ಪೊಲೀಸ್ ಉಪಾಧೀಕ್ಷಕರು, ಶಿಕಾರಿಪುರ ಉಪ ವಿಭಾಗ ಮತ್ತು ರಮೇಶ್ ರಾವ್, ಸಿಪಿಐ ಸೊರಬ ವೃತ್ತ ರವರ ಮೇಲ್ವಿಚಾರಣೆಯಲ್ಲಿ, ಶಿವಾನಂದ ವೈ ಕೆ ಪಿಎಸ್‌ಐ ಮತ್ತು ವಿಟ್ಟಲ್ ಎಂ ಅಗಾಸಿ ಪಿಎಸ್‌ಐ ಆನವಟ್ಟಿ ಪೊಲೀಸ್ ಠಾಣೆ ರವರ ನೇತೃತ್ವದಲ್ಲಿ ಸಿಬ್ಬಂದಿಗಳಾದ ಹೆಚ್.ಸಿ ಕಲಂದರ್,

ಗಿರೀಶ್, ಪಿಸಿ ಜಗದೀಶ್, ಮಂಜುನಾಥ್,ಮಲ್ಲೇಶ್,ಹರಿಪ್ರಸಾದ್,ಚಿಕ್ಕಪ್ಪ ಕಡಕೋಳ, ಹನುಮಂತ ಹಾಗೂ ಬೆರಳಚ್ಚು ವಿಭಾಗ ಶಿವಮೊಗ್ಗದ ಅಧಿಕಾರಿಗಳಾದ ಕೆಂಚಪ್ಪ ಬಿ, ಪಿಐ, ರಮೇಶ್ ನಾಯ್ಕಾ, ಎ.ಎಸ್.ಐ, ಮಹಾದೇವಮ್ಮ ಎ.ಎಸ್.ಐ, ಮಲ್ಲಿಕಾರ್ಜುನ ಸ್ವಾಮಿ ಹೆಚ್.ಸಿ, ತ್ಯಾಗರಾಜ್, ಪಿ ಸಿ, ಮತ್ತು ಕಿರಣ್ ಪಿ.ಸಿ ರವರನ್ನು ಒಳಗೊಂಡ ತನಿಖಾ ತಂಡವನ್ನು ರಚಿಸಲಾಗಿರುತ್ತದೆ.

ತನಿಖಾ ತಂಡವು ಈ ದಿನ ದಿನಾಂಕ 18-05-2024 ರಂದು ಪ್ರಕರಣದ ಕಳುವು ಆರೋಪಿ ಶಿವಮೊಗ್ಗ ಹಸೂಡಿ ಗ್ರಾಮದ ಹಕ್ಕಿಪಿಕ್ಕಿ ಕ್ಯಾಂಪ್ ನ ನಿವಾಸಿ ಬಸಣ್ಣ ಶರಫೀಯ, (26), ಈತನನ್ನು ದಸ್ತಗಿರಿ ಮಾಡಲಾಗಿದೆ. ಅಂದಾಜು ಮೌಲ್ಯ 4,85,000/- ರೂಗಳ ಒಟ್ಟು 87 ಗ್ರಾಂ ತೂಕದ ಬಂಗಾರದ ಆಭರಣಗಳನ್ನು ವಶಪಡಿಸಿಕೊಳ್ಳಲಾಗಿದೆ.

ಸದರಿ ತನಿಖಾ ತಂಡದ ಈ ಉತ್ತಮವಾದ ಕಾರ್ಯವನ್ನು ಮಾನ್ಯ ಪೊಲೀಸ್ ಅಧೀಕ್ಷಕರು ಶಿವಮೊಗ್ಗ ಜಿಲ್ಲೆರವರು ಪ್ರಶಂಸಿ ಅಭಿನಂದನೆ ಸಲ್ಲಿಸಿರುತ್ತಾರೆ

# ಮಹಾರುದ್ರಯಾಗ ಮತ್ತು ಕುಂಭಾಭಿಷೇಕ

**ಬೆಂಗಳೂರು:** ನಗರದ ತ್ಯಾಗರಾಜ ನಗರದಲ್ಲಿರುವ ಶ್ರೀ ಸಾಯಿ ಆಧ್ಯಾತ್ಮಿಕ ಕೇಂದ್ರ, 1974 ರಲ್ಲಿ ಪ್ರರಂಭವಾಗಿ 70 ವರ್ಷಗಳಷ್ಟು ಹಳೆಯದಾಗಿದೆ. ಭಕ್ತರಿಗಾಗಿ ಮತ್ತು ಜನಹಿತ ಮತ್ತು ಧಾರ್ಮಿಕ ಕಾರ್ಯಗಳಿಗಾಗಿ ಅಂದಿನ ಭಕ್ತ ರಾಧಾಕೃಷ್ಣ ಸ್ವಾಮಿಜಿಯವರಿಂದ ಇದು ಸ್ಥಾಪಿತವಾಗಿದ್ದು ಇಂದು ಮೂರು ಶಾಖೆಗಳನ್ನ ಹೊಂದಿರುವ ಕೇಂದ್ರ ಶ್ರೀ ಸಾಯಿನಾಥ ಸ್ವಾಮಿಯ ದೇವಾಲಯವನ್ನ ನಿರ್ಮಿಸಿದೆ. ದಿನವು ನೂರಾರು ಭಕ್ತರು ಕೇಂದ್ರಕ್ಕೆ ಭೇಟಿಕೊಟ್ಟು ದೇವರ ದರ್ಶನ ಆಶೀರ್ವಾದ ಪಡೆಯುತ್ತಿದ್ದಾರೆ. ಕೇಂದ್ರದಿಂದ ಉತ್ತಮ ಶಿಕ್ಷಣ ಜವಾಬ್ದಾರಿ, ಆರೋಗ್ಯ ಕಾಳಜಿ ಮತ್ತು ಅನ್ನದಾನದ ಜವಬ್ದಾರಿಯನ್ನ ನಿರ್ವಹಿಸಲಾಗುತ್ತಿದೆ. ಇಂದು ಕೇಂದ್ರದ ಸಾಯಿಪ್ರಸಾದ ಯೋಜನೆಯಡಿಯಲ್ಲಿ ಪ್ರತಿದಿನ ಎಂಟು ಸಾವಿರ ಶಾಲಾ ಮಕ್ಕಳಿಗೆ, ಕಿದ್ವಾಯಿ ಆಸ್ಪತ್ರೆಯ ಸಿಬ್ಬಂದಿ ಮತ್ತು ರೋಗಿಗಳು ಸೇರಿ ಒಂದು ಸಾವಿರ ಜನ ಹಾಗು ದೇವಸ್ಥಾನದಲ್ಲಿ ಪದಿನ ಕನಿಷ್ಠ 200 ಜನರಿಗೆ ಉಚಿತವಾಗಿ ಆಹಾರವನ್ನ ಪ್ರಸಾದ ರೋಪದಲ್ಲಿ ದಸೋಹ ಮಾಡಲಾಗುತ್ತಿದೆ. ಇದಕ್ಕಗಿ ಸರಕಾರದಿಂದ ಒಂದು ನಯಾ ಪೈಸೆ ಪಡೆಯದೆ ಭಕ್ತರು ಕೊಡುವ ದೇಣಿಗೆಯಿಂದ ನಡೆಸಲಾಗುತ್ತಿದೆ.

ಸಾಯಿ ಸ್ಪಿರುಚಿಯಲ್ ಸೆಂಟರ್ ಪ್ರಾರಂಭವಾಗಿ ಎಪ್ಪತ್ತು ವರ್ಷಗಳಾದ ಸಂದರ್ಭದಲ್ಲಿ ದೇವಸ್ಥಾನದ ಆಡಳಿತ ಮಂಡಳಿಯವರು ಭಕ್ತರ ನೆರವಿನಿಂದ ತ್ಯಾಗರಾಜ ನಗರದ ದೇವಸ್ಥಾನದಲ್ಲಿ ಮಹಾರುದ್ರಯಾಗ ಮತ್ತು ಮಹಾ ಕುಂಭಾಭಿಷೇಕವನ್ನ ಆಯೋಜಿಸಿದ್ದು ಮೇ 21 ರಿಂದ 26 ರವರೆಗೆ ಪೋರ್ಣ ದಿನಗಳಕಾಲ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

ದಿನಾಂಕ 21 ರಂದು ಗಂಗಾಪೂಜೆ, ಗೋಪೂಜೆ, ಯಾಗಶಾಲ ಪ್ರವೇಶ, ಗುರುಗಣಪತಿ ಪೂಜೆ ಮುಂತಾದವು ನಡೆಯಲಿವೆ.

ದಿನಾಂಕ22 ರಂದು ಮಹಾರುದ್ರಯಾಗ ಸಂಕಲ್ಪ, ಮಹಾನ್ಯಾಸಪೂರ್ವಕ ಶ್ರೀ ರುದ್ರ ಪುರಶ್ಚರಣೆ, ಸಹಸ್ರಮೋದಕ ಗಣಪತಿ ಹೋಮ, ರಾಕ್ಷೋಘ್ನ ಹೋಮ, ಆಘೋರಾಸ್ತ್ರ ಹೋಮ,

23 ರಂದು ರುದ್ರಾಭಿಷೇಕ, ಶ್ರೀ ರುದ್ರ ಪುರಶ್ಚರಣೆ, ಶ್ರೀ ವಿಷ್ಣು ಸಹಸ್ರನಾಮ ಹೋಮ, ಕಮಲಪುಷ್ಪ ಶ್ರೀಲಕ್ಷ್ಮೀ ಹೋಮ, ಸುದರ್ಶನ ಹೋಮ, ದುರ್ಗಸಪ್ತಶತ ಪಾರಯಣ ನಡೆಯಲಿದೆ.24 ರಂದು ಶ್ರೀರುದ್ರ ಪುರಶ್ಚರಣ, ನವಗ್ರಹ ಹೋಮ, ಶ್ರೀ ಚಂಡಿಕಾ ಹೋಮ, ಮತ್ತು ರುದ್ರಾದೀಪ ನಮಸ್ಕಾರ ನಡೆಯಲಿದೆ.

25 ರಂದು ಅಗ್ನಿಪ್ರತಿಷ್ಠೆ ಶ್ರೀ ಮಹಾರುದ್ರಯಾಗ, ವಾಸ್ತು ಹೋಮ, ಪರ್ಯಾಯ ಹೋಮ ನಡೆಯಲಿದೆ,26 ರಂದು ಬೆಳಿಗ್ಗೆ ಪ್ರತಿಷ್ಠಾಂಗ ಹೋಮ, ಪೂಜಾಂಗ ಹೋಮ, ಶ್ರೀದಕ್ಷಿಣಾಮೂರ್ತಿ ಹೋಮ, ಶ್ರೀದತ್ತಾತ್ರೇಯ ಮೂಲ ಮಂತ್ರ ಹೋಮ, ಶ್ರೀ ಸಾಯಿ ಬಾಬಾ ಮೂಲ ಮಂತ್ರ ಹೋಮ ನಡೆಯಲಿದ್ದು, ಬೆಳಿಗ್ಗೆ 10.30 ರಿಂದ 11.15 ಘಂಟೆಗೆ ಮಹಾ ಕುಂಭಾಭಿಷೇಕ ನಡೆಯಲಿದೆ.

11.30ಕ್ಕೆ ಸ್ವಾಮಿ ಸೌಖ್ಯನಂದಜಿ ಅವರಿಂದ ಪ್ರವಚನ ನಡೆಯಲಿದ್ದು ಪ್ರತಿದಿನದ ಕಾರ್ಯಕ್ರಮದ ನಂತರ ಮಹಾ ಮಂಗಳಾರತಿ ಮತ್ತು ಪ್ರಸಾದ ವಿನಿಯೋಗವಿರುತ್ತದೆ.

ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಸಾವಿರಾರು ಭಕ್ತರು ಭಾಗವಹಿಸಲಿದ್ದು ಉಳಿದಂತೆ ಭಕ್ತರು ಆಗಮಿಸಿ ದೇವರ ಅನುಗ್ರಹ ಪಡೆದು ಈ ಧಾರ್ಮಿಕ ಕಾರ್ಯಕ್ರಮಗಳನ್ನ ಯಶಸ್ವಿ ಮಾಡಿಕೂಡಬೇಕೆಂದು ಸಾಯಿ ಸ್ಪಿರುಚಿಯಲ್ ಸೆಂಟರ್ ಸಮಿತಿಯವರು ಕೋರಿದ್ದಾರೆ.

# ಪೆನ್ ಡ್ರೈವ್ ಪ್ರಕರಣದಲ್ಲಿ ಕಾಂಗ್ರೆಸ್ ಮುಖವಾಡ ಬಯಲು

**ಕೋಲಾರ:** ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಜೀವ ಬಲಿ ಪಡೆಯಲು ರಾಜ್ಯ ಕಾಂಗ್ರೆಸ್ ಸರಕಾರ ಸಂಚು ರೂಪಿಸಿದೆ. ದೇವೇಗೌಡರ ಕುಟುಂಬವನ್ನ ರಾಜಕೀಯವಾಗಿ ಮುಗಿಸಲು ಕಾಂಗ್ರೆಸ್ ಹೊರಟಿದೆ ಎಂದು ಜೆಡಿಎಸ್ ಯುವ ಮುಖಂಡ ಕಡಗಟ್ಟೂರು ವಿಜಯಕುಮಾರ್ ಗಂಭೀರ ಆರೋಪ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ವಕೀಲ ದೇವರಾಜೇಗೌಡರ ಜತೆ ಡಿಸಿಎಂ ಡಿ.ಕೆ. ಶಿವಕುಮಾರ್ ಹಾಗೂ ಮಂಡ್ಯದ ಮಾಜಿ ಸಂಸದ ಎಲ್.ಆರ್.ಶಿವರಾಮೇಗೌಡ ಅವರು ನಡೆಸಿರುವ ಮೊಬೈಲ್ ಸಂಭಾಷಣೆಯ ತುಣುಕುಗಳು ಮಾಧ್ಯಮಗಳಲ್ಲಿ ಬಹಿರಂಗವಾಗಿದೆ. ಇದನ್ನ ನೋಡಿದರೆ ಕಾಂಗ್ರೆಸ್ ದೇವೇಗೌಡರ ಕುಟುಂಬವನ್ನ ರಾಜಕೀಯವಾಗಿ ಮುಗಿಸಲು ಷಡ್ಯಂತ್ರ ಮಾಡಿದೆ. ಆದರೆ ಜೆಡಿಎಸ್ ಪಕ್ಷದ ಕಾರ್ಯಕರ್ತರು ಅವಕಾಶ ಕೊಡುವುದಿಲ್ಲ ಎಂದಿದ್ದಾರೆ.

**ಕಳಚಿ ಬಿದ್ದ ಕಾಂಗ್ರೆಸ್ ಅಸಲಿ ಮುಖ:** ಹೊಂಚು ಹಾಕಿ ಸಂಚು ಮಾಡುವ ಕಾಂಗ್ರೆಸ್ ಪಕ್ಷದ ಅಸಲಿ ಮುಖ ಕಳಚಿ ಕೆಳಕ್ಕೆ ಬಿದ್ದಿದೆ. ಅಂಗೈ ಹುಣ್ಣಿಗೆ ಕನ್ನಡಿ ಬೇಕಿಲ್ಲ... ಹೌದಲ್ಲವೇ ಕಾಂಗ್ರೆಸ್ಸಿಗರೇ? ಸತ್ಯ ನಿಮ್ಮ ಮುಂದೆಯೇ ಇದೆ. ಪೆನ್‌ಡ್ರೈವ್ ಹಂಚಿಕೆಯ ಹೇಯ ಕೃತ್ಯದ ಸಂಚುಗಳೇ ಅವೆಲ್ಲಾ. ದೇವರಾಜೇಗೌಡರ ಹೇಳಿಕೆಯ ನಂತರ ಹೊರಬಿದ್ದಿರುವ ಆಡಿಯೋ ಟೇಪುಗಳೇ ಸಾಕ್ಷಿಯಾಗಿದೆ ಎಂದರು. ವಕೀಲರಾದ ದೇವೇರಾಜೇಗೌಡರೇ ಸ್ವತಃ ಬಿಚ್ಚಿಟ್ಟ ಈ ಸತ್ಯಗಳು ಹಾಗೂ ಆಡಿಯೋ ಟೇಪುಗಳು ಶತಮಾನದ ಇತಿಹಾಸ ಹೊಂದಿರುವ ಕಾಂಗ್ರೆಸ್ ಪಕ್ಷದ ಮಾನವನ್ನು ಬೀದಿ ಬೀದಿಯಲ್ಲಿ ಹರಾಜು ಹಾಕಿವೆ. ಕಂಡವರ ಮನೆಯಲ್ಲಿ ಸಾವು ಬಯಸುವ ಕಾಂಗ್ರೆಸ್ಸಿಗೆ ಧಿಕ್ಕಾರ ಎಂದು ಜೆಡಿಎಸ್ ಯುವ ಮುಖಂಡ ಕಡಗಟ್ಟೂರು ವಿಜಯಕುಮಾರ್ ಕಿಡಿಕಾರಿದ್ದಾರೆ. ರಾಜ್ಯ ಕಾಂಗ್ರೆಸ್ ಹೆಣ್ಣು ಮಕ್ಕಳಿಗೆ ಗೌರವ ಕೊಡುತ್ತೇವೆ ಎಂದು ಹೇಳುವ ಅವರು ತನ್ನ ರಾಜಕೀಯ ಸ್ವಾರ್ಥಕ್ಕಾಗಿ ಪೆನ್ ಡ್ರೈವ್ ಹಂಚಿಕೆ ಮಾಡಿ ಹೆಣ್ಣು ಮಕ್ಕಳಿಗೆ ಅಗೌರವ ತೋರಿದೆ. ಈ ಪೆನ್‌ಡ್ರೈವ್ ಹಂಚಿಕೆ ಮಾಡಿದ ವ್ಯಕ್ತಿಗಳನ್ನು ಇಲ್ಲಿಯವರೆಗೆ ಯಾಕೆ ಬಂಧಿಸಿಲ್ಲ ಎಂದು ಪ್ರಶ್ನಿಸಿದ್ದಾರೆ. ದಿನಕ್ಕೊಂದು ಆಡಿಯೋ ಹೊರಗಡೆ ಬರುತ್ತಿರುವುದನ್ನ ನೋಡಿದರೆ ಅದರಲ್ಲಿ ಕಾಂಗ್ರೆಸ್ ಮಹಾನ್ ನಾಯಕರ ಸಂಭಾಷಣೆಗಳು ಎದ್ದು ಕಾಣುತ್ತಿದೆ. ಇಂತಹವರನ್ನ ಯುವ ರಾಜಕೀಯ ಮುಖಂಡರು ಆದರ್ಶವಾಗಿಟ್ಟುಕೊಳ್ಳುವುದಕ್ಕೆ ನಾಚಿಕೇಗೇಡು ಎಂದಿದ್ದಾರೆ.

# ಹುಳಿಯರು 110/11 ಕೆವಿಯಲ್ಲಿ 2 ದಿನ ವಿದ್ಯುತ್ ವ್ಯತ್ಯಯ

**ಹುಳಿಯಾರು:** ಹುಳಿಯಾರಿನ ತಿಪಟೂರು ರಸ್ತೆಯಲ್ಲಿನ ವಿದ್ಯುತ್ ಕಂಬಗಳ ಸ್ಥಳಾಂತರ ಕಾಮಗಾರಿ ನಿರ್ವಹಿಸಬೇಕಾಗಿರುವುದರಿಂದ ಹುಳಿಯಾರು 110/11 ಕೆವಿ ಉಪಸ್ಥಾವರದ ಎಫ್16 ನಂದಿಹಳ್ಳಿ, ಎಫ್17 ಓಟಿಕೆರೆ, ಎಫ್ 18 ಸೀಗೆಬಾಗಿ, ಎಫ್ 19 ಕಲ್ಲಹಳ್ಳಿ ಮತ್ತು ಎಫ್ 20 ಲಕ್ಷ್ಮೀಪುರ ಪೂರಕಗಳಿಗೆ ಮೇ.22 ರ ಬುಧವಾರ ಹಾಗೂ ಮೇ.23 ರ ಗುರುವಾರದಂದು ಬೆಳಗ್ಗೆ 10 ರಿಂದ 4 ರವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ. ಗ್ರಾಹಕರು ಎಂದಿನಂತೆ ಸಹಕರಿಸಬೇಕಾಗಿ ಹುಳಿಯಾರು ಬೆಸ್ಕಾಂ ಶಾಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಳಗುಲಿ ಜಾಲಿಮರದಮ್ಮನ ಜಾತ್ರೆ

**ಹುಳಿಯಾರು:** ಚಿಕ್ಕನಾಯಕನಹಳ್ಳಿ ತಾಲೂಕು ಹಂದನಕೆರೆ ಹೋಬಳಿಯ ಬೆಳಗುಲಿ ಗ್ರಾಮದ ಶ್ರೀ



ಜಾಲಿಮರದಮ್ಮದೇವಿಯ ಜಾತ್ರಾ ಮಹೋತ್ಸವವನ್ನು ಮೇ.26 ರ ಭಾನುವಾರದಿಂದ ಮೇ.30 ರ ಗುರುವಾರದವರೆವಿಗೆ ಏರ್ಪಡಿಸಲಾಗಿದೆ.ಮೇ.26 ರಂದು ಮಡ್ಲಕ್ಕಿ ಸೇವೆ, ಮೇ.27 ರಂದು ಉತ್ಸವ, ಮದುವಣಗಿತ್ತಿ, ಮೇ.28 ರಂದು ಆರತಿ ಬಾನ, ಮೇ.29 ರಂದು ಹೊಸಕೆರೆ ಶ್ರೀ ಉಡಸಲಮ್ಮ ದೇವಿಯ ಆಗಮನ ಮತ್ತು ರಾಜಬೀದಿ ಉತ್ಸವ. ಮೇ.30 ರಂದು ಗಂಗಾಸ್ನಾನ ಮತ್ತು ಅಗ್ನಿಕೊಂಡೋತ್ಸವ, 1 ಗಂಟೆಗೆ ಅನ್ನಸಂತರ್ಪಣೆ ನಡೆಯಲಿದೆ.

# ಕಣಿವೆಮಾರಮ್ಮದೇವಿ ಜಾತ್ರೆ

**ಹುಳಿಯಾರು:** ಹುಳಿಯಾರು ಹೋಬಳಿಯ ದಬ್ಬಗುಂಟೆಯ ಶ್ರೀ ಕಣಿವೆಮಾರಮ್ಮದೇವಿ ಹಾಗೂ ಶ್ರೀ ಕರಿಯಮ್ಮದೇವಿಯ ಜಾತ್ರಾ ಮಹೋತ್ಸವವನ್ನು ಮೇ.22 ರ ಬುಧವಾರದಿಂದ ಜೂ.1 ರ ಶನಿವಾರದವರೆವಿಗೆ ಏರ್ಪಡಿಸಲಾಗಿದೆ. ಮೇ.22 ರಬುಧವಾರ ಶ್ರೀ ಕರಿಯಮ್ಮದೇವಿ ಆಗಮನ ಹಾಗೂ ಶ್ರೀರಂಗನಾಥಸ್ವಾಮಿ ಶ್ರೀರಾಮದೇವರುಗಳ ಕೂಡುಭೇಟಿ ಮೇ.23 ರಂದು ದಬ್ಬಗುಂಟೆ ಗ್ರಾಮಕ್ಕೆ ಶಾಂತಿ ಕಾರ್ಯಕ್ರಮ, ಮೇ.24 ರಂದು ಬೆಳಗಿನ ಜಾವ ಗಂಗಾಸ್ನಾನ ಮತ್ತು ಬಸವನ ಗುಡ್ಡೆ ಹತ್ತಿರ ಎಲ್ಲಾ ದೇವರುಗಳಿಗೆ ಆರತಿ ಮತ್ತು ಮಹಾಮಂಗಳಾರತಿ ಮತ್ತು ಫಲಹಾರ, ಅನ್ನಸಂತರ್ಪಣೆ ಮೇ.28 ರಂದು ಬೆಳಗ್ಗೆ 9 ಕ್ಕೆ ಕರಿಯಮ್ಮ ದೇವಿಗೆ ಆರತಿಬಾನ, ಮಧ್ಯಾಹ್ನ 12 ಕ್ಕೆ ಕಣಿವೆಮಾರಮ್ಮ ದೇವಿಗೆ ಆರತಿಬಾನ, ಮೇ.29 ರಂದು ಸಂಜೆ 7 ಕ್ಕೆ ದೇವರುಗಳ ಉತ್ಸವ, ಮೇ.30 ರಂದು ಮಡಿಲಕ್ಕಿ ತುಂಬುವ ಕಾರ್ಯಕ್ರಮ, ಜೂ.1 ಕ್ಕೆ ಕರಿಯಮ್ಮ ದೇವಿ ಬೀಳ್ಕೊಡುವ ಮೂಲಕ ಜಾತ್ರಾ ಮಹೋತ್ಸವಕ್ಕೆ ತೆರೆ ಎಳೆಯಲಾಗುವುದು.

# ಕವಿ ಎಂ.ಜವರಾಜ್ ಕೃತಿಗೆ ಪ್ರಶಸ್ತಿ

**ಚಾಮರಾಜನಗರ:** ನಗರದ ಪ್ರತಿಷ್ಠಿತ ರಂಗವಾಹಿನಿ ಸಂಸ್ಥೆ ಮೈಸೂರಿನ ನೆಲೆ ಹಿನ್ನೆಲೆ ಮತ್ತು ರಾಮ ಮನೋಹರ ಲೋಹಿಯ ಟ್ರಸ್ಟ್ ಸಹಯೋಗದಲ್ಲಿ ನೀಡಲಾಗುತ್ತಿರುವ 12ನೇ ವರ್ಷದ ರಾಜ್ಯಮಟ್ಟದ ಮುಳ್ಳೂರು ನಾಗರಾಜ ಕಾವ್ಯ ಪ್ರಶಸ್ತಿಯನ್ನು ತಿ.ನರಸೀಪುರದ ಕವಿ ಎಂ.ಜವರಾಜ್ ಅವರ ಮೆಟ್ಟು ಹೇಳಿದ ಕಥಾ ಪ್ರಸಂಗ ಕೃತಿಗೆ ನೀಡಲಾಗುತ್ತಿದೆ. ಇದೇ



ಮೇ 26ರಂದು ಭಾನುವಾರ ಸಂಜೆ 5.30ಕ್ಕೆ ಮೈಸೂರಿನ ರಮಾ ಗೋವಿಂದ ರಂಗಮಂದಿರದಲ್ಲಿ ಹಮ್ಮಿಕೊಂಡಿರುವ ರಾಜ್ಯಮಟ್ಟದ ಮುಳ್ಳೂರು ನಾಗರಾಜ ರಾಜ್ಯ ಮಟ್ಟದ ಕಾವ್ಯ ಪ್ರಶಸ್ತಿ ಪ್ರದಾನ ಸಮಾರಂಭ ಮತ್ತು ರಾಜಶೇಖರ ಕೋಟ ನೆನಪು ಕಾರ್ಯಕ್ರಮದಲ್ಲಿ ಈ ಪ್ರಶಸ್ತಿಯನ್ನು ಕವಿ ಜವರಾಜ್ ಗೆ ನೀಡಲಾಗುತ್ತಿದೆ. ಪ್ರಶಸ್ತಿಯು 10 ಸಾವಿರ ನಗದು, ಪ್ರಶಸ್ತಿ ಫಲಕ ಒಳಗೊಂಡಿರುತ್ತದೆ.ಈ ಕಾರ್ಯಕ್ರಮವನ್ನು ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಡಾ. ಎಲ್.ಎನ್.ಮುಕುಂದರಾಜು ಉದ್ಘಾಟಿಸುವರು. ನಿವೃತ್ತ ಅರಣ್ಯ ಸಂರಕ್ಷಣಾಧಿಕಾರಿ ಡಾ. ಆರ್. ರಾಜು ಅಧ್ಯಕ್ಷತೆ ವಹಿಸುವರು. ಪ್ರದೇಶ ಅಭಿವೃದ್ಧಿ ಮಂಡಳಿ ನಿರ್ದೇಶಕ ಡಿ ಚಂದ್ರಶೇಖರಯ್ಯ ಪ್ರಾಸ್ತಾವಿಕ ನುಡಿಗಳನ್ನಾಡುವರು. ಭುವನೇಶ್ವರ ವಿವಿ ವಿಶ್ರಾಂತ ಕುಲಪತಿ ಪ್ರೊ॥ ಮಹದೇವ ಪ್ರಶಸ್ತಿ ಪ್ರದಾನ ಮಾಡುವರು. ಪ್ರಶಸ್ತಿ ಪುರಸ್ಕೃತರ ಕುರಿತು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಕವಿ ಸುಬ್ಬು ಹೊಲೆಯಾರ್ ಮಾತನಾಡುವರು. ರಾಜಶೇಖರ ಕೋಟಿ ಕುರಿತು ಒಡನಾಡಿ ಸಂಸ್ಥೆಯ ಸ್ಟ್ಯಾನ್ಲಿ ಮಾತನಾಡುವರು, ಮುಖ್ಯ ಅತಿಥಿಗಳಾಗಿ ನೆಲೆ ಹಿನ್ನೆಲೆ ಸಂಸ್ಥೆಯ ಕೆ.ಆರ್. ಗೋಪಾಲ್ ಕೃಷ್ಣ ಭಾಗವಹಿಸುವರು.

# ಬೈಕ್ ನಡುವೆ ಡಿಕ್ಕಿ: ಸವಾರ ಸಾವು

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಹನೂರು ಪಟ್ಟಣದ ಕೊಳ್ಳೇಗಾಲ ಮುಖ್ಯ ರಸ್ತೆಯಲ್ಲಿ ಎರಡು ಬೈಕ್ ಗಳ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ ಓರ್ವ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಸೋಮವಾರ ಬೆಳಗ್ಗೆ ನಡೆದಿದೆ. ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಣಗಳ್ಳಿ ಗ್ರಾಮದ ರಾಜಶೆಟ್ಟಿ (50)ಎಂಬಾತನೆ ಮೃತ ಪಟ್ಟಂತಹ ದುರ್ದೈವಿ. ಮೃತ ರಾಜಶೆಟ್ಟಿ ಹನೂರು ಪಟ್ಟಣದ ಗೌರಿ ಗೌರಿಶಂಕರ ಕಲ್ಯಾಣ ಮಂಟಪದಲ್ಲಿ ನಡೆಯುತ್ತಿದ್ದ ವಿವಾಹ ಕಾರ್ಯಕ್ರಮಕ್ಕೆ ತೆರಳಿ ವಾಪಸ್ ಆಗುತ್ತಿದ್ದ ವೇಳೆ ಕೊಳ್ಳೇಗಾಲ ಮುಖ್ಯ ರಸ್ತೆಯಿಂದ ಹನೂರಿನ ಕಡೆ ಆಗಮಿಸುತ್ತಿದ್ದ ಮತ್ತೊಂದು ಬೈಕ್ ನಡುವೆ ಡಿಕ್ಕಿಯಾದ ಪರಿಣಾಮ ಈ ಅವಘಡ ಸಂಭವಿಸಿದೆ.ಈ ಘಟನೆಯಲ್ಲಿ ಮಣಗಳ್ಳಿಯ ರಾಜಶೆಟ್ಟಿ ಸ್ಥಳದಲ್ಲಿ ಮೃತಪಟ್ಟರೆ ಮತ್ತೊಂದು ಬೈಕ್ ನಲ್ಲಿದ್ದ ಮಂಡ್ಯ ಮೂಲದ ಸುದೀಪ್, ಪುನೀತ್ ಸೇರಿ ಮತ್ತೊರ್ವನಿಗೂ ಪೆಟ್ಟಾಗಿ ಹನೂರಿನ ಆಸ್ಪತ್ರೆಗೆ ಚಿಕಿತ್ಸೆಗಾಗಿ ರವಾನೆ ಮಾಡಲಾಗಿದೆ. ಈ ಸಂಬಂಧ ಹನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

# ರೈತನಿಂದ ಹಣ ಲಪಾಟಿಸಿದ ಕಿಡಿಗೇಡಿ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಹನೂರು ಪಟ್ಟಣದ ಎಟಿಎಂ ನಲ್ಲಿ ಹಣ ಪಡೆದುಕೊಡಿ ಎಂದು ಕೇಳಿದಂತಹ ರೈತನೊಬ್ಬನಿಗೆ ಕೀಡಿಗೇಡಿಯೋರ್ವ ವಂಚಿಸಿ ಹಣ ಲಪಾಟಿಸಿರುವ ಘಟನೆ ಚಾಮರಾಜನಗರ ಜಿಲ್ಲೆಯ ಹನೂರು ಪಟ್ಟಣದ ಕೆನರಾ ಬ್ಯಾಂಕ್ ನ ಎಟಿಎಮ್ ನಲ್ಲಿ ಜರುಗಿದ್ದು. ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಕುರಟ್ಟಿಹೊಸರು ಗ್ರಾಮದ ರೈತ ಬಸವರಾಜು ಎಂಬಾತನೆ ಹಣ ಕಳೆದುಕೊಂಡಂತಹ ವ್ಯಕ್ತಿಯಾಗಿದ್ದಾನೆ. ಈತ ಹನೂರು ಪಟ್ಟಣದ ಕೆನರಾ ಬ್ಯಾಂಕ್ ನ ಎಟಿಎಂ ಗೆ ಆಗಮಿಸಿ ನನಗೆ ಹಣ ಪಡೆಯಲು ತಿಳಿದಿಲ್ಲ ನನಗೆ ಹಣ ತೆಗೆದುಕೊಳ್ಳಲು ಸಹಾಯ ಮಾಡಿ ಎಂದು ಅಪರಿಚಿತ ವ್ಯಕ್ತಿ ಬಳಿ ಕೇಳಿದಾಗ ಆತ ರೈತ ಕೇಳಿದ 5000 ರೂ ಹಣವನ್ನು ತೆಗದು ಕೊಟ್ಟು ನಂತರ ಎಟಿಎಂನ್ನ ಬದಲಿಸಿ, ಕೋಡ್ ನ್ನು ತಿಳಿದು ಅನಾಮೀಯ ಎಟಿಎಂನ್ನು ರೈತನಿಗೆ ನೀಡಿ ಪರಾರಿಯಾಗಿ ರೈತ ಬಸವರಾಜ್ ಖಾತೆಯಿಂದ ಬರೋಬ್ಬರಿ 61000 ರೂ ಲಪಾಟಿಸಿದ್ದಾನೆ . ಈ ಸಂಬಂಧ ಹಣ ಕಳೆದುಕೊಂಡ ರೈತ ಬಸವರಾಜ್ ಪೋಲಿಸರಿಗೆ ದೂರಿದ್ದು ಹನೂರು ಪೊಲೀಸ್ ಠಾಣೆಯಲ್ಲಿ ಕೂಡ ಪ್ರಕರಣ ದಾಖಲಾಗಿದೆ. ಈ ಸಂಬಂಧ ಹನೂರು ಪೊಲೀಸರು ಕೂಡ ಕಾರ್ಯಪ್ರವೃತ್ತರಾಗಿ ಸೋಮವಾರ ಮದ್ಯಾಹ್ನ 12ಘಂಟೆ ವೇಳೆ ಕೆನಾರಾ ಬ್ಯಾಂಕ್ ಗೂ ತೆರಳಿ ಸಿಸಿಟಿವಿಯನ್ನು ಪರಿಶೀಲಿಸಿದಾಗ ರೈತನಿಗೆ ಅಪರಿಚಿತ ವ್ಯಕ್ತಿ ಸಹಾಯ ಮಾಡಿ ನಂತರ ಪರಾರಿಗಿದ್ದ ದೃಶ್ಯ ಸೆರೆಯಾಗಿದ್ದು ಆ ಕಿಡಿಗೇಡಿಯ ಪತ್ತೆಗೆ ಹನೂರು ಪೊಲೀಸರು ಕೂಡ ವಿವಿಧ ಆಯಾಮಗಳಲ್ಲಿ ಬಲೆ ಬಿಸಿದ್ದಾರೆ.

# ಅತಿಥಿ ರಸಾಯನಶಾಸ್ತ್ರ ಉಪನ್ಯಾಸಕ ಹುದ್ದೆಗೆ ಅರ್ಜಿ ಆಹ್ವಾನ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ನಡೆಸಲಾಗುತ್ತಿರುವ, ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ವಿಜ್ಞಾನ ಕಾಲೇಜು, ಸುಮತಿನಗರ, ಕೆ.ಜಿ.ಎಫ್ ಇಲ್ಲಿನ ವಸತಿ ಕಾಲೇಜನಲ್ಲಿ ಅತಿಥಿ ರಸಾಯನಶಾಸ್ತ್ರ ಉಪನ್ಯಾಸಕ ಹುದ್ದೆ ಖಾಲಿಯಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಹತೆ ಎಂ.ಎಸ್ಸಿ, ಬಿ.ಇಡಿ (ಒ.ಖಿಭಿ.,೫ಜಜ) ಮಾಸಿಕ ಗೌರವ ವೇತನ ರೂ.18150 ಇರುವುದು. ಹೆಚ್ಚಿನ ಮಾಹಿತಿಗಾಗಿ ವಸತಿ ಕಾಲೇಜಿನ ಪ್ರಾಂಶುಪಾಲರಾದ ಕೆ.ವಿ.ನಾಗರಾಜು ರವರ ದೂರವಾಣಿ ಸಂಖ್ಯೆ-9880322844 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಸಮನ್ವಯಾಧಿಕಾರಿ ತಿಳಿಸಿದ್ದಾರೆ.

# ಶ್ರೀನಿವಾಸಪ್ರಸಾದ್ ಅವರ ಹೋರಾಟ ಮೈಗೂಡಿಸಿಕೊಳ್ಳಬೇಕು: ಮಹದೇವಪ್ಪ

**ಚಾಮರಾಜನಗರ:** ವಿ.ಶ್ರೀನಿವಾಸಪ್ರಸಾದ್ ಅವರನ್ನು ಜಿಲ್ಲೆಯ ಜನರು ಸುದೀರ್ಘ ನಾಯಕರನ್ನಾಗಿ ಸ್ವೀಕಾರ ಮಾಡಿದ್ದು ಅವರು ಎಂದಿಗೂ ಜನರ ಮನಸಲ್ಲಿ ಅಜರಾಮರರಾಗಿರುತ್ತಾರೆ ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಅಭಿಪ್ರಾಯಪಟ್ಟರು.

ಚಾಮರಾಜನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ವಿ.ಶ್ರೀನಿವಾಸಪ್ರಸಾದ್ ಅಭಿಮಾನಿ ಬಳಗದ ವತಿಯಿಂದ ಆಯೋಜಿಸಿದ್ದ ಸ್ವಾಭಿಮಾನಿ ಸಂಸದ ವಿ.ಶ್ರೀನಿವಾಸಪ್ರಸಾದ್ ಅವರಿಗೆ ನುಡಿನಮನ ಕಾರ್ಯಕ್ರಮದಲ್ಲಿ ವಿ.ಶ್ರೀನಿವಾಸಪ್ರಸಾದ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿ, ಶ್ರೀನಿವಾಸಪ್ರಸಾದ್ ಅವರು ಸಂವಿಧಾನ ತತ್ವಗಳನ್ನು ತಮ್ಮ ಜೀವನಕ್ಕೆ ಅಳವಡಿಸಿಕೊಂಡಿದ್ದರು. ಆದ್ದರಿಂದಲೇ ಅವರು ಸ್ವಾಭಿಮಾನಿಯಾಗಿದ್ದರು. ಪ್ರತಿಯೊಬ್ಬರು ಅವರ ಹೋರಾಟಗಳನ್ನು ಮೈಗೂಡಿಸಿಕೊಳ್ಳಬೇಕು. ಅಸ್ತಂಗತನಾದ ಮೇಲೆ ಅವರ ಒಳ್ಳೆಯ ವಿಚಾರಗಳನ್ನು ಮಾತನಾಡುತ್ತೇವೆ. ಟೀಕೆಗಳು, ಅಭಿವೃದ್ಧಿಯ ವಿಚಾರವಾಗಿತ್ತು. ಜನರಿಗೆ ಪ್ರೀತಿ, ಸ್ಪಂದನೆ ನೀಡುತ್ತಿದ್ದರು. ಅಸಮಾನತೆ ತೊರೆದು ಅಭಿವೃದ್ಧಿಗೆ ಒತ್ತು ನೀಡಿದ್ದರು ಎಂದರು.

ಜಿಲ್ಲೆಯಲ್ಲಿ ಅವರನ್ನು 50 ವರ್ಷಗಳ ಕಾಲ ಬೆಳೆಸಿದ್ದೇ ಮಹಾನ್ ಸಾಧನೆ, ಚಾಮರಾಜನಗರ ಅತಿರಥ ಮಹಾರಥರಿದ್ದ ಜಿಲ್ಲೆ, ಇಲ್ಲಿನ ಜನರು ಉದಾರಿಗಳು, ಆರು ಬಾರಿ ಸಂಸದರನ್ನಾಗಿ ಮಾಡಿದ್ದೀರಾ. ಸಮ ಸಮಾಜದ ನಿರ್ಮಾಣಕ್ಕೆ ನಿರಂತರವಾಗಿ ಹೋರಾಟ ಮಾಡಿದರು. ಪ್ರತಿಯೊಂದು ರಾಜಕೀಯ ಪಕ್ಷವು ತನ್ನದೇ ಆದ ಸಿದ್ಧಾಂತಗಳನ್ನು ಹೊಂದಿರುತ್ತದೆ. ಸಿದ್ಧಾಂತ,ಕಾಳಜಿಯಿಂದ ತುಂಬಾ ಎತ್ತರಕ್ಕೆ ಬೆಳೆಯುತ್ತದೆ. ಎಲ್ಲ ವರ್ಗದ ಜನರನ್ನು



ಗೌರವಿಸುತ್ತಿದ್ದರು. ಅವರು ಸಹಾಯಕರಾಗಿದ್ದರು. ಯಾವುದೇ ವಿಚಾರದಲ್ಲಿ ರಾಜಿ ಇಲ್ಲ ಎಂದರು. ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಮಾತನಾಡಿ, ಶ್ರೀನಿವಾಸಪ್ರಸಾದ್ ಅವರು ವಿದ್ಯಾರ್ಥಿ ಜೀವನದಲ್ಲಿಯೇ ನಾಯಕತ್ವದ ಗುಣ ಬೆಳೆಸಿಕೊಂಡಿದ್ದು, ಅತಿ ಚಿಕ್ಕ ವಯಸ್ಸಿನಲ್ಲೇ ರಾಜಕೀಯ ಪ್ರವೇಶಿಸಿದ್ದಾರೆ. ಸ್ವಾಭಿಮಾನಕ್ಕೆ ಧಕ್ಕೆ ಬಂದಾಗ ರಾಜಿ ಮಾಡಿಕೊಳ್ಳಲಿಲ್ಲ. ಶ್ರೀನಿವಾಸ್ ಪ್ರಸಾದ್ ಮತ್ತು ಸಿದ್ದರಾಮಯ್ಯ ಇಬ್ಬರೂ ನೇರ ಮಾತನಾಡುವವರು ಮತ್ತು ಜನಪರರು ಎಂದರು. ಮೈಸೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಪ್ರಾಧ್ಯಾಪಕ ಪ್ರೊಸಿನಾಗಣ್ಣ ಮಾತನಾಡಿ, ಶ್ರೀನಿವಾಸ ಪ್ರಸಾದ್ ಅವರು ನಮ್ಮಿಲ್ಲದೆ ಹೋಗಿದ್ದು, ಅವರ ವಿಚಾರಗಳು ಸದಾ ನಮ್ಮೊಂದಿಗೆ ಇರುತ್ತವೆ. ಬದುಕಿನ ಹೋರಾಟದ ಕಥೆ ಹೇಳುತ್ತಿದ್ದರು. ಅವರು ಶಿಕ್ಷಣವನ್ನು ಗೌರವಿಸಿದರು. ಡಾ.ಬಿ.ಆರ್.ಅಂಬೇಡ್ಕರ್ ಅವರ ತತ್ವ, ಸಿದ್ಧಾಂತಗಳನ್ನು ತಿಳಿಸಲು ಅವರ ಪುಸ್ತಕವಿದೆ. ಬುಸಾ ಚಳವಳಿಯಲ್ಲಿ ಪ್ರಮುಖ ಪಾತ್ರ ವಹಿಸಿದ್ದರು ಎಂದರು. ಸತ್ತೂರು ಮಠದ ಶ್ರೀಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ, ಉರಿಲಿಂಗಿ ಪೆದ್ದಿಮಠದ ಜ್ಞಾನಪ್ರಕಾಶ ಸ್ವಾಮೀಜಿ, ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎ.ಆರ್. ಕೃಷ್ಣಮೂರ್ತಿ, ಭಾಗ್ಯಲಕ್ಷ್ಮಿ ವಿ.ಶ್ರೀನಿವಾಸ್ ಪ್ರಸಾದ್, ಪ್ರತಿಮಾ ಪ್ರಸಾರ್, ಪೂರ್ಣಿಮಾ ಪ್ರಸಾದ್, ಮಾಜಿ ಶಾಸಕರಾದ ಎಸ್.ಜಯಣ್ಣ, ಹರ್ಷವರ್ಧನ್, ಕೆಎಡಿ ಅಧ್ಯಕ್ಷ ಹರ್ಷವರ್ಧನ್, ಮಾಜಿ ಸಂಸದ ಎಂ. ಪಿ.ಮರಿಸ್ವಾಮಿ, ಬಿಎಸ್ಪಿ ಜಿಲ್ಲಾಧ್ಯಕ್ಷ ಎನ್.ನಾಗಯ್ಯ, ಮುಖಂಡರಾದ ಮಧುವನಹಳ್ಳಿ ಶಿವಕುಮಾರ್, ಡಾ. ಮೋಹನ್, ಎಂ.ರಾಮಚಂದ್ರ, ಶ್ರೀನಿವಾಸ್ ನಾಯಕ್ ಮತ್ತಿತರರು ಉಪಸ್ಥಿತರಿದ್ದರು.

# ಮತಗಟ್ಟೆ ಧ್ವಂಸ ಪ್ರಕರಣ: ಗ್ರಾಮಸ್ಥರಿಗೆ ಸಾಂತ್ವನ

**ಚಾಮರಾಜನಗರ:** ಏಪ್ರಿಲ್ 26 ರಂದು ನಡೆದ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಲೆ ಮಹದೇಶ್ವರ ಬೆಟ್ಟ ಗ್ರಾಮ ಪಂಚಾಯ್ತಿ ಪರಿಮಿತಿಯ ಇಂಡಿನಗತ್ತ ಮೆಂದಾರೆ ಗ್ರಾಮದಲ್ಲಿ ನಡೆದ ಮತ ಬಹಿಷ್ಕಾರ ವೇಳೆ ಉಂಟಾದ ಮತಗಟ್ಟೆ ಧ್ವಂಸ ಪ್ರಕರಣದಲ್ಲಿ ಬಂಧಿತರಾಗಿ ಜಾಮೀನಿನ ಮೇಲೆ ಬಿಡುಗಡೆಗೊಂಡ ಗ್ರಾಮಸ್ಥರಿಗೆ ಭಾರತೀಯ ಜನತಾ ಪಾರ್ಟಿಯ ರಾಜ್ಯ ಉಪಾಧ್ಯಕ್ಷ ಹಾಗೂ ಹಿಂದುಳಿದ ವರ್ಗಗಳ ಮೋರ್ಚಾ ಜಿಲ್ಲಾಧ್ಯಕ್ಷರು ಭೇಟಿ ಮಾಡಿ ಸಾಂತ್ವಾನ ಹೇಳುವ ಮೂಲಕ ಆತ್ಮಸ್ಥೈರ್ಯ ತುಂಬಿದರು.




ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟದ ಇಂಡಿಗನತ್ತ ಗ್ರಾಮಕ್ಕೆ ಮಾಜಿ ಸಚಿವ ಹಾಗೂ ರಾಜ್ಯ ಬಿಜೆಪಿ ಉಪಾಧ್ಯಕ್ಷ ಎನ್ ಮಹೇಶ್ ಮತ್ತು ಹಿಂದುಳಿದ ಮೋರ್ಚಾ ಜಿಲ್ಲಾಧ್ಯಕ್ಷ ಬಿ ವೆಂಕಟೇಶ್ ಭೇಟಿ ನೀಡಿ ಸಾಂತ್ವಾನ ಹೇಳುವುದಲ್ಲದೆ ನಿಮ್ಮಂದಿಗೆ ನಾವಿದ್ದೇವೆ ಎಂದು ಹೇಳಿ ಧೈರ್ಯ ತುಂಬಿದರು.

ಹಳ್ಳದ ನೀರು , ಕೊಳ್ಳಿಯ ಬೆಳಕು. ಇದೇ ನಮ್ಮ ಬದುಕು ಎಂದು ಕಷ್ಟ ಹೇಳಿದ ಗ್ರಾಮಸ್ಥರ ಮನವಿ ಆಲಿಸಿದ ಬಳಿಕ ರಾಜ್ಯ ಸರ್ಕಾರ , ಜಿಲ್ಲಾಡಳಿತ ವಿರುದ್ಧ ಎನ್.ಮಹೇಶ್ ಕಿಡಿ ಕಾರಿದರು. ಸ್ವಾತಂತ್ರ್ಯ ಬಂದಾಗಿನಿಂದ ಈ ಗ್ರಾಮಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸದಿರುವುದು ನಾಗರೀಕ ಸಮಾಜ ತಲೆತಗ್ಗಿಸುವಂತಾಗಿದೆ, ತಕ್ಷಣವೇ ಜಿಲ್ಲಾಧಿಕಾರಿಗಳು ಗ್ರಾಮಸ್ಥರ ಸಮಸ್ಯೆ ಬಗೆಹರಿಸಬೇಕೆಂದು ಆಗ್ರಹಿಸಿ, ಲೋಕಸಭಾ ಚುನಾವಣಾ ನೀತಿಸಂಹಿತೆ ಮುಗಿದ ಕೂಡಲೆ ಈ ಗ್ರಾಮಗಳಿಗೆ ರಸ್ತೆ ನೀರು, ವಿದ್ಯುತ್ ಕೊಡದಿದ್ದರೆ ಮುಂಬರುವ ಚುನಾವಣೆಗೂ ಇದೇ ಗತಿಯಾಗುತ್ತೆ ಎಂದು ಎಚ್ಚರಿಕೆ ನೀಡಿದ ಮಾಜಿ ಸಚಿವ ಎನ್. ಮಹೇಶ್, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯ್ತಿ ಚುನಾವಣೆಗೆ ಗ್ರಾಮಸ್ಥರು ಮತ್ತೆ ಬಹಿಷ್ಕಾರ ಹಾಕಿದರೆ ಅವರ ಜೊತೆ ತಾವು ಪ್ರತಿಭಟನೆಗೆ ಕೂರುತ್ತೇನೆ ಎಂದು ಎಚ್ಚರಿಕೆ ನೀಡಿದರು. ಇಂಡಿಗನತ್ತ ಗ್ರಾಮದ ಗ್ರಾಮಸ್ಥರ ಸಮಸ್ಯೆ ಬಗೆಹರಿಸಿ ನಾಗರೀಕ ಸಮಾಜದ ಮಾನ ಉಳಿಸಿ ಎಂದು ಎನ್. ಮಹೇಶ್ ಚಾಟಿ ಬೀಸಿದರು.

# ಜೇನುನೊಣ ಕಡಿದು ರೈತ ಸಾವು

**ಚಾಮರಾಜನಗರ:** ಜೇನುನೊಣ ಕಡಿದು ರೈತನೊಬ್ಬ ಸಾವನ್ನಪ್ಪಿರುವ ಘಟನೆ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಬೆಳ್ಳತ್ತೂರು ಗ್ರಾಮದಲ್ಲಿನಡೆದಿದೆ.

ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಬೆಳ್ಳತ್ತೂರು ಗ್ರಾಮದ ತುಳಸಿದಾಸ್ (45) ಸಾವನ್ನಪ್ಪಿದ ದುರ್ದೇವಿಯಾಗಿದ್ದಾರೆ.

ಸೋಮವಾರ ಮದ್ಯಾಹ್ನ ತುಳಸಿ ದಾಸ್ ಹಾಗೂ ಪತ್ನಿ ಆಶಾ ಜೊತೆಗೂಡಿ ತಮ್ಮ ಜಮೀನಿನಲ್ಲಿ ತಮ್ ಜೋಳದ ಫಸಲಿಗೆ ಔಷದಿ ಸಿಂಪಡಿಸುತ್ತಿದ್ದಾಗ ದಿಡೀರ್ ಹೆಜ್ಜೇನು ದಾಳಿ ನೆಡೆದಿದೆ ಈವೇಳೆ ತುಳಸಿದಾಸ್ ಸ್ಥಳದಲ್ಲಿ ಮೃತಪಟ್ಟರೆ ಈತನ ಪತ್ನಿಯಾದ ಆಶಾಗೂ ಕೂಡ ಹೆಜ್ಜೇನು ದಾಳಿಯ ಪರಿಣಾಮ ಗಂಭೀರ ಗಾಯವಾಗಿ ಇವರನ್ನು ಕಾಮಗೆರೆ ಹೋಲಿಕ್ರಾಸ್ ಆಸ್ಪತ್ರೆಗೆ ಚಿಕಿತ್ಸೆಗಾಗಿ ರವಾನೆ ಮಾಡಲಾಗಿದೆ.

ಈಸಂಬಂಧ ಹನೂರು ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ಮೌಂಟ್ ಅಬುವಿನಿಂದ ರಾಜುಬಾಯೀಜೀ ಆಗಮನ

**ಚಾಮರಾಜನಗರ:** ಅಂತರಾಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯಗಳ ಮುಖ್ಯಾಲಯ ಮೌಂಟ್ ಅಬು ರಾಜಾಸ್ಥಾನದಿಂದ ಸೆಪ್ಟಂಬರ್ 23 ರಂದು ಬೆಳಗ್ಗೆ ರಾಜಯೋಗಿ ಬ್ರಹ್ಮಾಕುಮಾರ ರಾಜುಬಾಯಿಜೀಯವರು ನಗರದ ಪ್ರಕಾಶ ಭವನಕ್ಕೆ ಭೇಟಿ ನೀಡಿಲಿದ್ದಾರೆ ಎಂದು ಸಂಸ್ಥೆಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಹೋದರರು ಈಶ್ವರೀಯ ವಿವಿಯಲ್ಲಿ 50 ವರ್ಷದಿಂದ ಸಮರ್ಪಿತರಾಗಿ ಮುರಳಿ ವಿಭಾಗದಲ್ಲಿ ಇಡೀ ಜಗತ್ತಿಗೆ ಭಗವಂತನ ಮಹಾವಾಖ್ಯಗಳನ್ನು ಕಳಿಸುವ ಸೇವೆ ಸಲ್ಲಿಸುತ್ತಿದ್ದಾರೆ. ಗ್ರಾಮೀಣ ಸೇವಾ ವಿಭಾಗದಲ್ಲಿ ರಾಷ್ಟ್ರಾಧ್ಯಕ್ಷರಾಗಿ ಯೋಗಿಕ ಕೃಷಿಯ ಬೇಸಾಯ ಪದ್ಧತಿಯಲ್ಲಿ ಸಂಶೋದಕರಾಗಿದ್ದಾರೆ ಎಂದು ತಿಳಿಸಿದ್ದಾರೆ. ಗುರುವಾರ ಬೆಳಗ್ಗೆ 10 ಗಂಟೆಗೆ ಜಿಲ್ಲಾ ರಾಜಯೋಗ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಂಬೋದನೆ ಮಾಡಲಿದ್ದಾರೆ. 12 ಗಂಟೆಗೆ ಯೋಗಿಕ ಬೇಸಾಯ ಪದ್ಧತಿ ಕುರಿತು ರೈತ ರೊಂದಿಗೆ ಸಂವಾದ ಮಾಡಲಿದ್ದಾರೆ ಎಂದು ತಿಳಿಸಿದ್ದಾರೆ. ಸಂವಾದಕ್ಕೆ ಭಾಗವಹಿಸುವ ರೈತರು ಮೊದಲೇ ಹೆಸರನ್ನು ನೊಂದಾಯಿಸಕೊಳ್ಳಬೇಕು. ಮೊದಲು ಬರುವ 50 ಜನರಿಗೆ ಪ್ರವೇಶ ಅವಕಾಶವಿರುತ್ತದೆ. ಹೆಚ್ಚಿನ ವಿವರಗಳಿಗಾಗಿ ಮೊಬೈಲ್ ಸಂಖ್ಯೆ 7483520495 ಇಲ್ಲವೆ 7899820430ನ್ನು ಸಂಪರ್ಕಿಸುವಂತೆ ತಿಳಿಸಲಾಗಿದೆ.

# ಎಲ್ಲರಿಗೂ ಇಂಜಿನಿಯರಿಂಗ್ ಶಿಕ್ಷಣದ ಅವಕಾಶವಿರಬೇಕು

**ತುಮಕೂರು:** ಪ್ರಸ್ತುತ ವ್ಯವಸ್ಥೆಯಲ್ಲಿ ಉನ್ನತ ಶಿಕ್ಷಣದ ವ್ಯಾಸಂಗಗಳಾದ ವೈದ್ಯಕೀಯ, ಇಂಜಿನಿಯರಿಂಗ್ ಮತ್ತು ಇತರೆ ವೃತ್ತಿಪರ ಶಿಕ್ಷಣವು ಸಮಾಜದ ಎಲ್ಲಾ ವರ್ಗಗಳಿಗೂ ತಲುಪಿ ಪ್ರತಿಭಾವಂತರಿದ್ದೂ, ಆರ್ಥಿಕ ಚೈತನ್ಯವಿಲ್ಲದ ಮಕ್ಕಳು ಉತ್ತಮ ಶಿಕ್ಷಣದಿಂದ ಸಬಲರಾಗಬೇಕೆಂದು ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ.ನರೇಂದ್ರ ವಿಶ್ವನಾಥ್‌ರವರು ತಿಳಿಸಿದರು. ನಗರದ ಶಿರಾರಸ್ತೆಯ ಶ್ರೀದೇವಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯ ವತಿಯಿಂದ ಮೇ.19 ರಂದು ಭಾನುವಾರ ಬೆಳಿಗ್ಗೆ 10 ಗಂಟೆಗೆ ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಪಿ.ಯು.ಸಿ. ಉತ್ತೀರ್ಣರಾಗಿ ಬಿ.ಇ. ಪ್ರವೇಶಾತಿ ಬಯಸುತ್ತಿರುವ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ ಪ್ರವೇಶಾತಿ ಮತ್ತು ವಿದ್ಯಾರ್ಥಿ ವೇತನ ಪರೀಕ್ಷೆ-2024 ಉದ್ಘಾಟನಾ ಸಮಾರಂಭದಲ್ಲಿ ಮಾತನಾಡುತ್ತಾ ಕಾಲೇಜು ಕಳೆದ ಹತ್ತು ವರ್ಷಗಳಿಂದಲೂ ಸ್ಕಾಲರ್ ಶಿಪ್ ಟೆಸ್ಟ್ ನಡೆಸುತ್ತಿದ್ದು, ಈವರೆವಿಗೂ ಹಲವಾರು ವಿದ್ಯಾರ್ಥಿಗಳು ಉಚಿತವಾಗಿ ಪ್ರತಿ ವಿಭಾಗದಲ್ಲೂ ಸೀಟುಗಳನ್ನು ಪಡೆದುಕೊಳ್ಳುತ್ತಿದ್ದು ಹಲವಾರು ಪ್ರತಿಭಾವಂತ ಗ್ರಾಮೀಣ ಭಾಗದ ಆರ್ಥಿಕವಾಗಿ ದುರ್ಬಲರಾದ ವಿದ್ಯಾರ್ಥಿಗಳು ಪ್ರಯೋಜನ ಪಡೆದುಕೊಂಡಿದ್ದಾರೆಂದು ತಿಳಿಸಿದರು.

ನಂತರ ನಡೆದ ಪ್ರವೇಶಾತಿ ಪರೀಕ್ಷೆಯಲ್ಲಿ




ಸುಮಾರು 400 ವಿದ್ಯಾರ್ಥಿಗಳು ಭಾಗವಹಿಸಿದ್ದು ಎಲ್ಲಾ ಉತ್ತರ ಪತ್ರಿಕೆಗಳ ಮೌಲ್ಯಮಾಪನ ನಡೆಸಿ ಅಂದೇ ಫಲಿತಾಂಶದ ರ್‍ಯಾಂಕಿಂಗ್‌ಗಳನ್ನು ಪ್ರಕಟಿಸಲಾಯಿತು. ಪ್ರಥಮ 20 ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ರ್‍ಯಾಂಕ್ ಪ್ರಮಾಣ ಪತ್ರಗಳನ್ನು ವಿತರಿಸಿ ಗೌರವಿಸಲಾಯಿತು. ವಿದ್ಯಾರ್ಥಿಗಳಿಗೆ 4,00,000 ರೂಗಳಿಂದ 1,00,000 ರೂಗಳ ಸ್ಕಾಲರ್ ಶಿಪ್ ಸೌಲಭ್ಯ ಪ್ರಕಟಿಸಲಾಯಿತು. ಮತ್ತು ಮುಂದಿನ ಒಂದು ವಾರದೊಳಗೆ ಪ್ರವೇಶಾತಿ ಪಡೆದುಕೊಳ್ಳುವ ಆಕಾಂಕ್ಷಿಗಳಿಗೆ ವಿಶೇಷವಾಗಿ ಸ್ಕಿಲ್‌ಲ್ಯಾಬ್ ಶುಲ್ಕವಾದ 10,000 ರೂಗಳ ಉಚಿತ ಸೌಲಭ್ಯ ಪ್ರಕಟಿಸಲಾಯಿತು. ಸುಮಾರು 600 ವಿದ್ಯಾರ್ಥಿಗಳು ಮತ್ತು ಪೋಷಕರು ಈ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರು.

ಇದೇ ಸಂದರ್ಭದಲ್ಲಿ ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಮುಖ್ಯಸ್ಥರಾದ ಡಾ.ಎಂ.ಆರ್. ಹುಲಿನಾಯ್ಕರ್, ಶ್ರೀದೇವಿ ವೈದ್ಯಕೀಯ ನಿರ್ದೇಶಕರಾದ ಡಾ.ರಮಣ್ ಎಂ ಹುಲಿನಾಯ್ಕರ್, ಮಾನವ ಸಂಪನ್ಮೂಲ ಮತ್ತು ಮಾಹಿತಿ ತಂತ್ರಜ್ಞಾನ ನಿರ್ದೇಶಕರಾದ ಎಂ.ಎಸ್.ಪಾಟೀಲ್, ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿಯಾದ ಅಂಬಿಕಾ ಎಂ ಹುಲಿನಾಯ್ಕರ್, ಡಾ.ಲಾವಣ್ಯರವರು ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ನೀಡಿ ಅವರ ಇಚ್ಚಿತ ವಿಭಾಗಕ್ಕೆ ಪ್ರವೇಶಾತಿಯ ಅವಕಾಶ ಕಲ್ಪಿಸಲಾಯಿದೆ ಎಂದು ಶುಭ ಹಾರೈಸಿದರು.

ಸೌಜನ್ಯ ಪ್ರಾರ್ಥಿಸಿ, ಡಾ.ಬಿ.ಎನ್.ಪ್ರತಾಪ್ ಸ್ವಾಗತಿಸಿ, ಪ್ರೊ.ಡಾ.ಸಿ.ನಾಗರಾಜ್ ನಿರ್ವಹಿಸಿ ವಂದಿಸಿದರು. ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಡೀನ್ ಡಾ.ಎನ್.ಚಂದ್ರಶೇಖರ್ ಇದ್ದರು.

# ಕೃತಿಕಾ ಮಳೆ ಅವಾಂತರಕ್ಕೆ ತಂಬಾಕು ರೈತ ಹೈರಾಣ

**ಪಿರಿಯಾಪಟ್ಟಣ:** ಪಿರಿಯಾಪಟ್ಟಣ ತಾಲ್ಲೂಕಿನಲ್ಲಿ ಕಳೆದ ಒಂದು ವಾರದಿಂದ ಸತತವಾಗಿ ಬೀಳುತ್ತಿರುವ ಕೃತಿಕಾ ಮಳೆಯು ಹಲವು ಅವಾಂತರಗಳನ್ನು ಸೃಷ್ಟಿಸುತ್ತಿದೆ.



ತಾಲ್ಲೂಕಿನ ರೈತನ್ನು ಹಲವು ದಿನಗಳಿಂದ ಮಳೆಯಿಲ್ಲದೆ ತತ್ತರಿಸಿ ಹೋಗಿದ್ದ ಸಂದರ್ಭದಲ್ಲಿ ಕೃತಿಕಾ ಮಳೆಯು ರೈತನ ಮುಖದಲ್ಲಿ ಆಶಾಭಾವನೆ ಮೂಡಿಸಿತ್ತಾದರು ದಿನೇ ದಿನೇ ಹೆಚ್ಚು ಮಳೆ ಬೀಳುತ್ತಾ ತೇವಾಂಶ ಹೆಚ್ಚಾಗುತ್ತಿದೆ. ಪ್ರತಿದಿನ ಸಂಜೆಯಾಯಿತು ಎಂದರೇ ಸಾಕು ಮಳೆರಾಯನ ದರ್ಶನ ಭುವಿಗೆ ದರ್ಶನವಾಗುತ್ತದೆ. ಇದರಿಂದ ತಂಬಾಕು ರೈತನು ಸೇರಿ ಮುಸಕಿನಜೋಳ,ತರಕಾರಿ, ಶುಂಠಿ ಬೆಳೆಗಳಿಗೆ ನೀರು ಹೆಚ್ಚು ಸಂಗ್ರಹವಾಗಿ ಸಾಯುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ.ಅದರಲ್ಲೂ ಕಳೆದ ಎರಡು ದಿನಗಳಿಂದ ಮಳೆಯ ಅಬ್ಬರ ಜೋರಾಗಿದ್ದು ಹಳ್ಳಕೊಳ್ಳಗಳಲ್ಲಿ ನೀರು ನದಿಯಂತೆ ಹರಿಯುತ್ತಾ ಹಲವು ಅವಾಂತರಗಳನ್ನು ಸೃಷ್ಟಿಸುತ್ತಿದೆ. ಇಳಿಜಾರು ಪ್ರದೇಶಗಳಲ್ಲಿ ನಾಟಿ ಮಾಡಿರುವ ತಂಬಾಕು ಗಿಡಗಳನ್ನು ಕೊಚ್ಚಿ ಹಾಕುತ್ತಾ ತಂಬಾಕು ರೈತನ ನಿದ್ದೆ ಗೆಟ್ಟಿಸಿದೆ. ಜೊತೆಗೆ ತಗ್ಗು ಪ್ರದೇಶಗಳಲ್ಲಿ ನೀರು ಹೆಚ್ಚು ಸಂಗ್ರಹವಾಗಿ ತಂಬಾಕು ಬೆಳೆ ಮತ್ತು ಶುಂಠಿ ಬೆಳೆಯು ಜೋಗು ಹಿಡಿಯುತ್ತಿವೆ. ಇದರಿಂದ ಹಲವು ದಿನಗಳಿಂದ ಮಳೆಯಿಲ್ಲದೇ ಕೊರಗುತ್ತಿದ ರೈತನಿಗೆ ಒಂದು ಕಡೆ ಹರ್ಷವಾದರೆ ಮತ್ತೊಂದು ಕಡೆ ನಾಟಿ ಮಾಡಿರುವ ಬೆಳೆಗಳು ಎಲ್ಲಿ ಕೈ ತಪ್ಪುತವೋ ಎಂಬ ಭಾವನೆ ಮನೆ ಮಾಡಿದೆ. ತಾಲ್ಲೂಕಿನ ಹಲವು ಗ್ರಾಮಗಳಲ್ಲಿ ಈಗಾಗಲೇ ಸತತವಾಗಿ ಬೀಳುತ್ತಿರುವ ಮಳೆಯಿಂದಾಗಿ ಕೆರೆಕಟ್ಟೆಗಳು ಈಗಾಗಲೇ ತುಂಬುವಾ ಹಂತಕ್ಕೆ ತಲುಪಿದೆ. ಇದರಿಂದ ತಂಬಾಕು ರೈತ ಸಂಕಷ್ಟಕ್ಕೆ ಎದುರಾಗಿದ್ದು ಮುಂದಿನ ದಿನಗಳಲ್ಲಿ ಮಳೆ ಸ್ವಲ್ಪ ಬಿಡುವು ಮಾಡಿಕೊಟ್ಟರೆ ಮಾತ್ರ ತಂಬಾಕು ಬೆಳೆಯಲ್ಲೂ ಸಾದ್ಯವಾಗುತ್ತದೆ ಎನ್ನುತ್ತಾರೆ ರೈತರು.

**ತಂಬಾಕು ರೈತನ ಸಂಕಷ್ಟ:** ಈಗಾಗಲೇ ತಂಬಾಕು ನಾಟಿ ಮಾಡಿ ಹತ್ತು ದಿನವಾಗಿದೆ. ನಾಟಿ ಮಾಡಿದ ಆರಂಭದಲ್ಲಿ ಗೊಬ್ಬರವನ್ನು ನೀಡಬೇಕು. ಇಲ್ಲದಿದ್ದರೆ ಗಿಡವೂ ಬೆಳವಣಿಗೆಯಲ್ಲಿ ಕುಂಠಿತ ಗೊಂಡು ಆರ್ಥಿಕವಾಗಿ ನಷ್ಟವಾಗುತ್ತದೆ. ತಂಬಾಕು ಮಂಡಳಿಯು ಸಕಾಲದಲ್ಲಿ ರಸಗೊಬ್ಬರ ವಿತರಿಸಿದರು ಮಳೆರಾಯನ ಅವಕೃಪೆಯಿಂದಾಗಿ ತಂಬಾಕು ಸಸಿಗಳಿಗೆ ಸಮಯಕ್ಕೆ ಸರಿಯಾಗಿ ರಸಗೊಬ್ಬರ ನೀಡಲು ಸಾಧ್ಯವಾಗುತ್ತಿಲ್ಲ ಎಂದು ತಂಬಾಕು ರೈತನು ತನ್ನ ಅಳಲನ್ನು ತೋಡಿಕೊಂಡನು

**ಇಳಿಜಾರುಪ್ರದೇಶಗಳಲ್ಲಿ ಆವರಿಸಿದ ಮಳೆನೀರು:** ಕಳೆದ ಎರಡು ದಿನಗಳಿಂದ ಮಳೆಯ ಆರ್ಭಟ ಜೋರಾಗಿದ್ದು ನಾಟಿ ಮಾಡಿದ ತಂಬಾಕು ಸಸಿಗಳು ಹಳದಿ ಬಣ್ಣಕ್ಕೆ ತಿರುಗುತ್ತಿವೆ. ಅದರಲ್ಲೂ ತಗ್ಗು ಪ್ರದೇಶಗಳಲ್ಲಿ ತಂಬಾಕು ಸಸಿಗಳು ಬೇರು ಬಿಡ್ಡದೆ ನಾಟಿ ಮಾಡಿದ ಸ್ಥಿತಿಯಲ್ಲಿಯೇ ಇವೆ.ಇದೇ ರೀತಿ ಮಳೆ ಮುಂದುವರೆದರೆ ನಾಟಿ ಮಾಡಲು ನಮ್ಮ ಬಳ್ಳಿ ತಂಬಾಕು ಸಸಿಗಳಿಲ್ಲದೆ ಹೊಲಗಳನ್ನು ಖಾಲಿ ಬಿಡಬೇಕಾಗುತ್ತದೆ. ತಂಬಾಕು ಸಸಿಗಳ ದರವೂ ಹೆಚ್ಚಾಗಿದ್ದು ಇದರಿಂದ ಸಸಿಗಳು ಸಿಗುತ್ತಿಲ್ಲ

# ಸಂಜೆ ಟಿಪ್ಸ್



## ಬಜಾಜ್ ಫೈನಾನ್ಸ್ ಜೊತೆಗೆ ಕೈಜೋಡಿಸಿದ ಟಾಟಾ ಮೋಟಾರ್ಸ್ ಅಂಗಸಂಸ್ಥೆಗಳಾದ ಟಿಪಿಇಎಂ ಮತ್ತು ಟಿಎಂಪಿವಿ

ಡೀಲರ್‌ಗಳ ಬಳಿ ಆರ್ಥಿಕ ನೆರವಿನ ಆಯ್ಕೆಗಳು ಮತ್ತು ಸುಲಭತೆಯನ್ನು ಸುಧಾರಿಸಲು ಟಾಟಾ ಮೋಟಾರ್ಸ್‌ನ ಅಂಗಸಂಸ್ಥೆಗಳಾದ ಟಾಟಾ ಮೋಟಾರ್ಸ್ ಪ್ಯಾಸೆಂಜರ್ ವೆಹಿಕಲ್ಸ್ (ಟಿಎಂಪಿವಿ) ಮತ್ತು ಟಾಟಾ ಪ್ಯಾಸೆಂಜರ್ ಎಲೆಕ್ಟ್ರಿಕ್ ಮೊಬಿಲಿಟಿ (ಟಿಪಿಇಎಂ) ಕಂಪೆನಿಗಳು ಬಜಾಜ್ ಫಿನ್‌ಸರ್ವ್ ಲಿಮಿಟೆಡ್‌ನ ಅಂಗವಾಗಿರುವ ಬಜಾಜ್ ಫೈನಾನ್ಸ್ ಜೊತೆಗೆ ಕೈ ಜೋಡಿಸಿದೆ. ಭಾರತದ ಮುಂಚೂಣಿಯ ಮತ್ತು ವೈವಿಧ್ಯಮಯ ಹಣಕಾಸು ಸೇವೆಗಳ ಸಮೂಹ ಕಂಪೆನಿಗಳಲ್ಲಿ ಒಂದಾಗಿರುವ ಬಜಾಜ್ ಫೈನಾನ್ಸ್ ಈ ಮೂಲಕ ಪ್ಯಾಸೆಂಜರ್ ಮತ್ತು ಎಲೆಕ್ಟ್ರಿಕ್ ವಾಹನ ಡೀಲರ್‌ಗಳಿಗೆ ತನ್ನ ಸೇವೆಗಳನ್ನು ಇನ್ನಷ್ಟು ವಿಸ್ತರಿಸಿದೆ. ಈ ತಿಳಿವಳಿಕೆ ಒಪ್ಪಂದದಿಂದಾಗಿ ಟಿಎಂಪಿವಿ ಮತ್ತು ಟಿಪಿಇಎಂನ ಡೀಲರ್‌ಗಳಿಗೆ ಅತ್ಯಂತ ಕಡಿಮೆ ಅಡಮಾನದಲ್ಲಿ ಬಜಾಜ್ ಫೈನಾನ್ಸ್ ಆರ್ಥಿಕ ನೆರವು ಒದಗಿಸಲಿದೆ.

ಟಿಪಿಇಎಂನ ಚೀಫ್ ಫೈನಾನ್ಷಿಯಲ್ ಆಫೀಸರ್ ಮತ್ತು ಟಿಎಂಪಿವಿಯ ನಿರ್ದೇಶಕರಾದ ಧೀಮನ್ ಗುಪ್ತಾ ಮತ್ತು ಬಜಾಜ್ ಫೈನಾನ್ಸ್ ಲಿಮಿಟೆಡ್‌ನ ಚೀಫ್ ಬಿಸಿನೆಸ್ ಆಫೀಸರ್ ಸಿದ್ಧಾರ್ಥ ಭಟ್ ಒಪ್ಪಂದಕ್ಕೆ ಸಹಿ ಮಾಡಿದರು. ಸಹಯೋಗದ ಕುರಿತು ಮಾತನಾಡಿದ ಟಿಪಿಇಎಂನ ಚೀಫ್ ಫೈನಾನ್ಷಿಯಲ್ ಆಫೀಸರ್ ಮತ್ತು ಟಿಎಂಪಿವಿಯ ನಿರ್ದೇಶಕರಾದ ಧೀಮನ್ ಗುಪ್ತಾ ಅವರು ''ನಮ್ಮ ಡೀಲರ್ ಪಾಲುದಾರರು ನಮ್ಮ ವಹಿವಾಟಿನ ಅವಿಭಾಜ್ಯ ಅಂಗವಾಗಿದ್ದಾರೆ. ಅವರಿಗೆ ಸುಲಭವಾಗಿ ವಹಿವಾಟು ನಡೆಸಲು ಪೂರಕವಾದ ಪರಿಹಾರಗಳನ್ನು ಒದಗಿಸಲು ನಾವು ಸದಾ ಸಿದ್ಧರಿದ್ದೇವೆ. ಜೊತೆಯಾಗಿ ಮಾರುಕಟ್ಟೆಯಲ್ಲಿ ನಾವು ಬೆಳೆಯಬೇಕಾಗಿದೆ. ನಮ್ಮ ನ್ಯೂ ಫಾರ್ ಎವರ್'' ಪೋರ್ಟ್‌ಫೋಲಿಯೋದಿಂದಾಗಿ ಗ್ರಾಹಕರ ಸಂಖ್ಯೆ ಹೆಚ್ಚುತ್ತಿದೆ. ಈ ನಿಟ್ಟಿನಲ್ಲಿ ವಿವಿಧ ಹಣಕಾಸು ಪರಿಹಾರಗಳನ್ನು ಒದಗಿಸಲು ಬಜಾಜ್ ಫೈನಾನ್ಸ್ ಜತೆಗೆ ಕೈಜೋಡಿಸಲು ಖುಷಿಯಾಗುತ್ತಿದೆ. ನಮ್ಮ ಡೀಲರ್ ಪಾಲುದಾರರಿಗೆ ದುಡಿಯುವ ಬಂಡವಾಳ ಹೆಚ್ಚಿಸಿಕೊಳ್ಳಲು ಸಹಾಯಕವಾಗಲಿದೆ ಎಂದರು.

## ಹಲಸಿನ ಹಣ್ಣು ಪಲ್ಯ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

**ಹಲಸಿನ 1/2 ಭಾಗ, 1 ಟೀಸ್ಪೂನ್ ಉದ್ದಿನ ಬೇಳೆ, 1 ಟೀಸ್ಪೂನ್ ಗ್ರಾಂ ಬೇಳೆ ಅಥವಾ ಕಡಲೆ ಬೇಳೆ, 4 ರಿಂದ6 ಚಮಚ ಅಡುಗೆ ಎಣ್ಣೆ, 1/2 ಚಮಚ ಸಾಸಿವೆ, ಒಂದು ದೊಡ್ಡ ಚಿಟಿಕೆ ಅರಿಶಿನ ಪುಡಿ, ಒಂದು ದೊಡ್ಡ ಚಿಟಿಕೆ ಇಂಗು, 4 ರಿಂದ 5 ಕರಿಬೇವಿನ ಎಲೆಗಳು, 1 ನೆಲ್ಲಿಕಾಯಿ ಗಾತ್ರದ ಬೆಲ್ಲ, 1 ನೆಲ್ಲಿಕಾಯಿ ಗಾತ್ರದ ಹುಣಸೆಹಣ್ಣು, ನಿಮ್ಮ ರುಚಿಗೆ ತಕ್ಕಂತೆ ಉಪ್ಪು, ಪಲ್ಯಕ್ಕೆ ರುಬ್ಬಲು ಬೇಕಾಗುವ ಸಾಮಾಗ್ರಿಗಳು, 1/2 ಚಮಚ ಸಾಸಿವೆ ಕಾಳು, 3 ಕೆಂಪು ಮೆಣಸಿನಕಾಯಿಗಳು, 1/2 ಕಪ್ ತುರಿದ ತೆಂಗಿನಕಾಯಿ, 1 ಟೀಸ್ಪೂನ್ ಕೊತ್ತಂಬರಿ ಬೀಜಗಳು**

### ಮಾಡುವ ವಿಧಾನ

ಹಲಸಿನ ಕಾಯಿಯನ್ನು ಮಧ್ಯಕ್ಕೆ ಕತ್ತರಿಸಿ, ಒಳಭಾಗವನ್ನು ತೆಗೆದುಹಾಕಿ, ಬಳಸಲು ಬೇಕಾಗಿರುವ ಕಾಯಿಗಳನ್ನು ಆರಿಸಿಕೊಳ್ಳಿ. ಅವುಗಳನ್ನು ನೀರಿನಲ್ಲಿ ಹಾಕಿ. ಪ್ರೆಶರ್ ಕುಕ್ಕರ್‌ನಲ್ಲಿ ಕತ್ತರಿಸಿದ ಹಸಿ ಹಲಸಿನ ಕಾಯಿಗಳನ್ನು ಹಾಕಿಕೊಳ್ಳಿ. ಜೊತೆಗೆ ಒಂದು ಚಮಚ ಉಪ್ಪು ಮತ್ತು ಒಂದು ಚಿಟಿಕೆ ಅರಿಶಿನ ಸೇರಿಸಿ. ಅಗತ್ಯವಿರುವ ನೀರನ್ನು ಸೇರಿಸಿ ಮತ್ತು ಮೃದುವಾಗುವವರೆಗೆ ಬೇಯಿಸಿ. ಬೇಯಿಸಿದ ನಂತರ, ನೀರನ್ನು ತೆಗೆದು, ಅದನ್ನು ಲೈಟ್ ಆಗಿ ಮ್ಯಾಶ್ ಮಾಡಿ. ಈಗ ಮಸಾಲೆಗೆ ತುರಿದ ತೆಂಗಿನಕಾಯಿ, ಕೆಂಪು ಮೆಣಸಿನಕಾಯಿ, ಸಾಸಿವೆ ಮತ್ತು ಕೊತ್ತಂಬರಿ ಸೊಪ್ಪನ್ನು ಮಿಕ್ಸರ್ ಗ್ರೈಂಡರ್ ಬಳಸಿ ನೀರು ಸೇರಿಸದೆ ರುಬ್ಬಿಕೊಳ್ಳಿ.ಬಾಣಲೆಯಲ್ಲಿ ಎಣ್ಣೆ, ಸಾಸಿವೆ, ಬೇಳೆ, ಉದ್ದಿನಬೇಳೆ, ಕೆಂಪು ಮೆಣಸಿನಕಾಯಿ ಮತ್ತು ಕರಿಬೇವಿನ ಎಲೆಗಳನ್ನು ಬಳಸಿ ಒಗ್ಗರಣೆ ಮಾಡಿಕೊಳ್ಳಿ.ಇಂಗು ಮತ್ತು ಅರಿಶಿನ ಪುಡಿಯನ್ನು ಸೇರಿಸಿ. ನಂತರ ಬೇಯಿಸಿದ ಮತ್ತು ಹಿಸುಕಿದ ಹಲಸಿನ ಕಾಯಿಯನ್ನು ಸೇರಿಸಿ. ನಿಮ್ಮ ರುಚಿಗೆ ತಕ್ಕಂತೆ ಉಪ್ಪು, ಬೆಲ್ಲ ಮತ್ತು ಹುಣಸೆಹಣ್ಣು ಸೇರಿಸಿ. ಚೆನ್ನಾಗಿ ಮಿಶ್ರಣ ಮಾಡಿ. ತರಿ ತರಿ ಇದೆ ಎನಿಸಿದರೆ, ಸ್ವಲ್ಪ ನೀರು ಸೇರಿಸಿ. ರುಬ್ಬಿದ ಮಸಾಲೆ ಸೇರಿಸಿ. ಸ್ವಲ್ಪ ಹೊತ್ತು ಕಲಕಿ ಸ್ಟವ್ ಆಫ್ ಮಾಡಿ. ಇದನ್ನು ಬಿಸಿ ಬಿಸಿ ಅನ್ನ ಅಥವಾ ಚಪಾತಿ, ದೋಸೆಯೊಂದಿಗೆ ಬಡಿಸಿ.



## ಅನುಷ್ಕಾ ಶರ್ಮಾ ಹೊಸ ಕೇಶ ವಿನ್ಯಾಸ ವೈರಲ್

ಫೆಬ್ರವರಿಯಲ್ಲಿ ಮಗು ಅಕಾಯ್‌ನನ್ನು ಸ್ವಾಗತಿಸಿದ ಬಾಲಿವುಡ್ ನಟಿ ಅನುಷ್ಕಾ ಶರ್ಮಾ ಅವರು ಈಚೆಗೆ ನ್ಯೂ ಹೇರ್ ಸ್ಟೈಲ್ ಲುಕ್‌ನಲ್ಲಿ ಪೋಸ್ ನೀಡಿದ್ದಾರೆ. ಹೌದು ನಟಿ ಅನುಷ್ಕಾ ಶರ್ಮಾ ಅವರು ಹೊಸ ಕೇಶವಿನ್ಯಾಸದಲ್ಲಿ ತಮ್ಮ ಹೇರ್ ಸ್ಟೈಲಿಸ್ಟ್ ರಶೀದ್ ಜತೆಗೆ ಫೋಟೋಗೆ ಪೋಸ್ ನೀಡಿದ್ದಾರೆ.ಅನುಷ್ಕಾ ಹೊಸ ಕೇಶ ವಿನ್ಯಾಸವನ್ನು ತೋರಿಸಿದ್ದಾರೆ. ರಶೀದ್ ಕ್ಲಿಕ್ಕಿಸಿದ ಸೆಲ್ಫಿಗಳಲ್ಲಿ, ನನಗೆ ಸ್ಟೈಲಿಸ್ ಹಾಗೂ ಸುಂದರವಾಗಿರುವ ಅನುಷ್ಕಾ ಶರ್ಮಾ ಅವರಿಗೆ ಹೇರ್ ಕಟ್ ಮಾಡುವ ಅವಕಾಶ ಸಿಕ್ಕಿದೆ ಎಂದು ಬರೆದುಕೊಂಡಿದ್ದಾರೆ. ಫೋಟೊ ನೋಡಿ ಪ್ರತಿಕ್ರಿಯಿಸಿದ ಅಭಿಮಾನಿಗಳು, ಈ ಸುಂದರ ಮುಖವು ಸುಂದರವಾದ ನಗುವನ್ನು ಹೊಂದಿದೆ, ಜೊತೆಗೆ ಹೊಳೆಯುವ ಚರ್ಮ ಮತ್ತು ಹೊಳೆಯುವ ಕಣ್ಣುಗಳು. ಅನುಷ್ಕಾ ಶರ್ಮಾ ಸುಂದರ, ಸುಂದರ ಮಹಿಳೆ., ಇನ್ನೊಬ್ಬ ವ್ಯಕ್ತಿ, ಅವಳು ತುಂಬಾ ಮುದ್ದಾಗಿದ್ದಾಳೆ ಎಂದು ಹೇಳಿದರು. ಎಂತಹ ಒಳ್ಳೆಯ ವ್ಯಕ್ತಿ. ಅದು ಅವಳ ಮುಖದ ಮೇಲೆ ಪ್ರತಿಫಲಿಸುತ್ತದೆ. ಆಶೀರ್ವದಿಸಿರಿ ಎಂದು ಖಟಣಚಿರಡಿಚಿಟ ಬಳಕೆದಾರರು ವಿಧ ವಿಧದಲ್ಲಿ ಕಮೆಂಟ್ ಮಾಡಿದ್ದಾರೆ.ಅನುಷ್ಕಾ ಮತ್ತು ವಿರಾಟ್ ಈ ವರ್ಷದ ಫೆಬ್ರವರಿಯಲ್ಲಿ ಲಂಡನ್ನಲ್ಲಿ ತಮ್ಮ ಎರಡನೇ ಮಗು ಅಕಾಯ್ ಅವರನ್ನು ಸ್ವಾಗತಿಸಿದರು. 2017 ರಲ್ಲಿ ವಿರಾಟ್ ಹಾಗೂ ಅನುಷ್ಕಾ ಅವರು ದಾಂಪತ್ಯ ಜೀವನಕ್ಕೆ ಕಾಲಿಟ್ಟರು. 2021ರಲ್ಲಿ ಈ ಸ್ಟಾರ್ ಜೋಡಿ ಮಗಳು ವಾಮಿಕಾ ಹಾಗೂ 2024ರಲ್ಲಿ ನಗ ಅಕಾಯ್ ಸ್ವಾಗತಿಸಿದರು.ಮಗನ ಜನನದ ನಂತರ ಮೊದಲ ಬಾರೀ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಜತೆ ಬರ್ತಡೇ ಆಚರಿಸಿದ ಅನುಷ್ಕಾ ಅವರು ಮೊನ್ನೆ ನಡೆದ ಐಪಿಎಲ್ ಪ್ಲೇ ಆಫ್ ಕ್ರಿಕೆಟ್ ಪಂದ್ಯಾದಲ್ಲಿ ಅಧಿಕೃತವಾಗಿ ಸಾರ್ವಜನಿಕವಾಗಿ ಕಾಣಿಸಿಕೊಂಡರು.



## ಹೊಟ್ಟೆನೋವು ನಿವಾರಿಸಲು ಮನೆಮದ್ದು





### ಹೆಲ್ತ್ ಟಿಪ್ಸ್

ಆರೋಗ್ಯ ಸರಿಯಾಗಿದ್ದರೆ ಮಾತ್ರ ಎಲ್ಲಾ ಕೆಲಸಗಳನ್ನು ಮಾಡಲು ಸಾಧ್ಯ. ಕೆಲವೊಮ್ಮೆ ದೇಹದ ಯಾವುದಾದರು ಭಾಗದಲ್ಲಿ ಸಣ್ಣಪುಟ್ಟ ನೋವು ಕಾಣಿಸಿಕೊಂಡರೆ ಮಾತ್ರೆ ತೆಗೆದುಕೊಳ್ಳುವುದನ್ನು ಬಿಟ್ಟುಬಿಡಬೇಕು. ಮನೆಯಲ್ಲಿಯೇ ಕೆಲವು ಮದ್ದು ತಯಾರಿಸಿಕೊಂಡರೆ ಯಾವುದೇ ಅಡ್ಡ ಪರಿಣಾಮ ಕೂಡ ಆಗುವುದಿಲ್ಲ.

ಈ ಪೈಕಿ ಹೊಟ್ಟೆ ನೋವು ಬಂದರೆ ಬಿಸಿ ನೀರಿನಿಂದ ಉತ್ತಮ ಪರಿಹಾರ ಕಂಡುಕೊಳ್ಳಬಹುದು. ಬಿಸಿ ನೀರು ಕೆಲವೊಂದು ಕಾಯಿಲೆಗಳಿಗೆ ಒಳ್ಳೆಯ ಮನೆ ಮದ್ದು. ಅದು ಹೇಗೆ ಅಂತ ನೋಡಿ.

★ ಒಂದು ಪಾತ್ರೆ ಅಥವಾ ಬಾಟಲ್ ನಲ್ಲಿ ಬಿಸಿನೀರನ್ನು ತುಂಬಿಸಬೇಕು. ನಂತರ ಹೊಟ್ಟೆಯ ಮೇಲೆ 15 ನಿಮಿಷ ಇಟ್ಟುಕೊಳ್ಳಬೇಕು. ಈ ರೀತಿ ಮಾಡುವುದರಿಂದ ಸ್ನಾಯುಗಳು ಸಡಿಲಗೊಳ್ಳುತ್ತವೆ.

★ ಆಹಾರ ಜೀರ್ಣವಾಗದಿದ್ದರೆ ಬಿಸಿ ಬಿಸಿ ನೀರು ಕುಡಿಯುವುದರಿಂದ ಕೂಡ ಪರಿಹಾರ ಸಿಗುತ್ತದೆ.

★ ಊಟವಾದ ನಂತರ ಅರ್ಧ ಗಂಟೆ ಬಿಟ್ಟು ಬಿಸಿ ನೀರು ಕುಡಿಯುವುದನ್ನು ರೂಢಿ ಮಾಡಿಕೊಳ್ಳಬೇಕು. ಯಾಕೆಂದರೆ ಇದು ಆರೋಗ್ಯ ಮತ್ತು ಹೊಟ್ಟೆಯ ಸಮಸ್ಯೆಗಳಿಗೆ ಪರಿಹಾರ ನೀಡುತ್ತದೆ.

★ ಅತಿ ತಣ್ಣಗಿನ ಊಟ ಮಾಡಬಾರದು. ಬಿಸಿ ಊಟ ಮಾಡಿದರೆ ಜೀರ್ಣಕ್ರಿಯೆಗೂ ಉತ್ತಮ ಹಾಗೂ ಹೊಟ್ಟೆ ನೋವಿನಂತಹ ಸಮಸ್ಯೆ ಕೂಡ ಬರುವುದಿಲ್ಲ.

## ಟೂತ್ ಪೇಸ್ಟ್ ಬಳಸಿ ಅನಗತ್ಯ ಕೂದಲನ್ನು ಹೋಗಲಾಡಿಸಿ

### ಬ್ಯೂಟಿ ಟಿಪ್ಸ್



ಮಹಿಳೆಯರು ಮುಖದ ಮೇಲೆನ ಬೇಡದ ಕೂದಲನ್ನು ತೆಗೆಯಲು ವ್ಯಾಕ್ಸಿಂಗ್, ಥ್ರೆಡಿಂಗ್ ನಂತಹ ಮಾರ್ಗಗಳನ್ನು ಬಳಸುತ್ತಾರೆ. ಆದರೆ ಇವುಗಳನ್ನು ಮಾಡುವುದರಿಂದ ತುಂಬಾ ನೋವಾಗುತ್ತದೆ. ಹಾಗೇ ಚರ್ಮ ಕೆಂಪಾಗುವುದು, ಅಲರ್ಜಿಯಾಗುವುದು ಕಂಡು ಬರುತ್ತದೆ. ಹಾಗಾಗಿ ಬೇಡದ ಕೂದಲನ್ನು ತೆಗೆಯಲು ರಾಸಾಯನಿಕಯುಕ್ತ ಕ್ರೀಂಗಳನ್ನು ಬಳಸುವ ಬದಲು ಟೂತ್ ಪೇಸ್ಟ್ ಬಳಸಿ ಬೇಡದ ಕೂದಲನ್ನು ತೆಗೆದುಹಾಕಿ. ಟೂತ್ ಪೇಸ್ಟ್ ಹಲ್ಲುಜ್ಜಲು ಮಾತ್ರವಲ್ಲ ಅದನ್ನು ಬಳಸಿ ಬೇಡದ ಕೂದಲನ್ನು ಕೂಡ ತೆಗೆದುಹಾಕಬಹುದು. ಅದಕ್ಕಾಗಿ 2 ಚಮಚ ಕಡಲೆಹಿಟ್ಟಿಗೆ 1 ಚಮಚ ಬಿಳಿ ಟೂತ್ ಪೇಸ್ಟ್ ಅನ್ನು ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಬಳಿಕ ಇದಕ್ಕೆ ಪೇಸ್ಟ್ ಸರಿಯಾದ ಹದಕ್ಕೆ ಬರುವಷ್ಟು ಹಾಲನ್ನು ಸೇರಿಸಿ ಕ್ರೀಂ ತಯಾರಿಸಿ. ಬೇಡದ ಕೂದಲಿರುವ ಪ್ರದೇಶದಲ್ಲಿ ಇದನ್ನು ಹಚ್ಚಿ ಒಣಗಲು ಬಿಡಿ. ಈ ಕ್ರೀಂ ಒಣಗಿದ ಬಳಿಕ ಹತ್ತಿಯ ಸಹಾಯದಿಂದ ಕೂದಲಿಗೆ ವಿರುದ್ಧ ಭಾಗದಲ್ಲಿ ಉಜ್ಜಿಕೊಳ್ಳಿ. ಬಳಿಕ ತಣ್ಣೀರಿನಿಂದ ತೊಳೆಯಿರಿ. ನಂತರ ಚರ್ಮಕ್ಕೆ ಮಾಯಿಶ್ಚರೈಸರ್ ಕ್ರೀಂ ಹಚ್ಚಿ. ಇದನ್ನು ವಾರದಲ್ಲಿ 3 ಬಾರಿ ಮಾಡಿದರೆ ಉತ್ತಮ ಫಲಿತಾಂಶ ಸಿಗುತ್ತದೆ.

## ಡೆಲಿವರಿ ಪಾಟ್ನರ್‌ಗಳಿಗಾಗಿ ವೈದ್ಯಕೀಯ ಘಟಕ, ಟೆಲಿಕನ್ಸಲ್ಟೇಶನ್ ಪ್ರಾರಂಭಿಸಿದ ಸ್ವಿಗ್ಗಿ






ಭಾರತದ ಬೇಡಿಕೆಯ ಆನ್-ಡಿಮಾಂಡ್ ವಿತರಣಾ ವೇದಿಕೆಯಾದ ಸ್ವಿಗ್ಗಿ, ಈ ಬೇಸಿಗೆಯಲ್ಲಿ ತನ್ನ ವಿತರಣಾ ಪಾಲುದಾರರ (ಡೆಲಿವರಿ ಪಾರ್ಟನರ್‌ಗಳ) ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ಆದ್ಯತೆ ನೀಡಲು ಎರಡು ಉಪಕ್ರಮಗಳನ್ನು ಪ್ರಾರಂಭಿಸುವುದಾಗಿ ಘೋಷಿಸಿದೆ. ಡಯಲ್ 4242 ಮತ್ತು ರಿಲಯನ್ಸ್-ಚಾಲಿತ ವಿಸಿಟ್ ಅಪ್ಲಿಕೇಶನ್ನ ಸಹಯೋಗದೊಂದಿಗೆ, ಸ್ವಿಗ್ಗಿ ತನ್ನ ಸಂಪೂರ್ಣ ವಿತರಣಾ ಪಾಲುದಾರರಿಗಾಗಿ ಸಂಚಾರಿ ವೈದ್ಯಕೀಯ ಘಟಕಗಳು (ಎಂಎಂಯು) ಮತ್ತು ಟೆಲಿಕನ್ಸಲ್ಟೇಶನ್ ಸೇವೆಗಳನ್ನು ಪರಿಚಯಿಸಿದೆ.

**ಸಂಚಾರಿ ವೈದ್ಯಕೀಯ ಘಟಕಗಳು:** ಸ್ವಿಗ್ಗಿ, ಡಯಲ್ 4242 ಸಹಭಾಗಿತ್ವದಲ್ಲಿ, ತನ್ನ ವಿತರಣಾ ಪಾಲುದಾರರಿಗೆ ಸಮಗ್ರ ಆರೋಗ್ಯ ಸೇವೆಗಳನ್ನು ಒದಗಿಸಲು ಸಂಚಾರಿ ವೈದ್ಯಕೀಯ ಘಟಕಗಳನ್ನು ಹೊರತಂದಿದೆ. ಪ್ರಮುಖ ಸ್ಥಳಗಳಲ್ಲಿ ಇರಿಸಲಾಗಿರುವ ಈ ಘಟಕಗಳು ಪ್ರಮುಖ ರೋಗ ಲಕ್ಷಣಗಳ ಮೇಲ್ವಿಚಾರಣೆ, ಆಧಾರವಾಗಿರುವ ಆರೋಗ್ಯ ಸಮಸ್ಯೆಗಳ ಗುರುತಿಸುವಿಕೆ ಮತ್ತು ವಿತರಣಾ ಸಮಯದಲ್ಲಿ ಉಂಟಾದ ಸಣ್ಣ ಗಾಯಗಳಿಗೆ ಪ್ರಥಮ ಚಿಕಿತ್ಸೆ ಸೇರಿದಂತೆ ಆರೋಗ್ಯ ತಪಾಸಣೆಗಳನ್ನು ನಡೆಸುತ್ತವೆ. ಹೆಚ್ಚುವರಿಯಾಗಿ, ದೃಷ್ಟಿ ತಪಾಸಣೆ ಮತ್ತು ಕಣ್ಣಿನ ಆರೈಕೆ ಸೇವೆಗಳಿಗೆ ಮೀಸಲಾದ ನೇತ್ರಶಾಸ್ತ್ರಜ್ಞರು ಒದಗಿಸಲಿದೆ. ವಿತರಣಾ ಪಾಲುದಾರರಲ್ಲಿ ಆರೋಗ್ಯ ಮತ್ತು ಮುನ್ನೆಚ್ಚರಿಕಾ ಆರೈಕೆ ಅಭ್ಯಾಸಗಳನ್ನು ಉತ್ತೇಜಿಸಲು ಆರೋಗ್ಯ ಶಿಕ್ಷಣ ಅವಧಿಗಳನ್ನು ಸಹ ನಡೆಸಲಾಗುತ್ತಿದೆ. ಬೆಂಗಳೂರಿನಿಂದ ಪ್ರಾರಂಭಿಸಿ, ಈ ಘಟಕಗಳನ್ನು ನಗರದ ವಿವಿಧ ಸ್ಥಳಗಳಲ್ಲಿ ನಿಯೋಜಿಸಲಾಗುವುದು, ಪ್ರತಿದಿನ ಸರಿಸುಮಾರು 200 ವಿತರಣಾ ಪಾಲುದಾರರು ಇದರ ಪ್ರಯೋಜನ ಪಡೆಯಲಿದ್ದಾರೆ.

**ಟೆಲಿಕನ್ಸಲ್ಟೇಶನ್ ಸೇವೆಗಳು:** ಎಲ್ಲಾ ವಿತರಣಾ ಪಾಲುದಾರರು ಮತ್ತು ಅವರ ಕುಟುಂಬಗಳಿಗೆ ಟೆಲಿಕನ್ಸಲ್ಟೇಶನ್ ಸೇವೆಗಳನ್ನು ನೀಡಲು ಖತಿರಂಥಿ ರಿಲಯನ್ಸ್-ಚಾಲಿತ ವಿಸಿಟ್ ಅಪ್ಲಿಕೇಶನ್ನೊಂದಿಗೆ ಸಹ ಪಾಲುದಾರಿಕೆ ಹೊಂದಿದೆ. ಈ ಉಪಕ್ರಮವು ವಿತರಣಾ ಪಾಲುದಾರರು, ಅವರ ಸಂಗಾತಿಗಳು ಮತ್ತು ಮಕ್ಕಳಿಗೆ ಸಂಬಂಧಿಸಿದ ಜನರಲ್ ಮೆಡಿಸಿನ್, ಸ್ತ್ರೀರೋಗ ಶಾಸ್ತ್ರ, ಮೂಳೆಚಿಕಿತ್ಸೆ ಮತ್ತು ಪೀಡಿಯಾಟ್ರಿಕ್ಸ್‌ನಲ್ಲಿನ ವಿಶೇಷ ವೈದ್ಯರಿಗೆ ವರ್ಚುವಲ್ ಪ್ರವೇಶವನ್ನು ಒದಗಿಸುತ್ತದೆ. ವಿತರಣಾ ಪಾಲುದಾರರ ಅಗತ್ಯ ಆರೋಗ್ಯ ರಕ್ಷಣೆಯನ್ನು ಖಚಿತಪಡಿಸಿಕೊಳ್ಳಲು ಸಬ್ಸಿಡಿ ದರದಲ್ಲಿ ಸೂಚಿಸಲಾದ ಔಷಧಿಗಳನ್ನು ಸಹ ಪಡೆಯುತ್ತಾರೆ.

ನಮ್ಮ ವಿತರಣಾ ಪಾಲುದಾರರ ಸುರಕ್ಷತೆ ಮತ್ತು ಯೋಗಕ್ಷೇಮವನ್ನು ಖಚಿತಪಡಿಸಿಕೊಳ್ಳುವುದು ಸ್ವಿಗ್ಗಿಯ ಮೊದಲ ಆದ್ಯತೆಯಾಗಿದೆ. ಇದು ಬೇಡಿಕೆಯ ಆಂಬ್ಯುಲೆನ್ಸ್, ಪಾವತಿಸಿದ ವಿಶ್ರಾಂತಿ ಸಮಯ, ಟೆಲಿಮೆಡಿಸಿನ್ ಸೌಲಭ್ಯಗಳು ಮತ್ತು ಬೇಸಿಗೆ ರಿಚಾರ್ಜ್ ವಲಯಗಳಂತಹ ಅನೇಕ ಉಪಕ್ರಮಗಳಿಗೆ ಕಾರಣವಾಗುತ್ತದೆ. ಮೊಬೈಲ್ ವೈದ್ಯಕೀಯ ಘಟಕಗಳ ಪರಿಚಯ ಮತ್ತು ಟೆಲಿ ಕನ್ಸಲ್ಟೇಶನ್ಗಳು ಈ ದಿಕ್ಕಿನಲ್ಲಿ ಮತ್ತೊಂದು ಹೆಜ್ಜೆಯಾಗಿದೆ, ಎಂದು ಸ್ವಿಗ್ಗಿ ಕಾರ್ಯಾಚರಣೆ ಮುಖ್ಯಸ್ಥರಾದ ಮಿಹಿರ್ ಷಾ ಹೇಳಿದರು. ನಮ್ಮ ಡೆಲಿವರಿ ಪಾಲುದಾರರು ಯಾವಾಗಲೂ ಪ್ರಯಾಣದಲ್ಲಿರುತ್ತಾರೆ, ಆದರೆ ಇದರಿಂದಾಗಿ ಅವರ ಆರೋಗ್ಯವು ನಿರ್ಲಕ್ಷ್ಯಕ್ಕೆ ಒಳಗಾಗಬಾರದು, ತದಕಾರಣ ಈ ಮೊಬೈಲ್ ವೈದ್ಯಕೀಯ ಘಟಕಗಳು ಅವರನ್ನು ತಲುಪಬೇಕು. ಅಗತ್ಯ ಆರೋಗ್ಯ ಸೇವೆಗಳಿಗೆ ಪ್ರವೇಶವನ್ನು ಒದಗಿಸುವ ಮೂಲಕ ಅವರ ಆರೋಗ್ಯಕ್ಕೆ ಆದ್ಯತೆ ನೀಡುವಂತೆ ಉತ್ತೇಜಿಸುತ್ತಾ, ನಮ್ಮ ವಿತರಣಾ ಪಾಲುದಾರರಲ್ಲಿ ಸ್ವಾಸ್ಥ್ಯದ ಸಂಸ್ಕೃತಿಯನ್ನು ಉತ್ತೇಜಿಸುವ ಗುರಿಯನ್ನು ನಾವು ಹೊಂದಿದ್ದೇವೆ.

ಈ ಎರಡೂ ಉಪಕ್ರಮಗಳನ್ನು ಮುಂಬರುವ ವಾರಗಳಲ್ಲಿ ಇತರ ನಗರಗಳಿಗೆ ವಿಸ್ತರಿಸಲಾಗುವುದು. 2022 ರಲ್ಲಿ ಪರಿಚಯಿಸಲಾದ ಆನ್-ಡಿಮಾಂಡ್ ಆಂಬ್ಯುಲೆನ್ಸ್ ಸೇವೆಯಂತಹ ಇತರ ಉಪಕ್ರಮಗಳ ಯಶಸ್ವಿ ಅನುಷ್ಠಾನವು, ತನ್ನ ವಿತರಣಾ ಪಾಲುದಾರರ ಆರೋಗ್ಯ ಮತ್ತು ಸುರಕ್ಷತೆಗೆ ಕಂಪನಿಯ ಸಮರ್ಪಣೆಯನ್ನು ಬಲಪಡಿಸುತ್ತದೆ.



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ನೆಮ್ಮದಿ ಶಾಂತಿ, ಗೆಳೆಯರಿಂದ ಸಹಾಯ, ಮಾನಸಿಕ ಒತ್ತಡ, ಮಾತಿಗೆ ಮರುಳಾಗದಿರಿ.

**ವೃಷಭ:** ಬಹು ಸೌಖ್ಯ, ಮಾನಸಿಕ ಒತ್ತಡ, ಮುಗಿನ ಮೇಲೆ ಕೋಪ, ಚೋರ ಭಯ, ಅಕಾಲ ಭೋಜನ.

**ಮಿಥುನ:** ಆಕಸ್ಮಿಕ ಖರ್ಚು, ಪರರ ಮಾತಿಗೆ ಕಿವಿ ಕೊಡಬೇಡಿ, ಸ್ತ್ರೀಯರು ತಾಳ್ಮೆಯಿಂದ ಇರಿ.

**ಕಟಕ:** ನಾನು ವಿಚಾರಗಳಲ್ಲಿ ಆಸಕ್ತಿ, ನೀಚ ಜನರಿಂದ ದೂರವಿರಿ, ವಿದೇಶ ಪ್ರಯಾಣ, ಕುಟುಂಬ ಸೌಖ್ಯ.

**ಸಿಂಹ:** ಕೆಲಸ ಕಾರ್ಯಗಳು ವಿಳಂಬ, ವಿಪರೀತ ವ್ಯಸನ, ಅಧಿಕ ತಿರುಗಾಟ, ಸರ್ಕಾರಿ ಕೆಲಸದವರಿಗೆ ತೊಂದರೆ.

**ಕನ್ಯಾ:** ಸಣ್ಣ ಪುಟ್ಟ ವಿಷಯಗಳಿಂದ ಮನಸ್ತಾಪ, ಹಿತ ಶತ್ರು ಭಾದೆ, ಕಾರ್ಯ ಸಾಧನೆ, ವಿವಿದ ರೀತಿಯಿಂದ ಧನ ಲಾಭ.

**ತುಲಾ:** ಮಿತ್ರರಿಂದ ನಿಂದನೆ, ಅನರ್ಥ, ಮಕ್ಕಳಿಂದ ನೋವು, ರೋಗಭಾದೆ, ಯತ್ನ ಕಾರ್ಯ ಭಂಗ.

**ವೃಶ್ಚಿಕ:** ಎಷ್ಟೇ ಹಣ ಬಂದರೂ ಉಳಿಯುವುದಿಲ್ಲ, ಸ್ವಯಂಕೃತ ಅಪರಾಧ, ಕಾರ್ಯ ವಿಘಾತ, ವಾದ ವಿವಾದ.

**ಧನಸ್ಸು:** ಕೆಲಸದಲ್ಲಿ ಏಕಾಗ್ರತೆ, ಗುರಿಯನ್ನು ಸಾಧಿಸುವಿರಿ, ಸ್ತ್ರೀಯರಿಗೆ ಶುಭ, ಹಿರಿಯರಲ್ಲಿ ಭಕ್ತಿ.

**ಮಕರ:** ರಾಜಕೀಯ ಕ್ಷೇತ್ರದವರಿಗೆ ಶುಭ, ದೈವಿಕ ಚಿಂತನೆ, ಅನ್ಯರ ಮನಸ್ಸು ಗೆಲ್ಲುವಿರಿ, ರೋಗ ಭಾದೆ.

**ಕುಂಭ:** ಅತಿ ಬುದ್ಧಿವಂತಿಕೆ, ಅಮೂಲ್ಯ ವಸ್ತುಗಳ ಖರೀದಿ, ಹಣಕಾಸಿನ ಪರಿಸ್ಥಿತಿ ಉತ್ತಮ, ಪ್ರತಿಷ್ಠಿತ ಜನರ ಪರಿಚಯ.

**ಮೀನ:** ಬಾಕಿ ವಸೂಲಿ, ಉದ್ಯೋಗದಲ್ಲಿ ಅಭಿವೃದ್ಧಿ, ಧನ ಲಾಭ, ಅನಾವಶ್ಯಕ ವಿಷಯಗಳಿಂದ ದೂರವಿರಿ.

## ವಿಶ್ವ ಪ್ರಿಕ್ಲಾಂಪ್ಸಿಯಾ ದಿನ

ವಿಶ್ವ ಪ್ರಿಕ್ಲಾಂಪ್ಸಿಯಾ ದಿನವನ್ನು ವಾರ್ಷಿಕವಾಗಿ ಮೇ 22 ರಂದು ಆಚರಿಸಲಾಗುತ್ತದೆ. ಪ್ರೀಕ್ಲಾಂಪ್ಸಿಯಾ ಮತ್ತು ಗರ್ಭಾವಸ್ಥೆಯ ಸಂಬಂಧಿತ ಅಧಿಕ ರಕ್ತದೊತ್ತಡ ರೋಗಗಳು ಪ್ರತಿ ವರ್ಷ ಸರಿಸುಮಾರು 76,000 ತಾಯಂದಿರು ಮತ್ತು 500,000 ನವಜಾತ ಶಿಶುಗಳ ಮೇಲೆ ಪರಿಣಾಮ ಬೀರುತ್ತವೆ. ವಿಶ್ವ ಪ್ರಿಕ್ಲಾಂಪ್ಸಿಯಾ ದಿನವು ಈ ಮಾರಣಾಂತಿಕ ಗರ್ಭಧಾರಣೆಯ ಸ್ಥಿತಿಯ ಬಗ್ಗೆ ಜಾಗೃತಿಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಪ್ರೀಕ್ಲಾಂಪ್ಸಿಯಾವು ಗರ್ಭಾವಸ್ಥೆಯಲ್ಲಿ ಸುಮಾರು 20 ನೇ ವಾರದಲ್ಲಿ ಸಂಭವಿಸುತ್ತದೆ ಮತ್ತು ಮೂತ್ರದಲ್ಲಿ ಅಧಿಕ ರಕ್ತದೊತ್ತಡ ಮತ್ತು ಪ್ರೋಟೀನ್ನಿಂದ ನಿರೂಪಿಸಲ್ಪಟ್ಟಿದೆ. ಮೇಲ್ವಿಚಾರಣೆ ಮತ್ತು ನಿರ್ವಹಿಸದಿದ್ದಲ್ಲಿ ಇದು ತಾಯಿ ಮತ್ತು ಮಗುವಿಗೆ ದೊಡ್ಡ ತೊಂದರೆಗಳನ್ನು ಉಂಟುಮಾಡಬಹುದು. ರೋಗನಿರ್ಣಯ ಮತ್ತು ಚಿಕಿತ್ಸೆಯ ನಡುವಿನ ಕಡಿಮೆ ಸಮಯ ಎಂದರೆ ತಾಯಿ ಮತ್ತು ಮಗುವಿಗೆ ಉತ್ತಮ ಫಲಿತಾಂಶಗಳು. ವಾಡಿಕೆಯ ಪ್ರಸವಪೂರ್ವ ತಪಾಸಣೆಯ ಸಮಯದಲ್ಲಿ ಪ್ರಿ-ಎಕ್ಲಾಂಪ್ಸಿಯಾವನ್ನು ಗುರುತಿಸಬಹುದು. ಪ್ರೀಕ್ಲಾಂಪ್ಸಿಯಾ ಮತ್ತು ಗರ್ಭಾವಸ್ಥೆಯ ಸಂಬಂಧಿತ ಅಧಿಕ ರಕ್ತದೊತ್ತಡದ ಕಾಯಿಲೆಗಳು ಪ್ರಪಂಚದಾದ್ಯಂತ ಪ್ರತಿ ವರ್ಷ ಸುಮಾರು 76,000 ತಾಯಂದಿರು ಮತ್ತು 500,000 ಶಿಶುಗಳನ್ನು ಕೊಲ್ಲುತ್ತವೆ, ಇದು ತಾಯಿಯ ಸಾವಿಗೆ ಪ್ರಮುಖ ಕಾರಣವಾಗಿದೆ. ಪ್ರೀಕ್ಲಾಂಪ್ಸಿಯಾವು ಸಂಭಾವ್ಯವಾಗಿ ಮಾರಣಾಂತಿಕ ಗರ್ಭಧಾರಣೆಯ ತೊಡಕು, ಮತ್ತು ವಿಶ್ವ ಪ್ರಿಕ್ಲಾಂಪ್ಸಿಯಾ ದಿನವು ಅದರ ಬಗ್ಗೆ ಜಾಗೃತಿಯನ್ನು ಹೆಚ್ಚಿಸಲು ಶ್ರಮಿಸುತ್ತದೆ. ಪ್ರಿಕ್ಲಾಂಪ್ಸಿಯಾವು ಗರ್ಭಾವಸ್ಥೆಯಲ್ಲಿ ಯಾವುದೇ ಸಮಯದಲ್ಲಿ ಸಂಭವಿಸಬಹುದಾದ ಒಂದು ಸ್ಥಿತಿಯಾಗಿದೆ – ಸಾಮಾನ್ಯವಾಗಿ 20 ನೇ ವಾರದ ನಂತರ ಮತ್ತು ಜನನದ ನಂತರ ಆರು ವಾರಗಳವರೆಗೆ ಇರುತ್ತದೆ. ಹೆಚ್ಚಿದ ರಕ್ತದೊತ್ತಡ ಮತ್ತು, ಹೆಚ್ಚಿನ ಸಂದರ್ಭಗಳಲ್ಲಿ, ಮೂತ್ರದಲ್ಲಿ ಪ್ರೋಟೀನ್ ರೋಗಲಕ್ಷಣಗಳು, ಮತ್ತು ಎಚ್ಚರಿಕೆಯಿಂದ ಮೇಲ್ವಿಚಾರಣೆ ಮತ್ತು ನಿರ್ವಹಿಸದಿದ್ದರೆ, ಇದು ತಾಯಿ ಮತ್ತು ಮಗುವಿಗೆ ಪ್ರಮುಖ ತೊಡಕುಗಳಿಗೆ ಕಾರಣವಾಗಬಹುದು. ತಾಯಿ ಮತ್ತು ಹುಟ್ಟಲಿರುವ ಮಗುವಿಗೆ ಮುನ್ನರಿವು ಉತ್ತಮವಾಗಿರುತ್ತದೆ, ಮುಂಚಿನ ಪ್ರಿಕ್ಲಾಂಪ್ಸಿಯಾವನ್ನು ಗುರುತಿಸಲಾಗುತ್ತದೆ ಮತ್ತು ಮೇಲ್ವಿಚಾರಣೆ ಮಾಡಲಾಗುತ್ತದೆ. ಸ್ಟ್ಯಾಂಡರ್ಡ್ ಗರ್ಭಧಾರಣೆಯ ಪರೀಕ್ಷೆಗಳಲ್ಲಿ ಪ್ರಿ-ಎಕ್ಲಾಂಪ್ಸಿಯಾವನ್ನು ಕಂಡುಹಿಡಿಯಬಹುದು, ಇದು ತುಂಬಾ ಸರಳವಾದ ವಿಧಾನವಾಗಿದೆ. ತೊಡಕುಗಳು ದೀರ್ಘಕಾಲದವರೆಗೆ ತಾಯಿಯಲ್ಲಿ ಅನಾರೋಗ್ಯವನ್ನು ಉಂಟುಮಾಡಬಹುದು ಮತ್ತು ಹೃದಯರಕ್ತನಾಳದ ಕಾಯಿಲೆ, ಟೈಪ್ ಖಖ ಡಯಾಬಿಟಿಸ್ ಮತ್ತು ಮೂತ್ರಪಿಂಡ ವೈಫಲ್ಯ ಸೇರಿದಂತೆ ಭವಿಷ್ಯದಲ್ಲಿ ವಿವಿಧ ದೀರ್ಘಕಾಲದ ಕಾಯಿಲೆಗಳ ಬೆಳವಣಿಗೆಯೊಂದಿಗೆ ಅವು ಹೆಚ್ಚು ಸಂಬಂಧ ಹೊಂದಿವೆ. ಈ ಪರಿಸ್ಥಿತಿಗಳು ಹಲವಾರು ಜೀವಗಳನ್ನು ಪಡೆದುಕೊಳ್ಳುತ್ತವೆ – ಅಥವಾ ಅವುಗಳ ಮೇಲೆ ಗಮನಾರ್ಹ ಪರಿಣಾಮ ಬೀರುತ್ತವೆ – ಆರಂಭಿಕ ರೋಗಲಕ್ಷಣದ ಮೌಲ್ಯಮಾಪನದ ಮಹತ್ವವನ್ನು ಒತ್ತಿಹೇಳುತ್ತದೆ, ಜೊತೆಗೆ ಅರ್ಹ ಆರೋಗ್ಯ ವೃತ್ತಿಪರರಿಂದ ತ್ವರಿತ ಮತ್ತು ಸೂಕ್ತ ಪ್ರತಿಕ್ರಿಯೆ. ಆರೋಗ್ಯ ಸೇವೆಗಳಿಗೆ ಪ್ರವೇಶವನ್ನು ನಿರ್ಬಂಧಿಸಿರುವ ಸಮುದಾಯಗಳಲ್ಲಿ ವಿಶೇಷವಾಗಿ ಸತ್ಯವಾಗಿದೆ.

# ಸ್ಪೇನ್ ಪ್ರಧಾನಿ ಪತ್ನಿಯನ್ನು ಭ್ರಷ್ಟಾಚಾರಿ ಎಂದ ಅರ್ಜೆಂಟೀನಾ ಅಧ್ಯಕ್ಷ ಮಿಲೆ



**ಅರ್ಜೆಂಟೀನಾ:** ಸ್ಪೇನ್ ರಾಜಧಾನಿ ಮ್ಯಾಡ್ರಿಡ್ನಲ್ಲಿ ಭಾನುವಾರ ಬಲಪಂಥೀಯ ರ್‍ಯಾಲಿಯಲ್ಲಿ ಅರ್ಜೆಂಟೀನಾ ಅಧ್ಯಕ್ಷ ಜೇವಿಯರ್ ಮಿಲೆ ಪಾಲ್ಗೊಂಡಿದ್ದರು. ಈ ವೇಳೆ ಅವರು ಸ್ಪೇನ್ನ ಪ್ರಧಾನಿ ಪೆಡ್ರೋ ಸ್ಯಾಂಚೆಸ್ ಅವರ ಪತ್ನಿಯ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದು ಈ ಹಿನ್ನೆಲೆಯಲ್ಲಿ ಹಿನ್ನೆಲೆಯಲ್ಲಿ ಅರ್ಜೆಂಟೀನಾದಿಂದ ತನ್ನ ರಾಯಭಾರಿಯನ್ನು ವಾಪಾಸು ಕರೆಸಿಕೊಳ್ಳುವುದಾಗಿ ಸ್ಪೇನ್ ಸರಕಾರ ಘೋಷಿಸಿದೆ.ಸ್ಯಾಂಚೆಸ್ ಅವರ ಪತ್ನಿ ಬೆಗೋನ ಗೋಮೆಝ್ರನ್ನು 'ಭ್ರಷ್ಟಾಚಾರಿ' ಎಂದು ಟೀಕಿಸಿದ್ದರು ಹಾಗೂ ಸಮಾಜವಾದವನ್ನು 'ಶಾಪಗ್ರಸ್ತ ಮತ್ತು ಹಾನಿಕಾರಕ ವ್ಯವಸ್ಥೆ' ಎಂದು ಲೇವಡಿ ಮಾಡಿದ್ದರು. ಸ್ಪೇನ್ ಅಧ್ಯಕ್ಷರ 'ಸೋಷಿಯಲಿಸ್ಟ್ ಪಾರ್ಟಿ'ಯನ್ನು ಗುರಿಯಾಗಿಸಿ ಈ ಹೇಳಿಕೆ ನೀಡಿದ್ದಾರೆಂದು ವಿಶ್ಲೇಷಿಸಲಾಗಿದೆ.

ಈ ರ್‍ಯಾಲಿಯಲ್ಲಿ ಸ್ಪೇನ್ನ ಹಲವು ಅಂತರಾಷ್ಟ್ರೀಯ ಮಿತ್ರದೇಶಗಳ ಪ್ರತಿನಿಧಿಗಳೂ ಪಾಲ್ಗೊಂಡಿದ್ದರು. ಅರ್ಜೆಂಟೀನಾ ಅಧ್ಯಕ್ಷರ ನಡವಳಿಕೆಯನ್ನು ಸ್ಪೇನ್ ಸರಕಾರ ತೀವ್ರವಾಗಿ ಖಂಡಿಸಿದ್ದು ಜೇವಿಯರ್ ಮಿಲೆ ತಕ್ಷಣ ಕ್ಷಮೆ ಯಾಚಿಸಬೇಕೆಂದು ಸ್ಪೇನ್ನ ವಿದೇಶಾಂಗ ಸಚಿವ ಜೋಸ್ ಮ್ಯಾನುವೆಲ್ ಆಗ್ರಹಿಸಿದ್ದಾರೆ. ತಮ್ಮ ವರ್ತನೆಯಿಂದ ಮಿಲೆ ಉಭಯ ದೇಶಗಳ ನಡುವಿನ ಸಂಬಂಧಕ್ಕೆ ತೀವ್ರ ಹಾನಿ ತಂದಿದ್ದಾರೆ ಎಂದವರು ಖಂಡಿಸಿದ್ದಾರೆ.

ಆದರೆ ಅಧ್ಯಕ್ಷರು ಕ್ಷಮೆ ಯಾಚಿಸುವ ಪ್ರಶ್ನೆಯೇ ಇಲ್ಲವೆಂದು ಅರ್ಜೆಂಟೀನಾ ಅಧ್ಯಕ್ಷರ ವಕ್ತಾರರು ಹೇಳಿದ್ದು ಸ್ಪೇನ್ ಅಧಿಕಾರಿಗಳು ಮಿಲೆ ವಿರುದ್ಧ ಮಾಡಿರುವ ಅವಹೇಳನಕಾರಿ ಹೇಳಿಕೆಯನ್ನು ಮೊದಲು ವಾಪಾಸು ಪಡೆಯಬೇಕೆಂದು ಆಗ್ರಹಿಸಿದ್ದಾರೆ.

# ಮತ್ತೆ ಕೊರೋನಾ ಹೊಸ ತಳಿಯ ಭೀತಿ



**ನವದೆಹಲಿ:** ಸಿಂಗಾಪುರದಲ್ಲಿ ಸಾಂಕ್ರಾಮಿಕ ಮಹಾಮಾರಿ ಕೊರೋನಾ ವೈರಸ್ ಹೊಸ ತಳಿ ಒಮಿಕ್ರಾನ್ ಪ್ರಕರಣ ಸಂಖ್ಯೆ ಏರುಗತಿ ಯಲ್ಲಿದ್ದು, ಆತಂಕ ಶುರುವಾಗಿದೆ. ಇತ್ತ ಸಿಲಿಕಾನ್ ಸಿಟಿ ಬೆಂಗಳೂರಿ ನಲ್ಲೂ ಆತಂಕದ ವಾತಾವರಣ ನಿರ್ಮಾಣವಾಗಿದೆ. ಸಿಂಗಾಪುರದಿಂದ ಆಗಮಿಸುವ ವಿಮಾನಯಾನಿಗಳ ಸಂಖ್ಯೆ ಹೆಚ್ಚಿದ್ದು, ಈ ನಿಟ್ಟಿನಲ್ಲಿ ಹೆಚ್ಚಿನ ನಿಗಾ ವಹಿಸಲಾಗುತ್ತಿದೆ. ಅಲ್ಲದೇ ಕೇಂದ್ರ ಆರೋಗ್ಯ ಇಲಾಖೆಯ ಜೊತೆಗೆ ರಾಜ್ಯ ಆರೋಗ್ಯ ಇಲಾಖೆಯೂ ಸಂಪರ್ಕದಲ್ಲಿದ್ದು, ಮುಂಜಾಗ್ರತಾ ಕ್ರಮಕ್ಕಾಗಿ ಚರ್ಚೆ ನಡೆಸಿದೆ ಎಂದು ತಿಳಿದುಬಂದಿದೆ.

ಸಿಂಗಾಪುರ ದಲ್ಲಿ ಕಳೆದ ಒಂದು ವಾರದಲ್ಲಿ 25 ಸಾವಿರ ಕೋವಿಡ್ ಕೇಸ್ ಧೃಡಪಟ್ಟಿರುವುದಾಗಿ ವರದಿಯಾಗಿದೆ. ಈ ಹಿನ್ನೆಲೆ ಅಲ್ಲಿನ ಸ್ಥಳೀಯ ಆಡಳಿತವು ಮಾಸ್ಕ್ ಕಡ್ಡಾಯಗೊಳಿಸಿ ಆದೇಶ ಹೊರಡಿಸಿದೆ. ಇತ್ತ ರಾಜ್ಯದ ನೆರೆಯ ಮಹಾರಾಷ್ಟ್ರದಲ್ಲಿ 91 ಕೋವಿಡ್ ಒಮಿಕ್ರಾನ್ ತಳಿ ಪತ್ತೆಯಾಗಿವೆ. ಮುಂದಿನ ಎರಡು ವಾರಗಳಲ್ಲಿ ಸಿಂಗಾಪುರದಲ್ಲಿ ಮತ್ತಷ್ಟು ಕೋವಿಡ್ ಕೇಸ್ ಏರಿಕೆಯಾಗುವ ಸಾಧ್ಯತೆ ಇದೆ ಎಂದು ಅಲ್ಲಿನ ಆರೋಗ್ಯ ಇಲಾಖೆ ಎಚ್ಚರಿಕೆ ನೀಡಿದೆ.

# ಸಿಸೋಡಿಯಾ' ನ್ಯಾಯಾಂಗ ಬಂಧನ ವಿಸ್ತರಣೆ

**ನವದೆಹಲಿ:** ದೆಹಲಿಯ ಮಾಜಿ ಉಪಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಅವರ ನ್ಯಾಯಾಂಗ ಬಂಧನವನ್ನು ದೆಹಲಿಯ ರೂಸ್ ಅವೆನ್ಯೂ ನ್ಯಾಯಾಲಯ ಮೇ 31 ರವರೆಗೆ ವಿಸ್ತರಿಸಿದೆ.ಅಬಕಾರಿ ನೀತಿ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಜೈಲು ಪಾಲಾಗಿರುವ ದೆಹಲಿ ಮಾಜಿ ಡಿಸಿಎಂ ಮನೀಶ್ ಸಿಸೋಡಿಯಾ ಜೈಲೇ ಗತಿ ಆಗಿದೆ.




# ಇಸ್ರೇಲ್ ವಿರುದದ ಆರೋಪ ತಳ್ಳಿಹಾಕಿದ ಜೋ ಬೈಡನ್

**ವಾಷಿಂಗ್ಟನ್:** ಇಸ್ರೇಲ್–ಹಮಾಸ್ ಯುದ್ಧದ ಬಗ್ಗೆ ಸ್ಪಷ್ಟನೆ ನೀಡಿರುವ ಅಮೆರಿಕ ಅಧ್ಯಕ್ಷ ಜೋ ಬೈಡನ್, ಗಾಝಾದಲ್ಲಿ ನಡೆಯುತ್ತಿರುವುದು ನರಮೇಧವಲ್ಲ ಎಂದು ಹೇಳಿದ್ದಾರೆ ಮತ್ತು ಯಹೂದಿ ಅಮೆರಿಕನ್ ಹೆರಿಟೇಜ್ ತಿಂಗಳಿಗಾಗಿ ಶ್ವೇತಭವನದ ಆಚರಣೆಯನ್ನು ಆಯೋಜಿಸುವಾಗ ಇಸ್ರೇಲ್ಗೆ ತಮ್ಮ ಬೆಂಬಲವನ್ನು ಪುನರುಚ್ಚರಿಸಿದ್ದಾರೆ ಎಂದು ದಿ ಹಿಲ್ ವರದಿ ಮಾಡಿದೆ.ರೋಸ್ ಗಾರ್ಡನ್ನಲ್ಲಿ ನೆರೆದಿದ್ದ ಅತಿಥಿಗಳನ್ನುದ್ದೇಶಿಸಿ ಮಾತನಾಡಿದ ಜೋ ಬೈಡನ್, ಇಸ್ರೇಲ್ ಗಾಝಾದಲ್ಲಿ ನರಮೇಧ ನಡೆಸುತ್ತಿದೆ ಎಂಬ ಹೇಳಿಕೆಗಳನ್ನು ತಿರಸ್ಕರಿಸಿದರು, ಯುದ್ಧ ಅಪರಾಧಗಳಿಗಾಗಿ ಇಸ್ರೇಲಿ ನಾಯಕರ ವಿರುದ್ಧ ವಾರಂಟ್ಗಾಗಿ ಅಂತರರಾಷ್ಟ್ರೀಯ ಕ್ರಿಮಿನಲ್ ನ್ಯಾಯಾಲಯದ ವಿನಂತಿಯನ್ನು ಟೀಕಿಸಿದರು ಮತ್ತು ಹಮಾಸ್ ವಿರುದ್ಧದ ಯುದ್ಧದಲ್ಲಿ ಇಸ್ರೇಲ್ಗೆ ಬೆಂಬಲ ನೀಡುವುದಾಗಿ ಭರವಸೆ ನೀಡಿದರು.ಇಂದಿನ ಸ್ವಾಗತವು ಕಷ್ಟದ ಸಮಯದಲ್ಲಿ ಬರುತ್ತದೆ ಎಂದು ನನಗೆ ತಿಳಿದಿದೆ. ಅಕ್ಟೋಬರ್ 7 ರ ಆಘಾತ ಮತ್ತು ಅದರ ನಂತರದ ? ನಿಮ್ಮಲ್ಲಿ ಅನೇಕರಿಗೆ ಇದು ಇನ್ನೂ ತಾಜಾ ಮತ್ತು ನಡೆಯುತ್ತಿದೆ ಎಂದು ಬೈಡನ್ ಕಳೆದ ವರ್ಷ 1,000 ಕ್ಕೂ ಹೆಚ್ಚು ಇಸ್ರೇಲಿಗಳನ್ನು ಕೊಂದ ಹಮಾಸ್ ದಾಳಿಯನ್ನು ಉಲ್ಲೇಖಿಸಿ ಹೇಳಿದರು.



# ಪುರಿ ಜಗನ್ನಾಥನೇ ಮೋದಿಯ ಭಕ್ತ ಎಂಬ ಹೇಳಿಕೆ: ಮೂರು ದಿನ ಉಪವಾಸ



**ಭುವನೇಶ್ವರ:** ಪುರಿ ಜಗನ್ನಾಥನೇ(ದೇವರು) ಪ್ರಧಾನಿ ನರೇಂದ್ರ ಮೋದಿಯವರ ಭಕ್ತ ಎಂಬುದಾಗಿ ಹೇಳಿಕೆ ನೀಡಿದ್ದ ಬಿಜೆಪಿ ಮುಖಂಡ, ಪುರಿ ಕ್ಷೇತ್ರದ ಅಭ್ಯರ್ಥಿ ಸಂಬಿತ್ ಪಾತ್ರ, ತಮ್ಮ ಹೇಳಿಕೆ ವಿವಾದಕ್ಕೆ ಕಾರಣವಾಗುತ್ತಿದ್ದಂತೆ ಕ್ಷಮೆ ಕೇಳಿದ್ದಾರೆ. ಇಂತಹ ಹೇಳಿಕೆ ನೀಡಿದ್ದಕ್ಕೆ ಪ್ರಾಯಶ್ಚಿತ್ತವಾಗಿ ಮೂರು ದಿನ ಉಪವಾಸ ಇರುವುದಾಗಿ ತಿಳಿಸಿದ್ದಾರೆ.

ಪುರಿ ಜಗನ್ನಾಥನೇ ಮೋದಿಯ ಭಕ್ತ ಎಂದು ನೀಡಿದ ಹೇಳಿಕೆ ವಿವಾದಕ್ಕೆ ಕಾರಣವಾಗುತ್ತಿದ್ದಂತೆ ವಿಡಿಯೋ ಹೇಳಿಕೆ ಬಿಡುಗಡೆ ಮಾಡಿರುವ ಸಂಬಿತ್ ಪಾತ್ರ, ಕ್ಷಮೆ ಯಾಚಿಸಿದ್ದಾರೆ. ದೇವರೇ ಮನುಷ್ಯನಿಗೆ ಭಕ್ತನಾಗಲು ಸಾಧ್ಯವಿಲ್ಲ. ನಾನು ಬಾಯಿ ತಪ್ಪಿನಿಂದ ಈ ರೀತಿ ಜಗನ್ನಾಥನೇ ಮೋದಿಯ ಭಕ್ತ ಎಂದು ಹೇಳಿದ್ದೇನೆ. ಈ ಹೇಳಿಕೆ ಭಕ್ತರ ಭಾವನೆಗಳಿಗೆ ಧಕ್ಕೆ ತಂದಿದೆ. ನನ್ನ ಉದ್ದೇಶ ಇದಾಗಿರಲಿಲ್ಲ. ನನ್ನ ಹೇಳಿಕೆಯಿಂದ ಯಾರಿಗಾದರೂ ನೋವಾಗಿದ್ದಲ್ಲಿ ಕ್ಷಮೆ ಕೇಳುತ್ತೇನೆ. ಪ್ರಾಯಶ್ಚಿತ್ತವಾಗಿ ಮೂರು ದಿನ ಉಪವಾಸ ಇರುತ್ತೇವೆ ಎಂದು ತಿಳಿಸಿದ್ದಾರೆ.

# ಬಿಜೆಪಿ 310 ಸ್ಥಾನ ಗೆದ್ದಿದೆ-ಶಾ



**ಒಡಿಶಾ:** ಲೋಕಸಭೆ ಚುನಾವಣೆಯ ಐದು ಹಂತಗಳು ಪೂರ್ಣಗೊಂಡ ನಂತರ ಭಾರತೀಯ ಜನತಾ ಪಕ್ಷ (ಬಿಜೆಪಿ) 310 ಸ್ಥಾನಗಳನ್ನು ಪಡೆಯುತ್ತದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಒಡಿಶಾದಲ್ಲಿ ಲೋಕಸಭೆ ಚುನಾವಣಾ ಪ್ರಚಾರದಲ್ಲಿ ತೊಡಗಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು, ರಾಜ್ಯವನ್ನು 'ಬಾಬು-ರಾಜ್' ನಿಂದ ಮುಕ್ತಗೊಳಿಸುವಂತೆ ಒಡಿಶಾದ ಜನರಿಗೆ ಕರೆ ನೀಡಿದ್ದು ಕೇಂದ್ರ ಮತ್ತು ರಾಜ್ಯದಲ್ಲಿ ಸರ್ಕಾರ ರಚಿಸಲು ಬಿಜೆಪಿಯನ್ನು ಬೆಂಬಲಿಸುವಂತೆ ಮನವಿ ಮಾಡಿದ್ದಾರೆ.

ಸಂಬಲ್ಪುರದಲ್ಲಿ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಶಾ, ಈ ಬಾರಿ ಒಡಿಶಾದಲ್ಲಿ ಬಿಜೆಪಿಯ ಚುನಾವಣಾ ಚಿಹ್ನೆ 'ಕಮಲ' ಅರಳಲಿದೆ ಎಂದರು. ರಾಜ್ಯದಲ್ಲಿ ಬೆರಳೆಣಿಕೆಯಷ್ಟು ಅಧಿಕಾರಿಗಳು ಆಡಳಿತ ನಡೆಸುತ್ತಿದ್ದಾರೆ ಎಂದು ಆರೋಪಿಸಿದರು. ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಅವರನ್ನು ಒಡಿಶಾದ ಸಂಬಲ್ಪುರ ಕ್ಷೇತ್ರದಿಂದ ಬಿಜೆಪಿ ಕಣಕ್ಕಿಳಿಸಿದೆ.

ಐದನೇ ಹಂತದ ಮತದಾನದ ನಂತರ ಬಿಜೆಪಿ ಈಗಾಗಲೇ 310 ಸ್ಥಾನಗಳನ್ನು ಪಡೆದುಕೊಂಡಿದೆ. ಆರು ಮತ್ತು ಏಳನೇ ಸುತ್ತಿನ ಮತದಾನದ ನಂತರ ನಮಗೆ 400ಕ್ಕೂ ಹೆಚ್ಚು ಸ್ಥಾನಗಳು ಬರಲಿವೆ. ಈ ಚುನಾವಣೆಯು ರಾಜ್ಯದಲ್ಲಿ ಪ್ರಸ್ತುತ 'ಬಾಬು ರಾಜ್' ಅನ್ನು ಕೊನೆಗೊಳಿಸಲಿದೆ ಎಂದು ಅವರು ಹೇಳಿದ್ದಾರೆ. ರಾಜ್ಯದಲ್ಲಿನ ಬಿಜು ಜನತಾ ದಳ (ಬಿಜೆಡಿ) ಸರ್ಕಾರವು ಒಡಿಶಾದ ಹೆಮ್ಮೆ, ಭಾಷೆ, ಸಂಸ್ಕೃತಿ ಮತ್ತು ಸಂಪ್ರದಾಯವನ್ನು ಅವಮಾನಿಸಿದೆ ಎಂದು ಶಾ ಆರೋಪಿಸಿದರು. ಜಗನ್ನಾಥ ದೇವಾಲಯವನ್ನು ವಾಣಿಜ್ಯ ಕೇಂದ್ರವನ್ನಾಗಿ ಪರಿವರ್ತಿಸಲು ಬಿಜೆಡಿ ಸರ್ಕಾರ ಬಯಸಿದೆ. ಮಠಗಳು ಮತ್ತು ದೇವಾಲಯಗಳನ್ನು ನಾಶಪಡಿಸಲಾಗಿದೆ ಮತ್ತು ದೇವಾಲಯದ ಎಲ್ಲಾ ನಾಲ್ಕು ದ್ವಾರಗಳನ್ನು ಇನ್ನೂ ಸಾರ್ವಜನಿಕರಿಗೆ ತೆರೆಯಲಾಗಿಲ್ಲ ಎಂದು ಆರೋಪಿಸಿದರು.

'ಅಧಿಕಾರಿ ರಾಜ್' ಹೇರುವ ಮೂಲಕ ನವೀನ್ ಬಾಬು ಒಡಿಶಾದ ಜನತೆಗೆ ಅವಮಾನ ಮಾಡಿದ್ದಾರೆ ಎಂದು ಅಮಿತ್ ಶಾ ಹೇಳಿದ್ದಾರೆ.

# ಬ್ರಿಕ್ಸ್ ಸೇರ್ಪಡೆಗೆ ಶ್ರೀಲಂಕಾ ಆಸಕ್ತಿ



**ಕೊಲಂಬೊ:** ಬ್ರಿಕ್ಸ್ ಗುಂಪಿಗೆ ಶ್ರೀಲಂಕಾ ಸೇರ್ಪಡೆಗೊಳ್ಳಲು ಉತ್ಸುಕವಾಗಿದೆ ಎಂದು ಆ ದೇಶದ ವಿದೇಶಾಂಗ ಸಚಿವ ಅಲಿ ಸಬ್ರಿ ಹೇಳಿದ್ದಾರೆ.

ಭಾರತವು ಸದಸ್ಯನಾದ ಬಳಿಕ 'ಬ್ರಿಕ್ಸ್' ಒಂದು ಉತ್ತಮ ಸಂಸ್ಥೆಯಾಗಿದೆ. ಭಾರತದ ನೆರವಿನಿಂದ ಬ್ರಿಕ್ಸ್ ಗೆ ಸೇರ್ಪಡೆಯಾಗಲು ನಾವು ಬಯಸಿದ್ದೇವೆ.

ಈ ಬಗ್ಗೆ ಪರಿಶೀಲಿಸಿ ಸರಕಾರಕ್ಕೆ ವರದಿ ನೀಡಲು ಉಪಸಮಿತಿಯೊಂದನ್ನು ರಚಿಸಲಾಗಿದೆ. ಸಮಿತಿಯ ವರದಿ ಕೈಸೇರಿದ ಬಳಿಕ ಈ ವಿಷಯದಲ್ಲಿ ಮುಂದಿನ ಕ್ರಮ ಕೈಗೊಳ್ಳುವುದಾಗಿ ಸಚಿವರನ್ನು ಉಲ್ಲೇಖಿಸಿ ಎಎನ್ಐ ವರದಿ ಮಾಡಿದೆ.

# ಇಬ್ರಾಹಿಂ ರೈಸಿ ಅಂತ್ಯಕ್ರಿಯೆಯಲ್ಲಿ ಉಪರಾಷ್ಟ್ರಪತಿ ಭಾಗವಹಿಸುವ ಸಾಧ್ಯತೆ

**ಇರಾನ್:** ಹೆಲಿಕಾಪ್ಟರ್ ಅಪಘಾತದಲ್ಲಿ ಮೃತಪಟ್ಟ ಇರಾನ್ ಅಧ್ಯಕ್ಷ ಇಬ್ರಾಹಿಂ ರೈಸಿ ಅವರ ಅಂತ್ಯಕ್ರಿಯೆಯಲ್ಲಿ ಉಪರಾಷ್ಟ್ರಪತಿ ಜಗದೀಪ್ ಧನ್ಕರ್ ಭಾಗವಹಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.ಉಪರಾಷ್ಟ್ರಪತಿ ಜಗದೀಪ್ ಧನ್ಕರ್ ಅವರು ಬುಧವಾರ ಇರಾನ್ ದೇಶಕ್ಕೆ ತೆರಳುವ ಸಾಧ್ಯತೆ ಇದೆ. ರೈಸಿ ಅವರ ಗೌರವಾರ್ಥವಾಗಿ ಮಂಗಳವಾರ ಭಾರತದಾದ್ಯಂತ ಶೋಕಾಚರಣೆ ಆಚರಿಸಲಾಗುತ್ತಿದೆ.63 ವರ್ಷದ ಇಬ್ರಾಹಿಂ ರೈಸಿ ಅವರಿದ್ದ ಹೆಲಿಕಾಪ್ಟರ್ ಭಾನುವಾರ ಅಜೆರ್ ಬೈಜಾನ್ ಪ್ರಾಂತ್ಯದ ಗಡಿಯ ಗುಡ್ಡಪ್ರದೇಶಗಳ ವ್ಯಾಪ್ತಿಯಲ್ಲಿ ಅಪಘಾತಕ್ಕೀಡಾಗಿತ್ತು. ಭಾನುವಾರ ಪತನಗೊಂಡ ಹೆಲಿಕಾಪ್ಟರ್ನ ಅವಶೇಷಗಳು ಸೋಮವಾರ ಮುಂಜಾನೆ ಪತ್ತೆಯಾಗಿವೆ. ಅಧ್ಯಕ್ಷರು ಇದ್ದ ಹೆಲಿಕಾಪ್ಟರ್ ಪರ್ವತಕ್ಕೆ ಬಡಿದು, ಚೂರಾಯಿತು ಎಂದು ಸರ್ಕಾರಿ ಮಾಧ್ಯಮ ಹೇಳಿದೆ. ರೈಸಿ ಹಾಗೂ ಇತರರು ಪೂರ್ವ ಅಜರ್ಬೈಜಾನ್ ಪ್ರಾಂತ್ಯದಲ್ಲಿ ಅಣೆಕಟ್ಟು ಯೋಜನೆಯೊಂದನ್ನು ಉದ್ಘಾಟಿಸಿ ಮರಳುತ್ತಿದ್ದಾಗ ಈ ದುರ್ಘಟನೆ ನಡೆದಿದೆ.



# ಐಸಿಎರ್ ನ ಹೊಸ ಬಾಸ್ಮತಿ ಅಕ್ಕಿಗೆ ಪರಿಸರವಾದಿಗಳಿಂದ ಟೀಕೆ!

**ನವದೆಹಲಿ:** ಭಾರತದ ಪ್ರಮುಖ ಸಂಶೋಧನಾ ಸಂಸ್ಥೆ ಇಂಡಿಯನ್ ಕೌನ್ಸಿಲ್ ಆಫ್ ಅಗ್ರಿಕಲ್ಚರ್ ರಿಸರ್ಚ್ (ಐಸಿಎಆರ್) ಕಳೆನಾಶಕ–ಸಹಿಷ್ಣು (ಊಣ) ಆರೊಮ್ಯಾಟಿಕ್ ಅಕ್ಕಿ (ಬಾಸ್ಮತಿ) ಅಕ್ಕಿಯನ್ನು ವಾಣಿಜ್ಯಿಕವಾಗಿ ಬಿಡುಗಡೆ ಮಾಡಿದೆ. ಐಸಿಎಆರ್ ಬಿಡುಗಡೆ ಮಾಡಿರುವ ಎರಡು ಪ್ರತ್ಯೇಕ ತಳಿಗಳ ಭತ್ತವನ್ನು ಕಡಮೆ ಪ್ರಮಾಣದ ನೀರಿನಲ್ಲಿ ಬೆಳೆಯಬಹುದಾಗಿದ್ದು, ಗ್ರೀನ್ ಹೌಸ್ ಅನಿಲಗಳಾದ ಮೀಥೇನ್ ನ್ನು ಕಡಿಮೆ ಮಾಡಿ ಅಕ್ಕಿಯ ಇಳುವರಿ ಹೆಚ್ಚಾಗಲಿದೆ. ಆದರೆ ಐಸಿಎಆರ್ ಈ ಅಕ್ಕಿ ತಳಿಗಳ ಬಗ್ಗೆ ಬಿಡುಗಡೆ ಮಾಡಿರುವ ಹೇಳಿಕೆಗಳನ್ನು ವಿಜ್ಞಾನಿಗಳು ಪ್ರಶ್ನಿಸಲು ಆರಂಭಿಸಿದ್ದಾರೆ. ಐಸಿಎಆರ್ ಹೇಳಿಕೆಗಳು ವಿಪರೀತ ಉತ್ಪ್ರೇಕ್ಷೆಯಿಂದ ಕೂಡಿದ್ದು, ಭತ್ತದ ವೈವಿಧ್ಯತೆಯನ್ನೇ ನಾಶ ಮಾಡಲಿದೆ ಎಂದು ಹೇಳಿದ್ದಾರೆ. ಹೊಸ ಎರಡು ವಿಧದ ಬಾಸ್ಮತಿ ಅಕ್ಕಿ ಪುಸ ಬಾಸ್ಮತಿ 1979 ಹಾಗೂ ಪುಸ ಬಾಸ್ಮತಿ 1985 ತಳೀಯವಾಗಿ ಮಾರ್ಪಡಿಸದ ಅಕ್ಕಿಯ ಪ್ರಭೇದಗಳಾಗಿದ್ದು, ಮೂರು ವರ್ಷಗಳ ಕಾಲ ಪ್ರಯೋಗ ನಡೆಸಿ ಅಭಿವೃದ್ಧಿಪಡಿಸಲಾಗಿದೆ. ಇದು ಈಗಿರುವ ಪುಸ ಬಾಸ್ಮತಿ 1121 ಹಾಗೂ ಪುಸ ಬಾಸ್ಮತಿ 1509 ಅಕ್ಕಿಯ ಸುಧಾರಿತ ಆವೃತ್ತಿಗಳಾಗಿವೆ. ಹೊಸ ಪ್ರಭೇದಗಳು ಇಮಾಜೆಥಪೈರ್‌ನಂತಹ ಸಸ್ಯನಾಶಕಗಳನ್ನು ನೇರವಾಗಿ ಅನ್ವಯಿಸಲು ಅನುವು ಮಾಡಿಕೊಡುತ್ತದೆ, ಈ ಪ್ರಭೇದಗಳು ರೂಪಾಂತರಿತ ಂಐಖ ಜೀನ್ ಅನ್ನು ಹೊಂದಿದ್ದು, ಕೆಲವು ಪ್ರಬಲವಾದ ಕಳೆಗಳನ್ನು ನಿರ್ಮೂಲನೆ ಮಾಡುತ್ತದೆ.



# ವಿದ್ಯಾರ್ಥಿ ವೀಸಾ ನೀತಿ ಬದಲಿಸಲು ಬ್ರಿಟನ್ ಪ್ರಧಾನಿ ಚಿಂತನೆ!



**ಲಂಡನ್:** ಬ್ರಿಟನ್ನಲ್ಲಿ ವಿದೇಶಿ ವಿದ್ಯಾರ್ಥಿಗಳು ವ್ಯಾಸಂಗ ಮುಗಿಸಿದ ಬಳಿಕವೂ 2 ವರ್ಷ ಅಲ್ಲೇ ಇದ್ದು, ಕೆಲಸ ಮಾಡಲು ಅನುವು ಮಾಡಿಕೊಡುವ ವಿದ್ಯಾರ್ಥಿ ವೀಸಾದ ನಿಯಮಗಳನ್ನು ಬದಲಾಯಿಸಲು ಬ್ರಿಟನ್ ಪ್ರಧಾನಿ ರಿಷಿ ಸುನಕ್ ಚಿಂತಿಸುತ್ತಿದ್ದಾರೆ. ಈ ಬದಲಾವಣೆ ಜಾರಿಯಾದರೆ ಭಾರತೀಯ ಮೂಲದ ವಿದ್ಯಾರ್ಥಿಗಳೇ ಹೆಚ್ಚು ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆಗಳಿದೆ ಎನ್ನಲಾಗಿದೆ.

ಪ್ರಸಕ್ತ ವಲಸಿಗ ವಿದ್ಯಾರ್ಥಿಗಳು ವ್ಯಾಸಂಗ ಮುಗಿಸಿದ ಬಳಿಕವೂ 2 ವರ್ಷ ಅಲ್ಲೇ ಇದ್ದು ಕೆಲಸ ಮಾಡಲು ಅವಕಾಶವಿದೆ. ಇದನ್ನು ರದ್ದುಮಾಡಲು ರಿಷಿ ಚಿಂತಿಸಿದ್ದಾರೆ. ಇದಕ್ಕೆ ಅವರ ಸಂಪುಟದಲ್ಲೇ ವಿರೋಧವಿದೆ ಎನ್ನಲಾಗಿದೆ.

2021–23ರವರೆಗೆ ನೀಡಿರುವ ವೀಸಾ ಪೈಕಿ ಶೇ.42ರಷ್ಟು ಭಾರತದ ವಿದ್ಯಾರ್ಥಿಗಳಿದ್ದು, ನಿಯಮ ಬದಲಿಸಿದರೆ ಅವರಿಗೆ ತೊಂದರೆಯಾಗಲಿದೆ.

# 35 ಸೆಕೆಂಡ್ ಭಾಷಣ ನಿಲ್ಲಿಸಿದ ಟ್ರಂಪ್




**ವಾಷಿಂಗ್ಟನ್:** ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಟೆಕ್ಸಾಸ್ನಲ್ಲಿ ನಡೆದ ನ್ಯಾಷನಲ್ ರೈಫಲ್ ಅಸೋಸಿಯೇಷನ್ನ ವಾರ್ಷಿಕ ಸಭೆಯಲ್ಲಿ 30 ಸೆಕೆಂಡ್ಗಳಿಗೂ ಹೆಚ್ಚು ಕಾಲ ಭಾಷಣವನ್ನು ನಿಲ್ಲಿಸಿ ಮತ್ತೆ ಮುಂದುವರಿಸಿದ್ದು ಚರ್ಚೆಗೆ ಕಾರಣವಾಗಿದೆ. ಚುನಾವಣಾ ಕಾಲದಲ್ಲಿ ಅವರು ಈ ರೀತಿ ಭಾಷಣ ಮಧ್ಯೆ ವಿರಾಮ ತೆಗೆದುಕೊಂಡಿರುವುದು ಅವರ ಆರೋಗ್ಯ ಮತ್ತು ಫಿಟ್ನೆಸ್ ಬಗ್ಗೆ ವ್ಯಾಪಕವಾದ ಊಹಾಪೋಹಗಳಿಗೆ ಕಾರಣವಾಗಿದೆ.

ಟ್ರಂಪ್ ಜನಸಂದಣಿಯನ್ನುದ್ದೇಶಿಸಿ ಮಾತನಾಡುತ್ತಾ, ನವೆಂಬರ್ನಲ್ಲಿ ಮತ ಚಲಾಯಿಸುವಂತೆ ಗನ್ ಮಾಲೀಕರನ್ನು ಒತ್ತಾಯಿಸಿ, ಎರಡನೇ ತಿದ್ದುಪಡಿಯು ಅಪಾಯದಲ್ಲಿದೆ ಎಂದು ಹೇಳಿದಾಗ ಭಾಷಣ ನಡುವೆ ಬ್ರೇಕ್ ತೆಗೆದುಕೊಂಡಿದ್ದಾರೆ.

ಅಮೆರಿಕ ಸಂವಿಧಾನದ ಎರಡನೇ ತಿದ್ದುಪಡಿ ( ತಿದ್ದುಪಡಿ ಶಸ್ತ್ರಾಸ್ತ್ರಗಳನ್ನು ಇಟ್ಟುಕೊಳ್ಳುವ ಮತ್ತು ಹೊರುವ ಹಕ್ಕನ್ನು ರಕ್ಷಿಸುತ್ತದೆ. ತಮ್ಮ ಭಾಷಣದ ಸಮಯದಲ್ಲಿ, ಟ್ರಂಪ್ ಟೆಕ್ಸಾಸ್ನ ಇತಿಹಾಸವನ್ನು ಹೈಲೈಟ್ ಮಾಡಿದ್ದು, ಅದರ ಪ್ರವರ್ತಕರು ಮತ್ತು ಅವರು ಅಮೆರಿಕಕ್ಕೆ ನೀಡಿದ ಕೊಡುಗೆಗಳನ್ನು ಶ್ಲಾಘಿಸಿದರು. ಕೌಬಾಯ್ಸ್ ಮತ್ತು ದನ ಸಾಕುವವರು ಮತ್ತು ರೇಂಜರ್ಗಳು, ತೈಲ ಕೆಲಸಗಾರರು, ಸೈನಿಕರು ಮತ್ತು ಕೆಚ್ಚೆದೆಯ ಪ್ರವರ್ತಕರು ಸ್ವಾತಂತ್ರ್ಯಕ್ಕೆ ಕೊಡುಗೆ ನೀಡಿದ್ದಾರೆ. ಅನೇಕರು ಇಲ್ಲಿಗೆ ಬಂದರು ಆದರೆ ತಮ್ಮ ಕಾಲಿನ ಬೂಟುಗಳು, ಅವರ ಬೆನ್ನಿನ ಮೇಲೆ ಬಟ್ಟೆಗಳು ಮತ್ತು ಅವರ ತಡಿಯಲ್ಲಿ ಬಂದೂಕುಗಳನ್ನು ಹೊರತುಪಡಿಸಿ ಏನೂ ಇಲ್ಲ. ಅವರು ಒಟ್ಟಾಗಿ ಅಮೆರಿಕವನ್ನು ವಿಶ್ವದ ಇತಿಹಾಸದಲ್ಲಿ ಏಕೈಕ ಶ್ರೇಷ್ಠ ರಾಷ್ಟ್ರವಾಗಿ ಮಾಡಲು ಸಹಾಯ ಮಾಡಿದರು ಎಂದು ಟ್ರಂಪ್ ಹೇಳಿದ್ದಾರೆ. ಈ ಹೇಳಿಕೆಯ ನಂತರ ಟ್ರಂಪ್ 30 ಸೆಕೆಂಡುಗಳಿಗಿಂತ ಹೆಚ್ಚು ಕಾಲ ಬ್ರೇಕ್ ತೆಗೆದುಕೊಂಡಿದ್ದು, ಹಿನ್ನೆಲೆಯಲ್ಲಿ ಸಂಗೀತ ನುಡಿಸುತ್ತಿರುವುದು ಕೇಳಿ ಬರುತ್ತಿದೆ.ಟ್ರಂಪ್ ಭಾಷಣದಲ್ಲಿ ಬ್ರೇಕ್ ತೆಗೆದುಕೊಂಡಿರುವುದು ಸೋಶಿಯಲ್ ಮಿಡಿಯಾದಲ್ಲಿ ಚರ್ಚಾ ವಿಷಯವಾಗಿದೆ.

# ಬಿರುಗಾಳಿ ಹೊಡೆತಕ್ಕೆ ತತ್ತರಿಸಿ ಹೋದ ಸಿಂಗಾಪುರ್ ವಿಮಾನ

**ಬ್ಯಾಂಕಾಕ್:** ಲಂಡನ್‌ನಿಂದ ಸಿಂಗಾಪುರಕ್ಕೆ ತೆರಳುತ್ತಿದ್ದ ವಿಮಾನ ಬಿರುಗಾಳಿಯ ಹೊಡೆತಕ್ಕೆ ಅಲುಗಾಡಿ ಭಾರೀ ಅನಾಹುತ ಸೃಷ್ಟಿಸಿದ ಘಟನೆ ನಡೆದಿದೆ. ಭಯಾನಕ ಘಟನೆಯಲ್ಲಿ 30ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿದ್ದಾರೆ. ಲಂಡನ್ನ ಹೀಥ್ರೂ ವಿಮಾನ ನಿಲ್ದಾಣದಿಂದ ಸಿಂಗಾಪುರಕ್ಕೆ ಹೊರಟಿದ್ದ ಖಕಿ321 ವಿಮಾನವು ಮಾರ್ಗ ಮಧ್ಯದಲ್ಲಿ ತೀವ್ರವಾಗಿ ಬೀಸಿದ ಗಾಳಿಯಿಂದ ತತ್ತರಿಸಿ ಹೋಗಿದೆ. ಮಧ್ಯಾಹ್ನ 3.45ಕ್ಕೆ (ಸ್ಥಳೀಯ ಕಾಲಮಾನ) ಬ್ಯಾಂಕಾಕ್ನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ತುರ್ತು ಭೂಸ್ಪರ್ಶ ಮಾಡಲಾಗಿದೆ. ಇನ್ನು ಈ ವಿಮಾನದಲ್ಲಿ ಒಟ್ಟು 211 ಮಂದಿ ಪ್ರಯಾಣಿಕರು ಹಾಗೂ 18 ಮಂದಿ ಸಿಬ್ಬಂದಿ ಇದ್ದರು ಎಂದು ತಿಳಿದು ಬಂದಿದೆ.ಇನ್ನು ವಿಮಾನ ಟ್ರ್ಯಾಕಿಂಗ್ ಡೇಟಾವನ್ನು ವಿಶ್ಲೇಷಿಸಿದಾಗ ಸಿಂಗಾಪುರ್ ಏರ್ಲೈನ್ಸ್ ವಿಮಾನವು 37,000 ಅಡಿ (11,300 ಮೀಟರ್) ಎತ್ತರದಲ್ಲಿ ಪ್ರಯಾಣಿಸುವುದನ್ನು ತೋರಿಸಿದೆ. ನಂತರ, ಬೋಯಿಂಗ್ 777 ದಿಢೀರನೇ 5 ನಿಮಿಷಗಳ ಅವಧಿಯಲ್ಲಿ 6 ಸಾವಿರ ಅಡಿ ವಿಮಾನ ಕೆಳಗೆ ಬಂದಿದೆ. ವಿಮಾನ ತುರ್ತು ಭೂಸ್ಪರ್ಶ ಮಾಡಿದ ಕೂಡಲೇ ಗಂಭೀರವಾಗಿ ಗಾಯಗೊಂಡವರನ್ನು ಸಮಿತಿವೇಜ್ ಶ್ರೀನಕರಿನ್ ಆಸ್ಪತ್ರೆಗೆ ದಾಖಲಿಸಿದ್ದಾರೆ. ಜೊತೆಗೆ ಗಂಭೀರವಾಗಿ ಗಾಯಗೊಂಡವರಿಗೆ ನಾವು ಅಗತ್ಯ ವೈದ್ಯಕೀಯ ನೆರವು ಒದಗಿಸಲು ಥೈಲ್ಯಾಂಡ್ನ ಸ್ಥಳೀಯ ಅಧಿಕಾರಿಗಳೊಂದಿಗೆ ಕೆಲಸ ಮಾಡುತ್ತಿದ್ದೇವೆ. ಈ ಘಟನೆಯಲ್ಲಿ ಈಗಾಗಲೇ ಓರ್ವ ಪ್ರಯಾಣಿಕ ಸಾವನ್ನಪ್ಪಿದ್ದು, ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇದೆ. ಇನ್ನು, ಅಗತ್ಯವಿರುವ ಯಾವುದೇ ಹೆಚ್ಚುವರಿ ಸಹಾಯವನ್ನು ಒದಗಿಸಲು ಬ್ಯಾಂಕಾಕ್ಗೆ ತಂಡ ಕಳುಹಿಸುತ್ತಿದ್ದೇವೆ ಎಂದು ವಿಮಾನಯಾನ ಸಂಸ್ಥೆ ತಿಳಿಸಿದೆ.






# ಅಪಘಾತ: ಭಾರತ ಮೂಲದ 3 ವಿದ್ಯಾರ್ಥಿಗಳ ಸಾವು

**ಜಾರ್ಜಿಯಾ:** ಇಲ್ಲಿನ ಅಲ್ಫಾರೆಟ್ಟಾ ಬಳಿ ನಡೆದ ಕಾರು ಅಪಘಾತದಲ್ಲಿ ಮೂವರು ಭಾರತೀಯ ಮೂಲದ ಅಮೆರಿಕನ್ ವಿದ್ಯಾರ್ಥಿಗಳು ಮೃತಪಟ್ಟಿದ್ದು, ಇಬ್ಬರು ಗಾಯಗೊಂಡಿದ್ದಾರೆ.

ಕಾರಿನಲ್ಲಿದ್ದವರೆಲ್ಲರೂ 18 ವರ್ಷ ವಯಸ್ಸಿನವರು ಎನ್ನಲಾಗಿದ್ದು, ಅತಿಯಾದ ವೇಗವೇ ಅಪಘಾತಕ್ಕೆ ಕಾರಣವಿರಬಹುದು ಎಂದು ಪೊಲೀಸರು ಹೇಳಿದ್ದಾರೆ.

ಐವರೂ ಇಂಡೋ–ಅಮೆರಿಕನ್ ವಿದ್ಯಾರ್ಥಿಗಳು ಜಾರ್ಜಿಯಾ ವಿಶ್ವವಿದ್ಯಾಲಯ ಹಾಗೂ ಆಲ್ಫಾರೆಟ್ಟಾ ಹೈಸ್ಕೂಲ್ನ ವಿದ್ಯಾರ್ಥಿಗಳಾಗಿದ್ದರು. ಮೃತರಲ್ಲಿ ಆರ್ಯನ್ ಜೋಶಿ ಹೈಸ್ಕೂಲ್ ವಿದ್ಯಾರ್ಥಿಯಾಗಿದ್ದು, ಶ್ರೀಯಾ ಅವಸರಳ ಮತ್ತು ಅನ್ವಿ ಶರ್ಮಾ ವಿವಿಯಲ್ಲಿ ವ್ಯಾಸಂಗ ಮಾಡುತ್ತಿದ್ದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



ಸಿನಿ ಕಾರ್ನರ್



# 'ಪೌಡರ್' ಹಚ್ಚಲು ರೆಡಿ ಧನ್ಯಾ ರಾಮ್‌ಕುಮಾರ್

ಅಣ್ಣಾವ್ರ ಮೊಮ್ಮಗಳು ಧನ್ಯಾ ರಾಮ್‌ಕುಮಾರ್ ಇದೀಗ 'ಪೌಡರ್' ಹಚ್ಚಲು ರೆಡಿಯಾಗಿದ್ದಾರೆ.ದೂದಪೇಡ ದಿಗಂತ್‌ಜೊತೆ ನಕ್ಕು ನಗಿಸಲು ನಟಿರೆಡಿಯಾಗಿದ್ದಾರೆ. ಸದ್ಯ ಧನ್ಯಾ ಪಾತ್ರದ ಪೋಸ್ಟರ್‌ಕೂಡರಿಲೀಸ್‌ಆಗಿದ್ದು, ಅಭಿಮಾನಿಗಳ ಗಮನ ಸೆಳೆದಿದೆ. ವಿಭಿನ್ನ ಪಾತ್ರದ ಮೂಲಕ ಪಾತ್ರದ ಮೂಲಕ ಧನ್ಯಾ ಬರುತ್ತಿದ್ದಾರೆ.ಸದ್ಯ ರಿಲೀಸ್‌ಆಗಿರುವ ಪೋಸ್ಟರ್‌ನಲ್ಲಿತುಟಿ ಮೇಲಿರೋದನ್ನುತುಟೀಲೇತಾನೇ ಹುಡುಕಬೇಕು ಎಂದು ಪೋಸ್ಟರ್‌ನಲ್ಲಿ ಬರೆಯಲಾಗಿದೆ.ಕಪ್ಪು ಬಣ್ಣದಉಡುಗೆಯಲ್ಲಿ ನಟಿ ಕಾಣಿಸಿಕೊಂಡಿದ್ದಾರೆ. ಅಂದಹಾಗೆ, ಇತ್ತೀಚೆಗೆ ಪೌಡರ್ ಸಿನಿಮಾದಟೀಸರ್‌ಕೂಡರಿಲೀಸ್ ಮಾಡಲಾಗಿತ್ತು. ಇಬ್ಬರುಯುವಕರುಒಂದು ನಿಗೂಢವಾದ 'ಪೌಡರ್' ಪ್ರಭಾವದಿಂದಾಗಿ ಧಿಡೀರನೇ ಸಿರಿವಂತರಾಗಲು ಮಾಡುವ ಪ್ರಯತ್ನಗಳು, ಅವರಿಗೆಎದುರಾಗುವ ಸಮಸ್ಯೆಗಳು ಇವೆಲ್ಲವನ್ನೂ ಎಳೆಯಾಗಿ ಬಿಚ್ಚಿಡುವಕಥೆಯೇ ಪೌಡರ್.ಆ ಯುವಕರುಎಲ್ಲಾ ಸಮಸ್ಯೆಗಳನ್ನು ಮೀರಿ ನಿಲ್ಲುವರೇ ಅವರಎಲ್ಲಾ ಕನಸುಗಳು ನನಸಾಗುವುದೇ ಪೌಡರ್ ಹಿಂದಿನ ಪವರ್‌ಅವರಿಗೆ ತಿಳಿಯುವುದೇ ಈ ಎಲ್ಲಾ ಪ್ರಶ್ನೆಗಳಿಗೆ ಉತ್ತರಜುಲೈ 12 ಚಿತ್ರಮಂದಿರಗಳಲ್ಲಿ ಸಿಗಲಿದೆ.ಈಗಾಗಲೇ ತನ್ನಟೀಸರ್ ಮೂಲಕ 'ಪೌಡರ್' ಎಲ್ಲೆಡೆ ನಗೆ ಚಟಾಕಿ ಹತ್ತಿಸಿದ್ದು, ಚಿತ್ರ ಬಿಡುಗಡೆಯ ನಂತರ ಈ ಹಾಸ್ಯ ನಗು ದುಪ್ಪಟ್ಟುಗೊಳ್ಳಲಿದೆ. ಈ ಚಿತ್ರದಲ್ಲಿಧನ್ಯಾ ರಾಮ್‌ಕುಮಾರ್‌ಜೊತೆ ದಿಗಂತ್, ರವಿಶಂಕರ್‌ಗೌಡ, ಶರ್ಮಿಳಾ ಮಾಂಡ್ರೆ, ರಂಗಾಯಣರಘು, ನಾಗಭೂಷಣ್, ಅನಿರುದ್ಧಆಚಾರ್ಯ ಸೇರಿದಂತೆ ಹಲವರು ನಟಿಸಿದ್ದಾರೆ.'ಪೌಡರ್' ಚಿತ್ರವನ್ನುಕೆ.ಆರ್.ಜಿ ಸ್ಟುಡಿಯೋಸ್ ಮತ್ತು ಟಿ.ವಿ.ಎಫ್ ಪಿಕ್ಚರ್ಸ್ ಸಹಯೋಗದಲ್ಲಿ ಮೂಡಿ ಬಂದಿರುವ ಮೊದಲ ಚಿತ್ರವಾಗಿದೆ.



ಅಣ್ಣಾವ್ರ ಮೊಮ್ಮಗಳು





# ಕಿರುತೆರೆಗೆ ಮತ್ತೆ ಎಂಟ್ರಿ ಕೊಟ್ಟ ಸಿರಿ

## ಬಿಗ್ ಬಾಸ್‌ಕನ್ನಡ 10'ರ ಮೂಲಕ ಮನೆ ಮಾತಾದ ನಟಿ

'ಬಿಗ್ ಬಾಸ್‌ಕನ್ನಡ 10'ರ ಮೂಲಕ ಮನೆ ಮಾತಾದ ನಟಿ ಸಿರಿ ಇದೀಗ ಅಭಿಮಾನಿಗಳಿಗೆ ಗುಡ್ ನ್ಯೂಸ್‌ಕೊಟ್ಟಿದ್ದಾರೆ. ಕಿರುತೆರೆಯಿಂದದೂರ ಉಳಿದುಕೊಂಡಿದ್ದ ನಟಿ ಮತ್ತೆ ಟಿವಿ ಪರದೆಗೇರೀಎಂಟ್ರಿಕೊಟ್ಟಿದ್ದಾರೆ. ಕಿರುತೆರೆಯಜನಪ್ರಿಯಧಾರಾವಾಹಿ 'ರಂಗೋಲಿ' ಮೂಲಕ ಮನೆ ಮಾತಾದ ನಟಿ ಸಿರಿ ಕಡೆಯದಾಗಿ 'ರಾಮಾಚಾರಿ' ಸೀರಿಯಲ್ ಕಾಣಿಸಿಕೊಂಡಿದ್ದರು. ಬಳಿಕ ಈ ವರ್ಷದ 'ಬಿಗ್ ಬಾಸ್' ಶೋನಲ್ಲಿ ಸಿರಿ ಸ್ಪರ್ಧಿಯಾಗಿಎಂಟ್ರಿಕೊಟ್ಟರು. ಇದೀಗ ಸಮಯದ ಬಳಿಕ ಚುಕ್ಕಿ ತಾರೆ ಸೀರಿಯಲ್ ಮೂಲಕ ನಟಿ ವಿಶೇಷ ಪಾತ್ರದಲ್ಲಿ ಕಾಣಿಸಿಕೊಳ್ತಿದ್ದಾರೆ. ಸದ್ಯ ಸಿರಿ ಅವರ ಪಾತ್ರದ ಶೂಟಿಂಗ್ ನಡೆಯುತ್ತಿದ್ದು, ಚುಕ್ಕಿ-ಇಬ್ಬನಿಗೆದಾರಿತೋರಿರಕ್ಷಿಸೋ ವಿಶಿಷ್ಟ ಪಾತ್ರಕ್ಕೆ ಬಣ್ಣಹಚ್ಚಿದ್ದಾರೆ.ಇನ್ನೂ ಚುಕ್ಕಿ ಅಪ್ಪನನ್ನ (ಹೀರೋ ನವೀನ್ ಸಜ್ಜು) ಕಳೆದುಕೊಂಡ ನೋವಲ್ಲಿದ್ದಾಳೆ.ಸ್ನೇಹಿತೆಗೆ ಸಹಾಯ ಮಾಡಲುಇಬ್ಬನಿ ಕೂಡ ಬಂದಿದ್ದಾಳೆ.ಇದೀಗ ಕಥೆಯಲ್ಲಿ ಸಿರಿ ಅತಿಥಿ ಪಾತ್ರ, ಹೊಸ ತಿರುವುಕೊಡಲಿದೆ. ಅಂದಹಾಗೆ, ಇತ್ತೀಚೆಗೆ 'ಚುಕ್ಕಿತಾರೆ' ಸೀರಿಯಲ್‌ನಲ್ಲಿ ವಿನಯ್ ಗೌಡದಂಪತಿಕೂಡಅತಿಥಿ ಪಾತ್ರದಲ್ಲಿ ನಟಿಸಿದ್ದರು.ಈ ವಿಶೇಷ ಎಪಿಸೋಡ್ ನೋಡುಗರ ಗಮನ ಸೆಳೆದಿತ್ತು.

# ತಲೆಗೆ ಹುಳ ಬಿಟ್ಟ ಉಪೇಂದ್ರ

ರಿಯಲ್ ಸ್ಟಾರ್ ಉಪೇಂದ್ರನಟಿಸಿ, ನಿರ್ದೇಶನ ಮಾಡುತ್ತಿರುವ 'ಯುಐ' ಸಿನಿಮಾದಅಪ್ ಡೇಟ್‌ಗಾಗಿ ಅಭಿಮಾನಿಗಳು ಕಾತರದಿಂದ ಕಾಯುತ್ತಿದ್ದಾರೆ.ಯೂರೋಪ್‌ನ ಹಂಗೇರಿಯಿಂದಯುಐ ಸಿನಿಮಾದ ಬಗ್ಗೆ ವಿಡಿಯೋ ಹಂಚಿಕೊಳ್ಳುವ ಮೂಲಕ ಉಪೇಂದ್ರ, ಅಭಿಮಾನಿಗಳ ತಲೆಗೆ ಹುಳ ಬಿಟ್ಟಿದ್ದಾರೆ. ಕೆಲ ತಿಂಗಳುಗಳ ಹಿಂದೆ 'ಯುಐ' ಸಿನಿಮಾದಟೀಸರ್‌ಅನ್ನುರಿಲೀಸ್ ಮಾಡಿದ್ದರು.ಬಳಿಕ ಟ್ರೋಲ್ ಸಾಂಗ್‌ವೊಂದನ್ನು ಬಿಡುಗಡೆ ಮಾಡಿದ್ದರು.ಆ ನಂತರ ಈ ಚಿತ್ರದ ಬಗ್ಗೆ ಯಾವುದೇಅಪ್‌ಡೇಟ್ ಸಿಗದೇ ಫ್ಯಾನ್ಸ್ ನಿರಾಸೆಯಗಿದ್ದರು.ಈಗ ಎಲ್ಲರತಲೆಗೆರಿಯಲ್ ಸ್ಟಾರ್ ಹುಳ ಬಿಟ್ಟಿದ್ದಾರೆ.ಸಂಗೀತ ನಿರ್ದೇಶಕ ಅಜನೀಶ್ ಲೋಕನಾಥ್ ಜೊತೆಉಪೇಂದ್ರ,ಚರ್ಚೆ ಮಾಡುತ್ತಿರುವ ವಿಡಿಯೋ ಶೇರ್‌ಅಂದು 'ಎ' ಇಂದು 'ಯುಐ' ಎಂದುಕ್ಯಾಪ್ಷನ್ ನೀಡಿಕಮಿಂಗ್‌ಸೂನ್‌ಎಂದು ಹೇಳಿದ್ದಾರೆ.ಆದರೆ ವಿಚಾರ ಏನು ಎಂಬುದುರಿವೀಲ್ ಮಾಡಿಲ್ಲ. ಸದ್ಯಅಜನೀಶ್ ಲೋಕನಾಥ್ ಲೈವ್ ಮ್ಯೂಸಿಕ್ ರೆಕಾರ್ಡ್ ಮಾಡಲು ಹಂಗೇರಿಯನ್ನುಆಯ್ಕೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. ಹಂಗೇರಿಯ ಸಂಗೀತಗಾರರು ಭಿನ್ನವಾದ ಸಂಗೀತಗಾರರು ಅವರಿಗೆ ಜನಪದ ಶೈಲಿಯ ಪರಿಚಯವಿದೆ. ಅಲ್ಲಿನ ವಾದ್ಯಗಳು ಸಹ ಭಿನ್ನವಾಗಿದೆ.'ಯುಐ' ಸಿನಿಮಾಕ್ಕೆಚೆನ್ನಾಗಿ ಸೂಟ್ ಆಗುತ್ತವೆಯಾದ್ದರಿಂದ ಹಂಗೇರಿಯಲ್ಲಿಯೇ ಮ್ಯೂಸಿಕ್ ರೆಕಾರ್ಡ್ ಮಾಡುತ್ತಿದ್ದಾರೆ ಎನ್ನಲಾಗಿದೆ. ಈ ವೇಳೆ, ಅಜನೀಶ್‌ಗೆ ಜೊತೆ ಉಪೇಂದ್ರ ಕೂಡ ಜೊತೆಯಾಗಿದ್ದಾರೆ. ಆದರೆ ಉಪೇಂದ್ರ ಶೇರ್ ಮಾಡಿರುವ ವಿಡಿಯೋದಅರ್ಥವೇನು?ಎಂದುಅಧಿಕೃತ ಮಾಹಿತಿ ಹೊರಬೀಳುವವರೆಗೂ ಕಾಯಬೇಕಿದೆ. ಉಪೇಂದ್ರಗೆಕೊಡಗಿನ ಬೆಡಗಿರೀಷ್ಮಾ ನಾಣಯ್ಯ ನಾಯಕಿಯಾಗಿದ್ದಾರೆ.ಲಹರಿ ಸಂಸ್ಥೆ ಜೊತೆ ಶ್ರೀಕಾಂತ್ ಸೇರಿಕೊಂಡು 'ಯುಐ' ಸಿನಿಮಾಗೆ ಬಂಡವಾಳ ಹಾಕಿದ್ದಾರೆ.



## ಎಸ್‌ಆರ್‌ಎಚ್ ವಿರುದ್ಧ ಕೆಕೆಆರ್‌ಗೆ ಭರ್ಜರಿ ಜಯ

# ಫೈನಲ್‌ಗೆ ಶ್ರೇಯಸ್ ಅಯ್ಯರ್ ಪಡೆ



**ಅಹಮದಾಬಾದ್:** ಬ್ಯಾಟಿಂಗ್ ಮತ್ತು ಬೌಲಿಂಗ್‌ನಲ್ಲಿ ಉತ್ತಮ ಪ್ರದರ್ಶನ ನೀಡಿದ ಕೋಲ್ಕತ್ತಾ ನೈಟ್ ರೈಡರ್ಸ್ ಮೊದಲ ಕ್ವಾಲಿಫೈಯರ್‌ನಲ್ಲಿ ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ 8 ವಿಕೆಟ್‌ಗಳ ಭರ್ಜರಿ ಜಯಗಳಿಸಿ ನಾಲ್ಕನೇ ಬಾರಿ ಐಪಿಎಲ್ ಫೈನಲ್ ಪ್ರವೇಶಿಸಿದೆ.

ಗೆಲ್ಲಲು 160 ರನ್‌ಗಳ ಗುರಿಯನ್ನು ಪಡೆದ ಕೋಲ್ಕತ್ತಾ ಇನ್ನೂ 38 ಎಸೆತ ಬಾಕಿ ಇರುವಂತೆಯೇ 2 ವಿಕೆಟ್ ನಷ್ಟಕ್ಕೆ 164 ರನ್ ಹೊಡೆಯುವ ಮೂಲಕ ಜಯಗಳಿಸಿತು. ಇಲ್ಲಿಯವರೆಗೆ 2012, 2014, 2021ರಲ್ಲಿ ಕೋಲ್ಕತ್ತಾ ಫೈನಲ್ ಪ್ರವೇಶಿಸಿತ್ತು. 2012 ಮತ್ತು 2014ರಲ್ಲಿ ಚಾಂಪಿಯನ್ ಆಗಿ ಹೊರಹೊಮ್ಮಿತ್ತು.

ಸುಲಭದ ಸವಾಲನ್ನು ಬೆನ್ನಟ್ಟಿದ ಕೋಲ್ಕತ್ತಾ ಆರಂಭಿಕ ಆಟಗಾರರು ಆರಂಭದಿಂದಲೇ ಆಕ್ರಮಣಕ್ಕೆ ಇಳಿದಿದ್ದರು. ಮೊದಲ ವಿಕೆಟಿಗೆ 20 ಎಸೆತಗಳಲ್ಲಿ 44 ರನ್ ಬಂದಿತ್ತು. ರಹಮಾನುಲ್ಲಾ ಗುರ್ಬಾಜ್ 23 ರನ್ (14 ಎಸೆತ, 2 ಬೌಂಡರಿ, 2 ಸಿಕ್ಸರ್), ಸುನಿಲ್ ನರ್ರೈನ್ 21 ರನ್ (16 ಎಸೆತ, 4 ಬೌಂಡರಿ) ಹೊಡೆದು ಔಟಾದರು.

ನಂತರ ಜೊತೆಯಾದ ನಾಯಕ ಶ್ರೇಯಸ್ ಅಯ್ಯರ್ ಮತ್ತು ವೆಂಕಟೇಶ್ ಅಯ್ಯರ್ ಮುರಿಯದ 3ನೇ ವಿಕೆಟಿಗೆ 44 ಎಸೆತಗಳಲ್ಲಿ 97 ರನ್ ಜೊತೆಯಾಟವಾಡುವ ಮೂಲಕ ತಂಡಕ್ಕೆ ಜಯವನ್ನು ತಂದುಕೊಟ್ಟರು. ಶ್ರೇಯಸ್ ಅಯ್ಯರ್ 58 ರನ್ (24 ಎಸೆತ, 5 ಬೌಂಡರಿ, 4 ಸಿಕ್ಸರ್), ವೆಂಕಟೇಶ್ ಅಯ್ಯರ್ 51 ರನ್(28 ಎಸೆತ, 5 ಬೌಂಡರಿ, 4 ಸಿಕ್ಸರ್) ಸಿಡಿಸಿದರು.

ಹೈದರಾಬಾದ್ ಬೌಲಿಂಗ್ ಕಳಪೆಯಾಗಿತ್ತು. ಉತ್ತಮ ಬೌಲಿಂಗ್ ಮಾಡುತ್ತಿದ್ದ ನಾಯಕ ಪ್ಯಾಟ್ ಕಮ್ಮಿನ್ಸ್ 3 ಓವರ್ ಎಸೆದು 38 ರನ್ ನೀಡಿದ್ದರು. ಅಷ್ಟೇ ಅಲ್ಲದೇ ಹಲು ಕ್ಯಾಚ್‌ಗಳನ್ನು ಕೈಚೆಲ್ಲಿದ ಪರಿಣಾಮ ಹೈದರಾಬಾದ್ ಸೋಲನ್ನು ಅನುಭವಿಸಿತು.

### ಕಳಪೆ ಬ್ಯಾಟಿಂಗ್

**ಟಾಸ್ ಗೆದ್ದ ಕೋಲ್ಕತ್ತಾ ನಾಯಕ ಶ್ರೇಯಸ್ ಅಯ್ಯರ್ ಫೀಲ್ಡಿಂಗ್ ಆಯ್ಕೆ ಮಾಡಿದರು. ಈ ನಿರ್ಧಾರ ಮೊದಲ ಓವರ್‌ನಲ್ಲಿ ಫಲ ನೀಡಿತು. ಲೀಗ್‌ನಲ್ಲಿ ಅಬ್ಬರಿಸಿದ್ದ ಟ್ರಾವಿಸ್ ಹೆಡ್ ಅವರನ್ನು ಮಿಚೆಲ್ ಸ್ಟಾರ್ಕ್ ಶೂನ್ಯಕ್ಕೆ ಬೌಲ್ಡ್ ಮಾಡಿ ಆರಂಭಿಕ ಮುನ್ನಡೆ ತಂದುಕೊಟ್ಟರು. ಎರಡನೇ ಓವರ್‌ನಲ್ಲಿ ಸಿಕ್ಸರ್ ವೀರ ಅಭಿಷೇಕ್ ಶರ್ಮಾ 3 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. 39 ರನ್‌ಗಳಿಸುವಷ್ಟರಲ್ಲಿ ನಿತೀಶ್ ಕುಮಾರ್ ರೆಡ್ಡಿ ಸಹ ಔಟಾದರು. ಈ ಹಂತದಲ್ಲಿ ಜೊತೆಯಾದ ರಾಹುಲ್ ತ್ರಿಪಾಠಿ ಮತ್ತು ಕ್ಲಾಸೆನ್ 37 ಎಸೆತಗಳಲ್ಲಿ 62 ರನ್ ಜೊತೆಯಾಟವಾಡಿ ತಂಡಕ್ಕೆ ಸ್ವಲ್ಪ ಚೇತರಿಕೆ ನೀಡಿದರು. ಸಿಕ್ಸ್ ಸಿಡಿಸಲು ಹೋಗಿ ಕ್ಲಾಸೆನ್ 32 ರನ್ (21 ಎಸೆತ, 3 ಬೌಂಡರಿ, 1 ಸಿಕ್ಸರ್), ರಾಹುಲ್ ತ್ರಿಪಾಠಿ 55 ರನ್ (35 ಎಸೆತ, 7 ಬೌಂಡರಿ, 1 ಸಿಕ್ಸರ್) ಸಿಡಿಸಿ ರನೌಟ್‌ಗೆ ಬಲಿಯಾದರು. ನಾಯಕ ಪ್ಯಾಟ್ ಕಮ್ಮಿನ್ಸ್ 30 ರನ್ (24 ಎಸೆತ, 2 ಬೌಂಡರಿ, 2 ಸಿಕ್ಸರ್) ಸಿಡಿಸಿ ಔಟಾದರು. ಮಧ್ಯಮ ಕ್ರಮಾಂಕದಲ್ಲಿ ಉತ್ತಮ ಜೊತೆಯಾಟ ನಡೆಯದ ಕಾರಣ ಅಂತಿಮವಾಗಿ 19.3 ಓವರ್ ಗಳಲ್ಲಿ 159 ರನ್‌ಗಳಿಗೆ ಹೈದರಾಬಾದ್ ಆಲೌಟ್ ಆಯ್ತು. ಹೈದರಾಬಾದ್ 8 ಆಟಗಾರರು ಎರಡಂಕಿಯನ್ನು ದಾಟಲಿಲ್ಲ. 4 ಆಟಗಾರರು ಶೂನ್ಯಕ್ಕೆ ಔಟಾಗಿದ್ದರು.**

# ಆರ್‌ಸಿಬಿ ಟೀಂ ಬಗ್ಗೆ ವಿಜಯ್ ಮಲ್ಯ ಮಾತು



**ಅಹಮದಾಬಾದ್:** ಇತ್ತೀಚೆಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಅಮೋಘ ಜಯದೊಂದಿಗೆ ಪ್ಲೇ ಆಫ್ ಪ್ರವೇಶಿಸಿದ್ದನ್ನು ಹಾಡಿ ಹೊಗಳಿದ್ದ ಆರ್‌ಸಿಬಿ ಫ್ರಾಂಚೈಸಿಯ ಮಾಜಿ ಮಾಲೀಕ ವಿಜಯ್ ಮಲ್ಯ ಇದೀಗ ಭಾವುಕ ಸಂದೇಶವೊಂದನ್ನ ಎಕ್ಸ್ ಖಾತೆಲ್ಲಿ ಹಂಚಿಕೊಂಡಿದ್ದಾರೆ. ರಾಜಸ್ಥಾನ್ ರಾಯಲ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಇಂದು (ಬುಧವಾರ) ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುವ ಎಲಿಮಿನೇಟರ್ ಪಂದ್ಯದಲ್ಲಿ ಕಣಕ್ಕಿಳಿಯಲಿದೆ. ಸಂಜೆ 7:30ಕ್ಕೆ ಪಂದ್ಯ ಆರಂಭವಾಗಲಿದೆ. ಈ ಬೆನ್ನಲ್ಲೇ ವಿಜಯ್ ಮಲ್ಯ ಭಾವುಕ ಸಂದೇಶ ಹಂಚಿಕೊಂಡಿದ್ದು, ಆರ್‌ಸಿಬಿ ಗೆಲುವಿಗಾಗಿಯೂ ಶುಭ ಹಾರೈಸಿದ್ದಾರೆ. ನಾನು ಆರ್ ಸಿಬಿ ಫ್ರಾಂಚೈಸಿಗಾಗಿ ಮತ್ತು ವಿರಾಟ್ ಕೊಹ್ಲಿಗಾಗಿ ಬಿಡ್ ಮಾಡಿದಾಗ, ನನ್ನಿಂದ ಉತ್ತಮ ಆಯ್ಕೆಗಳನ್ನು ಮಾಡಲು ಸಾಧ್ಯವಿಲ್ಲ ಎಂದು ನನ್ನ ಆಂತರಿಕ ಪ್ರವೃತ್ತಿ ಹೇಳುತ್ತಿತ್ತು. ಆದರೀಗ ಐಪಿಎಲ್ ಟ್ರೋಫಿಯತ್ತ ಮುನ್ನುಗಲು ಆರ್‌ಸಿಬಿಗೆ ಉತ್ತಮ ಅವಕಾಶವಿದೆ ಎಂದು ಹೇಳುತ್ತಿದೆ. ಆರ್‌ಸಿಬಿ ತಂಡ ಇನ್ನು ಮುಂದಕ್ಕೆ ಮತ್ತು ಎತ್ತರಕ್ಕೆ ಸಾಗಲಿ, ಶುಭವಾಗಲಿ ಎಂದು ಆರ್‌ಸಿಬಿ ತಂಡಕ್ಕೆ ಹಾರೈಸಿದ್ದಾರೆ.

## ಪ್ರಜ್ವಲ್ ಪೆನ್‌ಡ್ರೈವ್ ಪ್ರಕರಣ

# ಅನಗತ್ಯ ಹೇಳಿಕೆ ನೀಡದಂತೆ ಸಚಿವರಿಗೆ ಸೂಚನೆ



**ಬೆಂಗಳೂರು:** ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾಗಿರುವ ಅಶ್ಲೀಲ ವಿಡಿಯೋಗಳಿರುವ ಪೆನ್‌ಡ್ರೈವ್ ಪ್ರಕರಣ ರಾಜ್ಯದಲ್ಲಿಹಲ್‌ಚಲ್‌ಸೃಷ್ಟಿಸಿದೆ. ಪ್ರಕರಣದ ತನಿಖೆಯನ್ನುವಿಶೇಷ ತನಿಖಾ ದಳನಡೆಸುತ್ತಿದೆ.ಪ್ರಕರಣದ ಕುರಿತು ಕೆಲಸಚಿವರ ಹೇಳಿಕೆಗಳು ತನಿಖೆಯ ತಪ್ಪಿಸುವ ಸಾಧ್ಯತೆ ಇದೆ. ಹೇಳಿಕೆಗಳಿಂದ ಪಕ್ಷಕ್ಕೂ ಕೂಡ ಡ್ಯಾಮೆಜ್ ಆಗುವ ಸಾಧ್ಯತೆ ಇದೆ. ಹೀಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವರಿಗೆ ಕೆಲ ಸೂಚನೆ ನೀಡಿದ್ದಾರೆ.

ಪೆನ್‌ಡ್ರೈವ್‌ಪ್ರಕರಣದಲ್ಲಿ ಅನಗತ್ಯವಾಗಿ ಪ್ರತಿಕ್ರಿಯೆ ಕೊಡಬೇಡಿ. ಮಾತು ಹೆಚ್ಚಾದರೆ ಇಡೀ ಪ್ರಕರಣದ ದಿಕ್ಕೇ ತಪ್ಪಿ ಹೋಗಬಹುದು.ಹೀಗಾಗಿ ಪ್ರತಿಕ್ರಿಯೆ ಕೊಡುವಾಗ ಎಚ್ಚರಿಕೆ ವಹಿಸಿ ಎಂದು ಮುಖಮಂತ್ರಿ ಸಿದ್ದರಾಮಯ್ಯ ಅವರು ಸಚಿವರಿಗೆ ಸಲಹೆ ನೀಡಿದ್ದಾರೆ.ಮುಖ್ಯಮಂತ್ರಿಗಳ ಈ ಸಲಹೆಯನ್ನು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್‌ಮತ್ತುಸಚಿವರು ಗಂಭೀರವಾಗಿ ಪರಿಗಣಿಸಿದ್ದಾರೆ. ಇನ್ನು ಮಾಜಿ ಪ್ರಧಾನಿ ದೇವೇಗೌಡರ ಕುಟುಂಬ ಒಕ್ಕಲಿಗ ನಾಯಕರಾಗಿ ಗುರುತಿಸಿಕೊಂಡಿದೆ.ಇದೀಗ, ಹೆಚ್‌ಡಿ ದೇವೇಗೌಡರಮಗ ಮತ್ತು ಮೊಮ್ಮಗ ಇಂತಹ ಪ್ರಕರಣದಲ್ಲಿ ಸಿಲುಕಿಕೊಂಡಿದ್ದು, ಸಹಜವಾಗಿ ಒಕ್ಕಲಿಗ ಸಮಾಜ ಕೂಡ ಮುಜುಗುರ ಪಡುವಂತಾಗಿದೆ. ಅಲ್ಲದೆ, ಹೆಚ್‌ಡಿ ರೇವಣ್ಣ ಮತ್ತು ಪ್ರಜ್ವಲ್ ರೇವಣ್ಣ ಅವರನ್ನು ಈ ಪ್ರಕರಣದಲ್ಲಿ ಸಿಲುಕಿಸುವಲ್ಲಿ ಡಿಕೆಶಿವಕುಮಾರ್ ಅವರಪಾತ್ರವೂ ಇದೆ ಎಂಬ ಆರೋಪ ಕೇಳಿಬಂದಿದೆ. ಇದರಿಂದ ಒಕ್ಕಲಿಗರು ಡಿಕೆ ಶಿವಕುಮಾರ್ ಮೇಲೆ ಮುನಿಸಿಕೊಳ್ಳಲು ಸಾಧ್ಯತೆ ಇದೆ. ಒಂದುವೇಳೆ ಒಕ್ಕಲಿಗರು ಮುನಿಸಿಕೊಂಡರೆ ಕಾಂಗ್ರೆಸ್‌ಗೆ ಹಳೇ ಮೈಸೂರು ಭಾಗದಲ್ಲಿನಷ್ಟವಾಗಲಿದೆ. ಹೀಗಾಗಿ ಪ್ರಕರಣದಿಂದ ಅಂತರ ಕಾಯ್ದುಕೊಳ್ಳವಂತೆ ಡಿಕೆ ಶಿವಕುಮಾರ್ ಅವರಿಗೆ ಒಕ್ಕಲಿಗನಾಯಕರು ಸಲಹೆ ನೀಡಿದ್ದಾರೆ. ಪೆನ್‌ಡ್ರೈವ್ ಕೇಸ್‌ನಲ್ಲಿಮಾತನಾಡದಂತೆಸಲಹೆನೀಡಿದ್ದಾರೆ.

# ಜಾಮೀನು ಸಿಕ್ಕರೂ ರೇವಣ್ಣಗೆ ತಪ್ಪಿಲ್ಲ ಸಂಕಷ್ಟ; ಹೈಕೋರ್ಟ್ ಮೆಟ್ಟಿಲೇರಿದ ಎಸ್‌ಐಟಿ



**ಬೆಂಗಳೂರು:** ಮಹಿಳೆಯ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾಮೀನು ಸಿಕ್ಕರೂ ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರಿಗೆ ಕಾನೂನು ಸಂಕಷ್ಟ ತಪ್ಪಿಲ್ಲ.

ಹೌದು. ಜಾಮೀನು ಪಡೆದು ನಿರಾಳವಾಗಿದ್ದ ಹೆಚ್.ಡಿ ರೇವಣ್ಣಗೆ ವಿಶೇಷ ತನಿಖಾ ತಂಡ ಶಾಕ್ ನೀಡಿದೆ. ಜನಪ್ರತಿನಿಧಿಗಳ ನ್ಯಾಯಾಲಯದ ಜಾಮೀನು ಪ್ರಶ್ನಿಸಿ ಹೈಕೋರ್ಟ್ ಮೊರೆ ಹೋಗಿದೆ. ರೇವಣ್ಣ ಜಾಮೀನು ಆದೇಶ ವಜಾ ಮಾಡುವಂತೆ ಹೈಕೋರ್ಟ್‌ಗೆ ಎಸ್‌ಐಟಿ ಅರ್ಜಿ ಅಲ್ಲಿಸಿದೆ. ಹೈಕೋರ್ಟ್‌ನ ಜನಪ್ರತಿನಿಧಿಗಳ ಪೀಠಕ್ಕೆ ಅರ್ಜಿ ಸಲ್ಲಿಸಿದ ಎಸ್‌ಐಟಿ, ಕೆಳ ನ್ಯಾಯಾಲಯದ ಜಾಮೀನು ಆದೇಶ ರದ್ದು ಮಾಡುವಂತೆ ತಿಳಿಸಿದೆ. ಈ ಹಿನ್ನೆಲೆಯಲ್ಲಿ ಹೈಕೋರ್ಟ್ ನಲ್ಲಿ ನಡೆಯುವ ವಾದ-ಪ್ರತಿವಾದ ತೀವ್ರ ಕುತೂಹಲ ಕೆರಳಿಸಿದೆ. ಎಸ್‌ಐಟಿ ಪರ ಎಸ್‌ಪಿಪಿ ರವಿ ವರ್ಮಕುಮಾರ್ ಹಾಗೂ ರೇವಣ್ಣ ಪರ ಸಿವಿ ನಾಗೇಶ್ ವಾದ ಮಂಡಿಸುವ ಸಾಧ್ಯತೆಗಳಿವೆ. ಇನ್ನು ಎಸ್‌ಐಟಿ ಹೈಕೋರ್ಟ್‌ಗೆ ಸಲ್ಲಿಸಿರುವ ಅರ್ಜಿಗೆ ರೇವಣ್ಣ ಪರ ವಕೀಲರು ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

# ಡಿಕೆಶಿ ಇನ್ನುಮುಂದೆ ಪೆನ್‌ಡ್ರೈವ್ ಬಗ್ಗೆ ಮಾತನಾಡೋದೆ ಬೇಡ



**ಬೆಂಗಳೂರು:** ಡಿಸಿಎಂ ಡಿಕೆ ಶಿವಕುಮಾರ್ ಅವರು ಇನ್ನು ಮುಂದೆ ಪೆನ್‌ಡ್ರೈವ್ ಬಗ್ಗೆ ಮಾತನಾಡೋದೆ ಬೇಡ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಹಾಗೂ ರಾಜ್ಯಸಭಾ ಸದಸ್ಯ ಜಿಸಿ ಚಂದ್ರಶೇಖರ್ ಹೇಳಿದ್ದಾರೆ.

ಈ ಕುರಿತು ಕೆಪಿಸಿಸಿ ಕಚೇರಿಯಲ್ಲಿ ಮಾತನಾಡಿದ ಅವರು, ವಿರೋಧ ಪಕ್ಷದ ನಾಯಕತ್ವ ಅಂದರೆ ಅದು ಮಹತ್ವದ ಸ್ಥಾನ. ಆ ಸ್ಥಾನಕ್ಕೆ ಮೆರುಗು ನೀಡುವ ವ್ಯಕ್ತಿಗಳು ಅಲ್ಲಿ ಕೂರಬೇಕು.ಕೀಳು ದರ್ಜೆಯ ಭಾಷೆ ಉಪಯೋಗಿಸುವುದು ವಿಪಕ್ಷಗಳಿಗೆ ಶೋಭೆ ತರುವುದಿಲ್ಲ. ಸ್ವಲ್ಪ ಹೋಂ ವರ್ಕ್ ಮಾಡಿ ವಿಪಕ್ಷ ನಾಯಕರು ಮಾತನಾಡಬೇಕು.ಕಾಂಗ್ರೆಸ್ ನಾಯಕತ್ವ ಬಲಿಷ್ಠ ನಾಯಕತ್ವ.ಡಿಕೆಶಿ, ಸಿದ್ದರಾಮಯ್ಯ ತರಹದ ನಾಯಕತ್ವ ಬೇರೆಲ್ಲೂ ಇಲ್ಲ. ಅವರು ಏನೇ ಮಾಡಿದರೂ ಸರ್ಕಾರವನ್ನು ಅಲುಗಾಡಿಸುವ ಯೋಗ್ಯತೆಯೇ ಇಲ್ಲ. ಕೆಲವು ಬಾರಿ ಆರ್.ಅಶೋಕ್ ಮಾತನಾಡುವುದನ್ನು ನೋಡಿದರೆ ಇವರಿಗಿಂತ ಸಿಟಿ ರವಿಯೇ ಬೆಸ್ಟ್‌ಅನಿಸುತ್ತದೆ ಎಂದರು.

ಸಿಟಿ ರವಿ ಕೂಡ ಕೆಲವೊಮ್ಮೆ ಅಶ್ಲೀಲವಾಗಿ ಮಾತನಾಡುತ್ತಾರೆ.ಆದರೆ ಅಶೋಕ್‌ಗಿಂತ ಸಿ.ಟಿ ರವಿಯೇ ಬೆಸ್ಟ್ ಅನಿಸುತ್ತದೆ.ಕುಮಾರಸ್ವಾಮಿ ಇಡೀ ತನಿಖೆಯೇ ಹಳ್ಳ ಹಿಡಿಯುವಂತೆ ಮಾತನಾಡುತ್ತಿದ್ದಾರೆ.ಇವರು ಹೇಳಿದ ಹಾಗೇ ಎಸ್‌ಐಟಿ ನಡೆಯಬೇಕು.ಇವರು ಹೇಳಿದ ಹಾಗೆ ತನಿಖೆ ನಡೆಯಬೇಕು.ಯಾರು ಯಾರನ್ನೂ ಕೆಣಕಿಲ್ಲ. ಕುಮಾರಸ್ವಾಮಿ ಅವರೇ ದೇವೇಗೌಡರಿಗೆ ನೋವಾಗಿದೆ ಎಂಬುದು ಕಾಂಗ್ರೆಸ್ ನಾಯಕರಿಗೂ ಗೊತ್ತಿದೆ.ದೇವೇಗೌಡರ ಮೇಲೆ ನಮಗೆ ಅಪಾರ ಗೌರವವಿದೆ.ಡಿಕೆ ಶಿವಕುಮಾರ್ ಅವರಿಗೆ ನಾವು ಕೇಳಿಕೊಳ್ಳೋದು ಇಷ್ಟೇ. ಇನ್ನು ಮುಂದೆ ಪೆನ್ ಡ್ರೈವ್ ವಿಚಾರದಲ್ಲಿ ಮಾತೇ ಆಡಬೇಡಿ ಎಂದು ಮನವಿ ಮಾಡಿದರು. ದೇವೇಗೌಡರ ಕುಟುಂಬದ ಬಗ್ಗೆ ಗೌರವವಿದೆ. ಯಾವ ರಾಜಕಾರಣಿ ಕೂಡ ಕುಟುಂಬದಲ್ಲಿ ಈ ರೀತಿ ನಡೆಯಬೇಕು ಎಂದು ಭಾವಿಸುವುದಿಲ್ಲ. ಕುಮಾರಸ್ವಾಮಿ ಅವರು ಪ್ರಕರಣವನ್ನು ನೆಲ ಕಚ್ಚಿಸುತ್ತಿದ್ದಾರೆ.ಎರಡು ಬಾರಿ ಸಿಎಂ ಆಗಿದ್ದವರು ನೀವು.ಇವರು ಹೇಳಿದ ಹಾಗೇ ನಡೆಯಬೇಕು.ಎಸ್‌ಐಟಿ ತನಿಖೆ ಆಗಬೇಕಾ?ಸರ್ ದಯವಿಟ್ಟು ಈ ಪ್ರಕರಣದಲ್ಲಿ ಯಾರು ರಿಯಾಕ್ಟ್ ಮಾಡಬೇಡಿ.ಸರ್ಕಾರ ಅದರ ಪಾಡಿಗೆ ಅದು ನಡೆಯುತ್ತಿದೆ.ಸರ್ಕಾರದ ಸಾಧನೆಗಳ ಬಗ್ಗೆ ಮಾತನಾಡೋಣ.ಯಾರು ಯಾರನ್ನೂ ಕೆಣಕಿಲ್ಲ ಕುಮಾರಸ್ವಾಮಿ ಅವರೇ ಎಂದು ತಿರುಗೇಟು ನೀಡಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com